24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 100 | ನವದೆಹಲಿ | ಬೆಲೆ ₹ 10 | ಅಕ್ಟೋಬರ್ 5 2026 ಸೋಮವಾರ

## ಒಳಪುಟಗಳಲ್ಲಿ

174 ಜನರ ಜೀವ ಉಳಿಸಿದ ಭಾರತೀಯ ಪೈಲಟ್ ಸ್ಮಿತ್‌ಗೆ ಇಸ್ರೇಲ್‌ನಿಂದ ಉನ್ನತ ಗೌರವ- ಪು.4

ಹಳ್ಳಿಕಾರ್ ಸಮುದಾಯಕ್ಕೆ ಸೂಕ್ತ ಸ್ಥಾನಮಾನ ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ: ಡಾ.ಜಿ.ಪರಮೇಶ್ವರ ಭರವಸೆ - ಪು.5

ರಂಗಭೂಮಿ ಮುಂದಿನ ತಲೆಮಾರಿಗೂ ತಲುಪಲಿ: ಎಸ್.ಎಂ. ಜನವಾಡಕರ್ - ಪು.6

# ಉದ್ಯೋಗಿಗಳಾಗದೇ ಉದ್ಯಮಿಗಳಾಗಿ, ನಿಮ್ಮ ಊರಿನಲ್ಲಿ ನೀವೇ ಉದ್ಯಮ ಆರಂಭಿಸಿ: ಸಿಎಂ

**ಕೊಡಗು ಜಿಲ್ಲೆ ಶೌರ್ಯ, ಸಾಂಸ್ಕೃತಿಕ, ಧಾರ್ಮಿಕ ಕ್ಷೇತ್ರದಲ್ಲಿ ಇತಿಹಾಸ ಹೊಂದಿದೆ**

**ಪೊನ್ನಣ್ಣ ಹಾಗೂ ಮಂಥರ್ ಗೌಡ ಕೊಡಗಿನ ಎರಡು ಕಣ್ಣುಗಳಿದ್ದಂತೆ, ಕಾಪಾಡಿಕೊಳ್ಳಿ**





**ಬೆಂಗಳೂರು, ಅ.04:** ಕರಾವಳಿ ಹಾಗೂ ಮಲೆನಾಡಿನ ಜನರು ಉದ್ಯೋಗಕ್ಕಾಗಿ ಬೇರೆ ಕಡೆ ಹೋಗುವುದಕ್ಕಿಂತ, ನಿಮ್ಮಲ್ಲಿರುವ ಪ್ರಾಕೃತಿಕ ಸಂಪತ್ತನ್ನು ಬಳಸಿಕೊಂಡು ನಿಮ್ಮ ಊರುಗಳಲ್ಲೇ ಉದ್ಯಮಗಳನ್ನು ಆರಂಭಿಸಿ. ನಿಮಗೆ ಶಕ್ತಿ ತುಂಬುವ ಉದ್ದೇಶದಿಂದ ಕಾಂಗ್ರೆಸ್ ಸರ್ಕಾರ ಕರಾವಳಿ ಹಾಗೂ ಮಲೆನಾಡು ಪ್ರವಾಸೋದ್ಯಮ ನೀತಿ ರೂಪಿಸಿದೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ಅವರು ಕರೆ ನೀಡಿದ್ದಾರೆ. ಬೆಂಗಳೂರಿನ ಉಳ್ಳಾಲದಲ್ಲಿರುವ ಕೊಡಗು ಗೌಡ ಸಮಾಜದ ಸಭಾಂಗಣದಲ್ಲಿ ಭಾನುವಾರ ನಡೆದ ಕೈಲ್ ಮುಹೂರ್ತ ಜಂಬರ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಮಾತನಾಡಿದರು.

ನೀವೆಲ್ಲರೂ ಕೊಡಗಿನಿಂದ ಬಂದು ಬೆಂಗಳೂರಿನಲ್ಲಿ ವಾಸಿಸುತ್ತಿದ್ದೀರಿ. ನೀವು ನಿಮ್ಮ ಮೂಲ ಮರೆತರೆ ಯಶಸ್ಸು ಸಿಗುವುದಿಲ್ಲ. ಮರಕ್ಕೆ ಬೇರು ಎಷ್ಟು ಮುಖ್ಯವೋ, ಮನುಷ್ಯನಿಗೆ ನಂಬಿಕೆ ಮುಖ್ಯ. ನಿಮ್ಮ ಸಂಸ್ಕೃತಿ, ಊರು, ಪರಂಪರೆ, ಸಮಾಜ ಎಲ್ಲವನ್ನು ಒಗ್ಗೂಡಿಸಿ ಇಲ್ಲಿ ಇಂತಹ ಭವ್ಯ ಕಟ್ಟ ನಿರ್ಮಿಸಿ, ನೀವೆಲ್ಲರೂ ಸೇರುತ್ತಿರುವುದು ಬಹಳ ಸಂತೋಷ ತಂದಿದೆ. ಇದಕ್ಕೆ ಶ್ರಮಿಸಿ, ಪ್ರೋತ್ಸಾಹ ನೀಡುತ್ತಿರುವವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

**ಕೊಡಗು ಶೌರ್ಯ, ಸಾಂಸ್ಕೃತಿಕ, ಧಾರ್ಮಿಕ ಕ್ಷೇತ್ರದಲ್ಲಿ ಇತಿಹಾಸ ಹೊಂದಿದೆ**

ಕೊಡಗು ಶೌರ್ಯ, ಸಾಂಸ್ಕೃತಿಕ, ಧಾರ್ಮಿಕ ಕ್ಷೇತ್ರದಲ್ಲಿ ಇತಿಹಾಸ ಹೊಂದಿದೆ. ಪ್ರತಿ ಮನೆಯಲ್ಲಿ ವೀರರನ್ನು ತಯಾರು ಮಾಡಿರುವ ಇತಿಹಾಸವನ್ನು ಮರೆಯಲು ಸಾಧ್ಯವಿಲ್ಲ. ನಮ್ಮೆಲ್ಲರ ತಾಯಿ ಕಾವೇರಿ ಇಲ್ಲೇ ಹುಟ್ಟಿ, ಪಾಂಡಿಚೆರಿವರೆಗೂ ಈ ತಾಯಿ ಮೇಲೆ ಅವಲಂಬಿತವಾಗಿದ್ದೇವೆ. ಈ ಬಾರಿ ಭೀಕರ ಬರಗಾಲವಾಗಿದೆ. ಮಲೆನಾಡಿನಲ್ಲೇ ಈ ವರ್ಷ ಮಳೆ ಇಲ್ಲವಾಗಿದೆ. ಕೆರೆ, ಕೆಆರ್‌ಎಸ್ ಅಣೆಕಟ್ಟು ತುಂಬುತ್ತದೆ ಎಂದು ಕಾತುರದಿಂದ ಕಾಯುತ್ತಿದ್ದೇನೆ ಎಂದು ತಿಳಿಸಿದರು. ನಾನು ಪ್ರತಿವರ್ಷ ಕಾವೇರಿ ಆರತಿ ನಡೆಸಲು ತೀರ್ಮಾನಿಸಿದ್ದು, ದಸರಾ ಸಂದರ್ಭದಲ್ಲಿ ಈ ಬಾರಿಯೂ ಆಚರಿಸಲು ನಿರ್ದೇಶನ ನೀಡಲಾಗಿದೆ. ಕೊಡಗು ಜಿಲ್ಲೆ ಕರ್ನಾಟಕದ ಕಾಶ್ಮೀರ. ಇಡೀ ವಿಶ್ವ ಈ ಭಾಗಕ್ಕೆ ಆಕರ್ಷಿತವಾಗಿದೆ. ನಿಮ್ಮ ಪರಂಪರೆ ಉಳಿಸಿಕೊಳ್ಳಿ. ಇದು ಮನುಷ್ಯತ್ವದ ದೊಡ್ಡ ಗುಣ. ನನ್ನದೇ ಆದ ಅನುಭವದಲ್ಲಿ ಹಳ್ಳಿಯಿಂದ ನಗರಕ್ಕೆ ವಲಸೆ ಬರುವವರು ಶಿಕ್ಷಣ, ವಿದ್ಯಾಭ್ಯಾಸ ಹಾಗೂ ಬದುಕಿಗೆ. ಹಳ್ಳಿಗಳಲ್ಲೇ ಶಿಕ್ಷಣ ಹಾಗೂ ಉದ್ಯೋಗ ಸಿಕ್ಕಿದ್ದರೆ ನೀವು ಇಲ್ಲಿಗೆ ಬರುತ್ತಿರಲಿಲ್ಲ. ನೀವು ಸಂಘಟಿತರಾಗಿ ಹಳ್ಳಿ ಜನರಿಗೆ ಒಳ್ಳೆಯದಾಗಬೇಕು ಎಂದು ಪ್ರಯತ್ನಿಸುತ್ತಿದ್ದು, ನನಗೆ ಅನೇಕ ಬೇಡಿಕೆ ಇಟ್ಟಿದ್ದೀರಿ ಎಂದು ಸಿಎಂ ನುಡಿದರು.

**ಮಂಗಳೂರಿನಲ್ಲಿ ಉದ್ಯಮಿಗಳೊಂದಿಗೆ ಸದ್ಯದಲ್ಲೇ ಸಭೆ**

ನಾನು ಮತ್ತೆ ಮಂಗಳೂರಿಗೆ ಹೋಗಿ, ಎಲ್ಲ ಉದ್ಯಮಿಗಳ ಜತೆ ಚರ್ಚೆ ಮಾಡುತ್ತೇವೆ. ನಿಮಗೂ ಆಹ್ವಾನ ನೀಡುತ್ತೇನೆ. ನೀವು ಭಾಗವಹಿಸಿ. ಹೊರಗಿನವರು ಇಲ್ಲಿ ಬಂದು ಉದ್ಯಮ ಆರಂಭಿಸುವುದಕ್ಕಿಂತ, ನೀವೇ ಉದ್ಯಮ ಆರಂಭಿಸಿ, ಆಸ್ತಿಯನ್ನಾಗಿ ಮಾಡಿ. ಇದಕ್ಕೆ ಶಕ್ತಿ ತುಂಬುವ ಪ್ರಯತ್ನ ಮಾಡುತ್ತಿದ್ದೇನೆ ಎಂದು ಮಾಹಿತಿ ನೀಡಿದರು.

**ಪೊನ್ನಣ್ಣ ಹಾಗೂ ಮಂಥರ್ ಗೌಡ ಕೊಡಗಿನ ಎರಡು ಕಣ್ಣುಗಳಿದ್ದಂತೆ, ಕಾಪಾಡಿಕೊಳ್ಳಿ**

ನನ್ನ ಬಗ್ಗೆ ವಿಶೇಷ ಅಭಿಮಾನ ಇಟ್ಟುಕೊಂಡಿದ್ದು, ನಾನು ಜಾತಿಗಿಂತ ನೀತಿ ಮೇಲೆ ವಿಶ್ವಾಸವಿಟ್ಟು ಎಲ್ಲರನ್ನು ಒಟ್ಟಾಗಿ ಕರೆದುಕೊಂಡು ಹೋಗುತ್ತೇನೆ. ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ. ನಾವು ಮಾನವೀಯತೆಯಿಂದ ಯಾರ ಮನಸ್ಸಿಗೂ ನೋವಾಗದಂತೆ ನಮ್ಮ ರಾಷ್ಟ್ರಕವಿ ಕುವೆಂಪು ಅವರು ನಾಡ ಗೀತೆಯಲ್ಲಿ ನೀಡಿರುವ ಸಂದೇಶವನ್ನು ನಾವು ಪಾಲಿಸಬೇಕು. ದೇಶದ ಐಕ್ಯತೆ, ಸಮಗ್ರತೆ, ಶಾಂತಿಗಾಗಿ ಬದುಕು ಕಟ್ಟಿಕೊಳ್ಳುತ್ತಿದ್ದೇವೆ. ಇದಕ್ಕೆ ನಾವು ನೀವು ಒಟ್ಟಾಗಿ ಕೆಲಸ ಮಾಡೋಣ. ಮೈಸೂರಿನವರು ಜಾಗದ ಬಗ್ಗೆ ಮನವಿ ನೀಡಿದ್ದು, ಈ ವಿಚಾರವನ್ನು ಸಚಿವ ಸಂಪುಟದಲ್ಲಿ ಮಂಡಿಸುವಂತೆ ಪೊನ್ನಣ್ಣ ಹಾಗೂ ಮಂಥರ್‌ಗೌಡ ಅವರಿಗೆ ತಿಳಿಸಿರುವೆ. ನನ್ನ ಕೈಯಲ್ಲಿ ಸಾಧ್ಯವಾದ ನೆರವು ನೀಡುತ್ತೇನೆ. ಉಳಿದ ಬೇಡಿಕೆಗಳನ್ನು ಪರಿಶೀಲಿಸಿ ಸಹಾಯ ಮಾಡಲಾಗುವುದು ಎಂದು ಭರವಸೆ ನೀಡಿದರು.

ನಾನು ಕಷ್ಟಕಾಲದಲ್ಲಿದ್ದಾಗ ನೀವೆಲ್ಲರೂ ನನ್ನ ಬೆಂಬಲವಾಗಿ ನಿಂತು ಪ್ರಾರ್ಥನೆ, ಹೋರಾಟ ಮಾಡಿದ್ದೀರಿ. ಪ್ರಯತ್ನ ವಿಫಲವಾದರೂ ಪ್ರಾರ್ಥನೆ ವಿಫಲವಾಗುವುದಿಲ್ಲ ಎಂದು ನಾನು ಹೇಳಿದ್ದೆ. ನೀವೆಲ್ಲರೂ ಈ ಡಿ.ಕೆ.ಶಿವಕುಮಾರ್ ಇನ್ನಷ್ಟು ಸುದೀರ್ಘ ಕಾಲ ಇದ್ದು ರಾಜ್ಯಕ್ಕೆ ಸೇವೆ ಮಾಡಬೇಕು ಎಂದು ನೀವು ಆಶಯ ವ್ಯಕ್ತಪಡಿಸಿದ್ದೀರಿ. ನಿಮ್ಮ ಭಾವನೆ, ಚಿಂತನೆ, ಗೌರವಕ್ಕೆ ಧಕ್ಕೆ ಬಾರದಂತೆ ನಾನು ಆಡಳಿತ ನಡೆಸುವೆ. ಈ ಡಿ.ಕೆ.ಶಿವಕುಮಾರ್ ನಿಮ್ಮ ಮನೆ ಮಗ. ನಿಮ್ಮ ಮಕ್ಕಳನ್ನು ಕಾಪಾಡುವಂತೆ ನನ್ನನ್ನು ಕಾಪಾಡಿ.

ಇಬ್ಬರು ಶಾಸಕರು ಇದ್ದಾರೆ. ಮಂಥರ್ ಗೌಡ ಹಾಗೂ ಪೊನ್ನಣ್ಣ ಅವರು ಕೊಡಗು ಜಿಲ್ಲೆಯ ಎರಡು ಕಣ್ಣುಗಳಿದ್ದಂತೆ. ಅವರಿಗೂ ಶಕ್ತಿ ನೀಡಿ. ಇವರು ಕ್ರಿಯಾಶೀಲ ಶಾಸಕರು. ಯುವಕರು, ಪ್ರಾಮಾಣಿಕತೆಯಿಂದ ಕೆಲಸ ಮಾಡುತ್ತಿದ್ದಾರೆ. ಇವರು ಬೆಳವಣಿಗೆ ಕಾಣುತ್ತಿದ್ದಾರೆ ಎಂದು ಕೆಲವರು ಅಸೂಯೆ ಪಡುತ್ತಾರೆ. ಅಸೂಯೆಗೆ ಮದ್ದಿಲ್ಲ.



ಶಕ್ತಿಶಾಲಿಯಾಗಿರುವವರು ಚೆನ್ನಾಗಿ ಕೆಲಸ ಮಾಡುವವರಿಗೆ ಟೀಕೆಗಳು, ಶತ್ರುಗಳು ಇರುತ್ತಾರೆ ಎಂದು ತಿಳಿಸಿದರು.

**ನಿಮ್ಮ ಮತದಾನದ ಹಕ್ಕು ಉಳಿಸಿಕೊಳ್ಳಿ**

ನಾವು ಹೆಚ್ಚು ಬಲಿಷ್ಠವಾಗಿದ್ದರೆ, ಹೆಚ್ಚು ಶತ್ರುಗಳು, ಕಡಿಮೆ ಬಲಿಷ್ಠರಾಗಿದ್ದರೆ, ಕಡಿಮೆ ಶತ್ರುಗಳು, ಬಲಿಷ್ಠರಲ್ಲದೇ ಇದ್ದರೆ ಶತ್ರುಗಳೇ ಇರುವುದಿಲ್ಲ. ಯಾರು ಕ್ರಿಯಾಶೀಲವಾಗಿ ಕೆಲಸ ಮಾಡುತ್ತಾರೆ ಅವರ ಬಗ್ಗೆ ಅಸೂಯೆ ಇರುತ್ತದೆ. ಹೀಗಾಗಿ ನೀವು ಈ ಇಬ್ಬರು ಶಾಸಕರನ್ನು ಉಳಿಸಿ ಕೊಳ್ಳಬೇಕು. ಅವರನ್ನು ಉಳಿಸಿಕೊಂಡರೆ ನನ್ನನ್ನು ಉಳಿಸಿಕೊಂಡಂತೆ. ನನಗೆ ಶಕ್ತಿ ನೀಡಿದಂತೆ. ನೀವು ನಿಮ್ಮ ಮತಗಳನ್ನು ಕಾಪಾಡಿಕೊಳ್ಳಿ. ನೀವೇ ನೋಡುತ್ತಿದ್ದೀರಿ. ನಿಮ್ಮ ಮತದಾನದ ಹಕ್ಕು ರಕ್ಷಿಸಲು ನಾವು ಹಗಲು-ರಾತ್ರಿ ಹೋರಾಟ ಮಾಡುತ್ತಿದ್ದೇವೆ. ಈಗ ಚುನಾವಣಾ ಆಯೋಗದವರು ಅನಾವಶ್ಯಕವಾಗಿ ಯಾರ ಹೆಸರನ್ನು ಮತಪಟ್ಟಿಯಿಂದ ತೆಗೆಯಬಾರದು ಎಂದು ನಿರ್ದೇಶನ ನೀಡಿದೆ. ಒಂದಕ್ಕಿಂತ ಹೆಚ್ಚು ಮತ ಹೊಂದಿರುವವರು, ಮೃತಪಟ್ಟಿರುವವರ ಹೆಸರನ್ನು ಪರಿಷ್ಕರಣೆ ಮಾಡಲಿ. ನ್ಯಾಯಬದ್ಧವಾದ ಅರ್ಹ ಮತದಾರರ ಹಕ್ಕನ್ನು ಉಳಿಸಬೇಕು. ಮತದಾನದ ಹಕ್ಕು ಎಂದರೆ ಬದುಕಿನ ಹಕ್ಕು. ಸಂವಿಧಾನ ನೀಡಿರುವ ಶಕ್ತಿ ಎಂದರು

**ಈ ಬಾರಿ ವಿಭಿನ್ನವಾಗಿ ದಸರಾ ಆಚರಣೆ**

ನೀವು ಬಹಳ ಸಂತೋಷದಿಂದ ಆಯುಧ ಪೂಜೆ ನಡೆಸಿದ್ದು, ಕೊಡಗಿನ ಇತಿಹಾಸ, ಗೌಡರ ಪರಂಪರೆಗೆ ನೀಡಬೇಕಾದ ಗೌರವ ನೀಡುತ್ತೇವೆ. ಕೃಷಿ ಹಾಗೂ ಸಾಂಸ್ಕೃತಿಕ ಆಚರಣೆಯನ್ನು ಉಳಿಸಿಕೊಂಡು ಹೋಗುತ್ತಿದ್ದೀರಿ. ನಮ್ಮ ಸಂಸ್ಕೃತಿ ದೇಶದ ಆಸ್ತಿ. ಈ ಬಾರಿ ದಸರಾವನ್ನು ವಿಭಿನ್ನವಾಗಿ ಆಚರಿಸಲು ಪ್ರಯತ್ನಿಸುತ್ತಿದ್ದು, ದೇಶಕ್ಕೆ ಕೊಡುಗೆ ನೀಡಿರುವ ಯೋಧರಿಗೆ ದಸರಾ ಮೆರವಣಿಗೆಯಲ್ಲಿ ಭೂಸೇನೆ, ವಾಯುಪಡೆ ಹಾಗೂ ನೌಕಾಪಡೆಯ ಯೋಧರು ಭಾಗವಹಿಸಬೇಕು. ನಮ್ಮ ವಿವಿಧ ಭಾಗಗಳ ಕಲಾವಿದರು, ಸಿನಿಮಾ ರಂಗದವರು, ಎಲ್ಲಾ ಸಮುದಾಯದವರು ಇರಬೇಕು ಎಂದು ಬದಲಾವಣೆ ತಂದು ಶಿಸ್ತಿನಿಂದ ಕಾರ್ಯಕ್ರಮ ಆಚರಣೆಗೆ ಮುಂದಾಗಿದ್ದೇವೆ ಎಂದು ತಿಳಿಸಿದರು.

**ನಾನು ನಿಮ್ಮ ಜತೆ ಇದ್ದೇನೆ, ನೀವು ನಮ್ಮ ಜತೆ ಇರಿ**

ಮಹಾರಾಜರ ಕಾಲದಲ್ಲಿ ಆರಂಭವಾಗಿ ನಡೆದುಕೊಂಡು ಬಂದ ಈ ಪರಂಪರೆಗೆ ಅನೇಕ ರಾಷ್ಟ್ರಗಳ ರಾಯಭಾರಿಗಳು, ಬೇರೆ ರಾಜ್ಯಗಳ ಮುಖ್ಯಮಂತ್ರಿಗಳನ್ನು ಆಹ್ವಾನಿಸಲಾಗಿದೆ. ಮೆರವಣಿಗೆಯಲ್ಲಿ ನಿಮ್ಮ ಸಂಪ್ರದಾಯ ಹಾಗೂ ಸಂಸ್ಕೃತಿಗೂ ಅವಕಾಶ ಕಲ್ಪಿಸಲಾಗಿದೆ. ಈ ಡಿ.ಕೆ.ಶಿವಕುಮಾರ್ ಎಲ್ಲಾ ಸಂದರ್ಭದಲ್ಲಿ ನಿಮ್ಮ ಜತೆ ಇರುತ್ತಾನೆ. ನಿಮಗೆ ಒಳ್ಳೆಯದಾಗಲಿ. ನಾನು ನಿಮ್ಮ ಜತೆ ಇದ್ದೇನೆ, ನೀವು ನಮ್ಮ ಜತೆ ಇರಿ ಎಂದು ಕರೆ ನೀಡಿದರು.

## ನಿಮ್ಮ ಊರುಗಳಲ್ಲೇ ಉದ್ಯಮ ಕಟ್ಟಿಕೊಳ್ಳಿ



ನಾವು ಇತ್ತೀಚೆಗೆ ಮಂಗಳೂರಿನಲ್ಲಿ ವಿಶೇಷ ಸಚಿವ ಸಂಪುಟ ಸಭೆ ನಡೆಸಿದೆ. ಅಲ್ಲಿ ಮಲೆನಾಡು ಹಾಗೂ ಕರಾವಳಿ ಭಾಗದ ಪ್ರವಾಸೋದ್ಯಮಕ್ಕೆ ಪ್ರತ್ಯೇಕ ನೀತಿ ರೂಪಿಸಲಾಗಿದೆ. ಈ ಭಾಗದ ಜನರ ಪ್ರತಿಭೆ ಗುರುತಿಸುವಂತಾಗಬೇಕು. ಈ ಜಿಲ್ಲೆಯ ಜನ ಕ್ರೀಡೆ, ರಕ್ಷಣಾ ಕ್ಷೇತ್ರದಲ್ಲಿ ಹೆಜ್ಜೆಗುರುತು ಮೂಡಿಸಿದ್ದಾರೆ. ಕರಾವಳಿ ಭಾಗದಲ್ಲಿ ಶಿಕ್ಷಣ ಸಂಸ್ಥೆಗಳು,. ಬ್ಯಾಂಕುಗಳು ನಿರ್ಮಾಣವಾಗಿದೆ. ಈಗ ಅವುಗಳು ನಶಿಸಿವೆ. ಇವುಗಳನ್ನು ಕಾಪಾಡುವುದು ನಮ್ಮ ಕರ್ತವ್ಯ. 327 ಕಿ.ಮೀ ಉದ್ದದ ಕರಾವಳಿ ಭಾಗವನ್ನು ಗೋವಾ ಹಾಗೂ ಕೇರಳದಂತೆ ಪ್ರವಾಸೋದ್ಯಮಕ್ಕೆ ಬಳಸಿದಂತೆ ಬಳಸಲು ತೀರ್ಮಾನಿಸಲಾಗಿದೆ ಎಂದರು.

ಮಂಗಳೂರು, ಉಡುಪಿ, ಕಾರವಾರ ನೋಡಿದರೆ ಒಂದು ಪಂಚತಾರಾ ಹೋಟೆಲ್ ಇಲ್ಲ. ಇದು ಯಾಕೆ ಎಂದು ರಾಜಕಾರಣದ ಬಗ್ಗೆ ಮಾತನಾಡಲು ಬಯಸುವುದಿಲ್ಲ. ನಮ್ಮ ಅವಧಿಯಲ್ಲಿ ಏನಾದರೂ ಕೊಡುಗೆ ಬಿಟ್ಟುಹೋಗಬೇಕು ಎಂಬುದು ನಮ್ಮ ಬಯಕೆ. ನಾವು ರಾಜಕಾರಣದಲ್ಲಿ ಶಾಶ್ವತವಲ್ಲ. ದೇವರು ವರ, ಶಾಪ ನೀಡುವುದಿಲ್ಲ. ಕೇವಲ ಅವಕಾಶ ನೀಡುತ್ತಾನೆ. ಸಿಕ್ಕ ಅವಕಾಶದಲ್ಲಿ ನಾವು ಏನು ಮಾಡುತ್ತೇವೆ ಎಂಬುದು ಮುಖ್ಯ ಎಂದು ತಿಳಿಸಿದರು. ತಿರುಪತಿ ದೇವಾಲಯ ಟ್ರಸ್ಟ್ ನವರು ನಮಗೆ ಜಾಗ ಕೊಡಿ ಒಳ್ಳೆಯ ದೇವಾಲಯ ನಿರ್ಮಿಸುತ್ತೇವೆ ಎಂದರು. ಅದಕ್ಕಾಗಿ ಮಂಗಳೂರಿನಲ್ಲಿ 10 ಎಕರೆ ಜಾಗವನ್ನು ಟಿಟಿಡಿ ಮಂಡಳಿಯವರಿಗೆ ನೀಡಲು ಸಚಿವ ಸಂಪುಟದಲ್ಲಿ ತೀರ್ಮಾನಿಸಲಾಗಿದೆ. ಆ ಭಾಗದಲ್ಲಿ ಕುಕ್ಕೆ ಸುಬ್ರಮಣ್ಯ, ಕೊಲ್ಲೂರು ಮೂಕಾಂಬಿಕೆ, ಕಟೀಲು, ಧರ್ಮಸ್ಥಳ ದೇವಾಲಯಗಳಿವೆ. ಅವುಗಳ ಜತೆಗೆ ತಿರುಪತಿಗೆ ತೆರಳಲು ಆಗದವರು ವೆಂಕಟರಮಣ ದೇವಾಲಯಕ್ಕೆ ಹೋಗಲು ಅನುಕೂಲವಾಗಲಿ ಎಂದು ಈ ತೀರ್ಮಾನ ಮಾಡಲಾಗಿದೆ ಎಂದು ಹೇಳಿದರು.

ತುಳು ಭಾಷೆ ಬಗ್ಗೆ ನಮ್ಮ ತೀರ್ಮಾನವನ್ನು ವಿಶ್ವದಲ್ಲೇ ಚರ್ಚೆಯಾಗಿದೆ. ಅದು ಸ್ವಾಭಿಮಾನದ ಸಂಕೇತ. ಕರಾವಳಿ ಹಾಗೂ ಮಲೆನಾಡು ಸೇರಿ ವಿಶೇಷ ಪ್ರವಾಸೋದ್ಯಮ ನೀತಿ ರೂಪಿಸಿದ್ದೇವೆ. ಈ ಭಾಗದ ಜನ ಉದ್ಯೋಗಕ್ಕೆ ಹೊರಗೆ ಹೋಗುವುದಕ್ಕಿಂತ ನಿಮ್ಮ ಊರಿನಲ್ಲೇ ಮನೆ ಬಾಗಿಲಲ್ಲಿ ಉದ್ಯಮ ಕಟ್ಟಿಕೊಳ್ಳಲು ಅನುಕೂಲವಾಗಬೇಕು. ನೀವು ಉದ್ಯೋಗಿಗಳಾಗುವುದಕ್ಕಿಂತ, ಉದ್ಯಮಿಗಳಾಗಬೇಕು ಎಂದು ಈ ತೀರ್ಮಾನಕ್ಕೆ ಬಂದಿದ್ದೇವೆ. ನಿಮ್ಮ ಕಾಫಿ, ಮಸಾಲೆ ಪ್ರದಾರ್ಥ, ಸಂಸ್ಕೃತಿ ಅಳಿಸಲು ಯಾರಿಂದಲೂ ಸಾಧ್ಯವಿಲ್ಲ. ಇದನ್ನು ಉಳಿಸಲು ಈ ಪ್ರವಾಸೋದ್ಯಮ ನೀತಿಯಲ್ಲಿ ಈ ಭಾಗದಲ್ಲಿ ಮೂಲಸೌಕರ್ಯ ನೀತಿ ಮಾಡಿದ್ದು, ಈ ಭಾಗದಲ್ಲಿ ಪ್ರವಾಸೋದ್ಯಮಕ್ಕೆ ಸಂಬಂಧಿಸಿದಂತೆ ಉದ್ಯಮ ಆರಂಭಿಸಿದರೆ, ಬ್ಯಾಂಕ್ ಗಳಲ್ಲಿ ನೀಡುವ 5-6 ವರ್ಷಗಳ ಸಾಲವನ್ನು, 20 ವರ್ಷಗಳ ವರೆಗೆ ವಿಸ್ತರಿಸಲು ಅವಕಾಶ ಕಲ್ಪಿಸಲಾಗಿದೆ. ಉದ್ಯಮ ಆರಂಭಿಸುವರಿಗೆ ಆರ್ಥಿಕ ಶಕ್ತಿ ನೀಡಬೇಕು ಎಂದು ವಿವರಿಸಿದರು.

## ನಗೋಯಾದಲ್ಲಿ 20ನೇ ಏಷ್ಯನ್ ಕ್ರೀಡಾಕೂಟಕ್ಕೆ ಅದ್ದೂರಿ ತೆರೆ




**ನಗೋಯಾ (ಜಪಾನ್), ಅ. 4:** ಎರಡು ವಾರಗಳ ಕಾಲ ನಡೆದ ಐಚಿ-ನಗೋಯಾ ಏಷ್ಯನ್ ಕ್ರೀಡಾ ಕೂಟವು ಭಾನುವಾರ ಮುಕ್ತಾಯ ಗೊಂಡಿತು. ಈ ಕೂಟದಲ್ಲಿ ಭಾರತ 21 ಚಿನ್ನ, 27 ಬೆಳ್ಳಿ ಮತ್ತು 37 ಕಂಚು ಸೇರಿದಂತೆ 85 ಪದಕಗಳೊಂದಿಗೆ 4ನೇ ಸ್ಥಾನ ಗಳಿಸಿತು. ಚೀನಾ ಸತತ 12ನೇ ಬಾರಿಗೆ ಅತಿ ಹೆಚ್ಚು ಚಿನ್ನದ ಪದಕಗಳನ್ನು ಗೆದ್ದು ಅಗ್ರಸ್ಥಾನ ಕಾಯ್ದುಕೊಂಡಿತು. ಚೀನಾ ಒಟ್ಟು 169 ಚಿನ್ನ, 89 ಬೆಳ್ಳಿ ಮತ್ತು 83 ಕಂಚಿನ ಪದಕಗಳನ್ನು ಪಡೆಯುವ ಮೂಲಕ, ವಿದೇಶದಲ್ಲಿ ನಡೆದ ಏಷ್ಯನ್ ಕ್ರೀಡಾಕೂಟವೊಂದರಲ್ಲಿ ತನ್ನ ಅತ್ಯುತ್ತಮ ಸಾಧನೆಯನ್ನು ದಾಖಲಿಸಿತು. 83 ಚಿನ್ನ, 95 ಬೆಳ್ಳಿ ಮತ್ತು 91 ಕಂಚಿನ ಪದಕಗಳೊಂದಿಗೆ ಜಪಾನ್ ಎರಡನೇ ಸ್ಥಾನ ಪಡೆದರೆ, 39 ಚಿನ್ನ, 43 ಬೆಳ್ಳಿ ಮತ್ತು 68 ಕಂಚಿನ ಪದಕಗಳೊಂದಿಗೆ ದಕ್ಷಿಣ ಕೊರಿಯಾ ನಂತರದ ಸ್ಥಾನವನ್ನು ಪಡೆಯಿತು.

ಥೈಲ್ಯಾಂಡ್‌ನ ಓಟಗಾರ ಪುರಿಪೋಲ್ ಬೂನ್ಸನ್ ಮತ್ತು ಚೀನಾದ ಈಜುಗಾರ್ತಿ ಯುಜಿಡಿ ಅವರನ್ನು ಕ್ರೀಡಾಕೂಟದ ಕ್ರಮವಾಗಿ ಪುರುಷ ಮತ್ತು ಮಹಿಳಾ ವಿಭಾಗದ ಅತ್ಯಮೂಲ್ಯ ಆಟಗಾರರು' ಎಂದು ಘೋಷಿಸಲಾಯಿತು.

## ದಸರಾ ಮಹೋತ್ಸವ ಉದ್ಘಾಟನೆ: ಗವಿಸಿದ್ದೇಶ್ವರ ಶ್ರೀಗಳಿಗೆ ಮೈಸೂರು ಜಿಲ್ಲಾಡಳಿತ ಆಹ್ವಾನ



**ಕೊಪ್ಪಳ, ಅ.4:** ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಉದ್ಘಾಟಕರಾಗಿ ಆಯ್ಕೆಯಾಗಿರುವ ಕೊಪ್ಪಳದ ಗವಿಮಠದ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಯನ್ನು ಅಧಿಕೃತವಾಗಿ ಆಹ್ವಾನ ನೀಡಲಾಗಿದೆ.

ಭಾನುವಾರ ಮೈಸೂರು ದಸರಾ ಸ್ವಾಗತ ಸಮಿತಿ ಕೊಪ್ಪಳದ ಗವಿಸಿದ್ದೇಶ್ವರ ಮಠಕ್ಕೆ ಭೇಟಿ ನೀಡಿ ಶ್ರೀಗಳಿಗೆ ಅಧಿಕೃತ ಆಹ್ವಾನ ನೀಡಿದೆ. ಮೈಸೂರು ಜಿಲ್ಲಾಧಿಕಾರಿ ಲಕ್ಷ್ಮೀಕಾಂತರೆಡ್ಡಿ, ಸಿಇಓ ಯುಕೇಶ್ ಕುಮಾರ್ ನೇತೃತ್ವದ ದಸರಾ ಸ್ವಾಗತ ಸಮಿತಿ, ಶ್ರೀಗಳಿಗೆ ದಸರಾ ಅಂಬಾರಿಯ ನೆನಪಿನ ಕಾಣಿಕೆ ಕೊಟ್ಟು ಆಹ್ವಾನ ಪತ್ರಿಕೆ ನೀಡಿತು.

## ಆಡಳಿತಾರೂಢ ಕಾಂಗ್ರೆಸ್ ವಿರುದ್ಧ ಇಂದು ಚುನಾವಣಾ ಆಯೋಗಕ್ಕೆ ಎನ್‌ಡಿಎ ದೂರು

**ಎಚ್‌ಡಿಕೆ-ಅಶೋಕ ನೇತೃತ್ವ: ಇ.ಸಿ ಭೇಟಿಯಾಗಲಿರುವ ಬಿಜೆಪಿ-ಜೆಡಿಎಸ್**




**ಬೆಂಗಳೂರು, ಅ.4:** ಭಾರತದ ಚುನಾವಣಾ ಆಯೋಗ ನಡೆಸುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ(ಎಸ್‌ಐಆರ್) ವಿಚಾರವು ರಾಜಕೀಯ ಪಕ್ಷಗಳ ನಡುವಿನ ಆರೋಪ-ಪ್ರತ್ಯಾರೋಪ ತಾರಕಕ್ಕೇರುವಂತೆ ಮಾಡಿದೆ. ಅಲ್ಲದೆ, ಪರಸ್ಪರ ಆರೋಪಿಸಿ ಚುನಾವಣಾ ಆಯೋಗಕ್ಕೂ ದೂರುಗಳು ಸಲ್ಲಿಕೆಯಾಗಿವೆ. ಇದರ ಬೆನ್ನಲ್ಲೇ ಎನ್‌ಡಿಎ ನಾಯಕರು ಜಂಟಿಯಾಗಿ ಎಸ್‌ಐಆರ್ ವಿಚಾರದಲ್ಲಿ ಆಡಳಿತಾರೂಢ ಕಾಂಗ್ರೆಸ್ ಪಕ್ಷದ ವಿರುದ್ಧ ಸೋಮವಾರ ಚುನಾವಣಾ ಆಯೋಗಕ್ಕೆ ದೂರು ನೀಡಲು ನಿರ್ಧರಿಸಿದ್ದಾರೆ.

ಜೆಡಿಎಸ್ ರಾಜ್ಯಾಧ್ಯಕ್ಷ ಹಾಗೂ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಮೇಲ್ಮನೆ ಪ್ರತಿ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ.ಸುರೇಶ್‌ಬಾಬು ಸೇರಿದಂತೆ ಜೆಡಿಎಸ್ ಹಾಗೂ ಬಿಜೆಪಿ ನಾಯಕರ ನಿಯೋಗವು ಸೋಮವಾರ ಮಧ್ಯಾಹ್ನ ರಾಜ್ಯ ಮುಖ್ಯ ಚುನಾವಣಾಧಿಕಾರಿ ವಿ.ಅನ್ಬುಕುಮಾರ್ ಅವರಿಗೆ ದೂರು ಸಲ್ಲಿಸಲಿದೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಅವರ ಸಂಪುಟದ ಸಚಿವರು ಸಂಪುಟ ಸಭೆಯನ್ನೇ ಮುಂದೂಡಿ ಎಸ್‌ಐಆರ್‌ನಲ್ಲಿ ಕೆಲವು ಸಮುದಾಯದ ಮತಗಳನ್ನು ಮತದಾರರ ಪಟ್ಟಿಯಿಂದ ಅಳಿಸಲಾಗುತ್ತಿದೆ ಎಂದು ಆರೋಪಿಸಿ ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿ ಮುಂದೆ ಧರಣಿ ನಡೆಸಿದ್ದರು.

ಇದರ ಬೆನ್ನಲ್ಲೇ ಜೆಡಿಎಸ್ ಮತ್ತು ಬಿಜೆಪಿ ನಾಯಕರು ಚುನಾವಣಾಧಿಕಾರಿ ಕಚೇರಿ ಮುಂದೆ ಧರಣಿ ನಡೆಸಿದ ಕಾಂಗ್ರೆಸ್ ನಾಯಕರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದರು. ಅಲ್ಲದೆ, ನಮೂನೆ-7ಅನ್ನು ಸಲ್ಲಿಸಿರುವವರ ವಿರುದ್ಧ ಎಫ್‌ಐಆರ್ ದಾಖಲಿಸುವುದನ್ನು ಕೈಬಿಡಬೇಕು ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಅಶೋಕ ಅವರ ನೇತೃತ್ವದಲ್ಲಿ ಬಿಜೆಪಿ ನಾಯಕರು ರಾಜ್ಯ ಪೊಲೀಸ್ ಮಹಾ ನಿರ್ದೇಶಕರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ. ಎಸ್‌ಐಆರ್ ಪ್ರಕ್ರಿಯೆ ಆರಂಭಿಸಿದ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ಕಲ್ಯಾಣ ಮಂಟಪ, ಸಮುದಾಯ ಭವನಗಳಲ್ಲಿ ಕೆಲವೊಂದು ಸಮುದಾಯದ ಮತದಾರರನ್ನು ಗುಂಪು ಗುಂಪಾಗಿ ಸೇರಿಸಿ ನಮೂನೆಗಳನ್ನು ವಿತರಣೆ ಮಾಡಿದ್ದಾರೆ ಎಂದು ಆರೋಪಿಸಿ ಎನ್‌ಡಿಎ ನಾಯಕರು ಆಯೋಗಕ್ಕೆ ದೂರು ನೀಡಿದ್ದರು. ಜೊತೆಗೆ ಗುಂಪು ಸೇರಿಸಲು ಅವಕಾಶ ನೀಡಬಾರದು ಹಾಗೂ ಆ ರೀತಿ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದರು. ಆಡಳಿತಾರೂಢ ಕಾಂಗ್ರೆಸ್ ಪಕ್ಷ ಅಧಿಕಾರ ದುರ್ಬಳಕೆ ಮಾಡಿಕೊಂಡು ಎಸ್‌ಐಆರ್ ವಿಚಾರದಲ್ಲಿ ಅನಗತ್ಯ ಆರೋಪ ಮಾಡುತ್ತಿದೆ. ಅಲ್ಲದೆ, ಜನರಿಗೆ ತಪ್ಪು ಸಂದೇಶ ನೀಡುತ್ತಿದೆ. ಗುಂಪು ಸೇರಿಸಿ ನಮೂನೆಗಳನ್ನು ವಿತರಿಸಿದ ಕಾಂಗ್ರೆಸ್ ಪಕ್ಷದ ಮುಖಂಡರ ವಿರುದ್ಧ ಕಾನೂನು ರೀತಿಯ ಕ್ರಮ ಜರುಗಿಸುವಂತೆ ದೂರಿನಲ್ಲಿ ಆಯೋಗವನ್ನು ಕೋರುವ ಸಾಧ್ಯತೆಗಳಿವೆ.

## ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆ ಕೋರಿ ಅರ್ಜಿ: ಸುಪ್ರೀಂ ಕೋರ್ಟ್‌ನಲ್ಲಿ ಇಂದು ವಿಚಾರಣೆ





**ನವದೆಹಲಿ, ಅ.4:** ಚುನಾವಣಾ ಆಯೋಗವು ಕೈಗೊಂಡಿರುವ 'ವಿಶೇಷ ತೀವ್ರ ಪರಿಷ್ಕರಣೆ' ಪ್ರಕ್ರಿಯೆಯ ಕುರಿತಾದ ವಿವಾದದ ನಡುವೆಯೇ, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಅಮಾನತು ಗೊಳಿಸುವಂತೆ ಕೋರುವ ಅರ್ಜಿಗಳ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ಸೋಮವಾರ ನಡೆಸಲಿದೆ. ನ್ಯಾಯಮೂರ್ತಿ ಸೂರ್ಯ ಕಾಂತ್ ನೇತೃತ್ವದ ಹಾಗೂ ನ್ಯಾಯಮೂರ್ತಿಗಳಾದ ಜೋಯ್‌ಮಾಲ್ಯ ಬಾಗ್ಚಿ ಮತ್ತು ವಿ. ಮೋಹನಾ ಅವರನ್ನು ಒಳಗೊಂಡ ಪೀಠವು, ರಾಕೇಶ್ ಕುಮಾರ್ ಸಿಂಗ್ ಮತ್ತು ವಕೀಲ ಶೈಲೇಂದ್ರ ಮಣಿ ತ್ರಿಪಾಠಿ ಸಲ್ಲಿಸಿರುವ ಅರ್ಜಿಗಳ ವಿಚಾರಣೆ ನಡೆಸಲಿದೆ. ಮುಖ್ಯ ಚುನಾವಣಾ ಆಯುಕ್ತರ ಅಮಾನತು ಕೋರುವುದರ ಜೊತೆಗೆ, ಇತರ ಇಬ್ಬರು ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರ ಒಪ್ಪಿಗೆಯಿಲ್ಲದೆ ಕುಮಾರ್ ಅವರು ಕೈಗೊಂಡಿದ್ದಾರೆ ಎಂದು ಆರೋಪಿಸಲಾದ ನಿರ್ಧಾರಗಳು, ಮಾರ್ಗಸೂಚಿಗಳು ಮತ್ತು ಸಾಫ್ಟ್‌ವೇರ್ ಬದಲಾವಣೆಯನ್ನು ಸಹ ಈ ಅರ್ಜಿಗಳಲ್ಲಿ ಪ್ರಶ್ನಿಸಲಾಗಿದೆ ಎಂದು ಪಿಟಿಐ ಸುದ್ದಿ ಸಂಸ್ಥೆ ವರದಿ ಮಾಡಿದೆ. ಆಯೋಗದ ಹೆಸರಿನಲ್ಲಿ ಕೈಗೊಂಡ ನಿರ್ಧಾರಗಳ ಬಗ್ಗೆ ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರು 10 ತಿಂಗಳ ಅವಧಿಯಲ್ಲಿ ಕನಿಷ್ಠ 14 ಬಾರಿ ಆಕ್ಷೇಪಣೆಗಳನ್ನು ದಾಖಲಿಸಿದ್ದಾರೆ ಎಂದು 'ದಿ ಇಂಡಿಯನ್ ಎಕ್ಸ್‌ಪ್ರೆಸ್' ವರದಿ ಮಾಡಿದ ನಂತರ ಈ ಅರ್ಜಿಗಳು ಸಲ್ಲಿಕೆಯಾಗಿವೆ.

ಈ ಭಿನ್ನಾಭಿಪ್ರಾಯಗಳು 'ಫಾರ್ಮ್-6' ನಲ್ಲಿನ ಬದಲಾವಣೆಗಳು, ದೆಹಲಿಯಲ್ಲಿ 'ಇಆರ್‌ಓನೆಟ್' ನಿಯಂತ್ರಣಗಳ ಕೇಂದ್ರೀಕರಣ, ಪಶ್ಚಿಮ ಬಂಗಾಳದಲ್ಲಿ ಮತದಾರರ ಹೆಸರು ತೆಗೆದುಹಾಕುವ ಮೇಲ್ಮನವಿಗಳು ಮತ್ತು ಗೋವಾದಲ್ಲಿ ಅರ್ಹ ಮತದಾರರನ್ನು ಮತದಾರರ ಪಟ್ಟಿಗೆ ಸೇರಿಸದಿರುವ ವಿಷಯಗಳಿಗೆ ಸಂಬಂಧಿಸಿದ್ದವು. ಆದಾಗ್ಯೂ, ಚುನಾವಣಾ ಆಯೋಗವು ನೀಡಿದ ಹೇಳಿಕೆಯಲ್ಲಿ, ಈ ನಿರ್ಧಾರಗಳು ಸರ್ವಾನುಮತದಿಂದ ಕೂಡಿದ್ದವು ಮತ್ತು ಎರಡೂ ಚುನಾವಣಾ ಆಯುಕ್ತರು ಹಾಗೂ ಮುಖ್ಯ ಚುನಾವಣಾ ಆಯುಕ್ತರ ಅನುಮೋದನೆಯನ್ನು ಹೊಂದಿದ್ದವು ಎಂದು ತಿಳಿಸಿದೆ. ವರದಿಯನ್ನು ತಳ್ಳಿಹಾಕಿದ ಚುನಾವಣಾ ಆಯೋಗವು, ಚರ್ಚೆಗಳ ಸಮಯದಲ್ಲಿ ತನ್ನ ಮೂವರು ಸದಸ್ಯರು ವೈಯಕ್ತಿಕ ಅಭಿಪ್ರಾಯಗಳು, ಅವಲೋಕನಗಳು ಅಥವಾ ಸಲಹೆಗಳನ್ನು ಹೊಂದಿರಬಹುದು, ಆದರೆ ಆಯೋಗದ ಎಲ್ಲಾ ಅಂತಿಮ ನಿರ್ಧಾರಗಳನ್ನು ಸರ್ವಾನುಮತದಿಂದಲೇ ತೆಗೆದುಕೊಳ್ಳಲಾಗುತ್ತದೆ ಎಂದು ಹೇಳಿದೆ.

**ಅರ್ಜಿಯಲ್ಲಿ 'ಫಾರ್ಮ್-6' ವಿಷಯ ಪ್ರಸ್ತಾಪ:**

ಅರ್ಜಿಯಲ್ಲಿ ಪ್ರಸ್ತಾಪಿಸಲಾದ ಪ್ರಮುಖ ವಿಷಯಗಳಲ್ಲಿ ಒಂದು 'ಫಾರ್ಮ್-6'ಗೆ ಮಾಡಲಾದ ಬದಲಾವಣೆಗಳು; ನಾಗರಿಕರು ಮತದಾರರಾಗಿ ನೋಂದಾಯಿಸಿಕೊಳ್ಳಲು ಈ ಫಾರ್ಮ್ ಅನ್ನು ಬಳಸುತ್ತಾರೆ. ಮತದಾರರ ಪೂರ್ವಜರ ವಿವರಗಳು ಮತ್ತು ಹಿಂದಿನ 'ಎಸ್‌ಐಆರ್' ಪ್ರಕ್ರಿಯೆಯೊಂದಿಗಿನ ಸಂಪರ್ಕದಂತಹ ಹೆಚ್ಚುವರಿ ಅವಶ್ಯಕತೆಗಳನ್ನು, ಚುನಾವಣಾ ನಿಯಮಗಳಲ್ಲಿ ಸೂಚಿಸಿದಂತೆ ಶಾಸನಬದ್ಧ ತಿದ್ದುಪಡಿಯ ಮೂಲಕವಲ್ಲದೆ, ಆಯೋಗದ ಸಾಫ್ಟ್‌ವೇರ್ ಮೂಲಕ ಜಾರಿಗೆ ತರಲಾಗಿದೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ. ಈ ಬದಲಾವಣೆಯ ಬಗ್ಗೆ ಇಬ್ಬರು ಚುನಾವಣಾ ಆಯುಕ್ತರು ಆಕ್ಷೇಪಣೆಗಳನ್ನು ಎತ್ತಿದ್ದರು ಮತ್ತು ಶಾಸನಬದ್ಧ ಕಾರ್ಯವಿಧಾನವಿಲ್ಲದೆ ಇವುಗಳನ್ನು ಮಾಡಲು ಸಾಧ್ಯವಿಲ್ಲ ಎಂದು ಪ್ರತಿಪಾದಿಸಿದ್ದರು ಎಂದು ಪಿಟಿಐ ವರದಿ ಮಾಡಿದೆ.

## ನಿತ್ಯ ಪಂಚಾಂಗ 5.10.2026 ಸೋಮವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಶರದ್ ಋತು, ಚಾಂದ್ರಮಾನ ಶ್ರಾವಣ-ಆಶ್ವಯುಜ ಮಾಸ

ಭಾದ್ರಪದ ಬಹುಳ, ದಶಮಿ, ಪುಷ್ಯ ನಕ್ಷತ್ರ, ವಿದ್ಯಾಪಯೋನಿಧಿತೀರ್ಥ ಆರಾಧನೆ, ಕೂಚಬಾಳ ನಿಜಾನಂದ ಆರಾದನೆ, ಹರ್ಲಾಪುರ ಚಿದಾನಂದ ಜಾತ್ರೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

ದೆಹಲಿ ಒಕ್ಕಲಿಗ ಗೌಡ ಸಂಘ (ರಿ)

ಆತ್ಮೀಯರೇ,



ದೆಹಲಿ ಒಕ್ಕಲಿಗ ಗೌಡ ಸಂಘವು ದಿನಾಂಕ 25.10.2026ರ ಭಾನುವಾರ ದೆಹಲಿ ಕರ್ನಾಟಕ ಸಂಘದ ಸಹಕಾರದೊಂದಿಗೆ ಆಯೋಜಿಸುವ ಶ್ರೀ ನಾಡಪ್ರಭು ಕೆಂಪೇಗೌಡ ಉತ್ಸವ ಕಾರ್ಯಕ್ರಮದಲ್ಲಿ ದೆಹಲಿ NCR ನ ಸ್ಥಳೀಯ ಸಂಘ ಸಂಸ್ಥೆಗಳಿಂದ ಹಾಗೂ ಕನ್ನಡಿಗರಿಂದ ವಿವಿಧ ಪ್ರಕಾರದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಿದ್ದೇವೆ. ಈ ಕಾರ್ಯಕ್ರಮದಲ್ಲಿ ಭಾಗವಹಿಸುವವರು ದಿನಾಂಕ 10.10.2026ರ ಮೊದಲು ಇವರ ಬಳಿ ತಮ್ಮ ಹೆಸರುಗಳನ್ನು ನೊಂದಾಯಿಸಿಕೊಳ್ಳಬೇಕಾಗಿ ವಿನಂತಿ.

ಶ್ರೀ ಜಗದೀಶ್ ಗೌಡ : 9868393976
ಶ್ರೀಮತಿ ದಿವ್ಯಾ ಚಂದ್ರಶೇಖರ್ : 8851350156
ಶ್ರೀಮತಿ ಲಕ್ಷ್ಮೀ ಗೌಡ : 9205328415
ಶ್ರೀಮತಿ ಶೋಭಾ ಗೌಡ : 8800588150

ಪ್ರಶಾಂತ್ ಕುಮಾರ್ ಬಿ.ಆರ್.
ಅಧ್ಯಕ್ಷರು

ಮೋಹನ್ ಕುಮಾರ್ ಬಿ.ಎನ್.
ಪ್ರಧಾನ ಕಾರ್ಯದರ್ಶಿ

# ಧರ್ಮಸ್ಥಳದಲ್ಲಿ 28ನೇ ವರ್ಷದ ಭಜನಾ ಕಮ್ಮಟ ಸಮಾರೋಪ

## ಭಜನೆಯಿಂದ ಭಗವಂತನ ಸಾಕ್ಷಾತ್ಕಾರ, ಉತ್ತಮ ಸಂಸ್ಕಾರ: ಸುತ್ತೂರು ಶ್ರೀಗಳು






ಮುಂಬಯಿ, ಅ.04: ಭಗವಂತನ ಅನುಗ್ರಹಕ್ಕೆ ಪಾತ್ರರಾಗಲು ಭಜನೆ ಅತ್ಯಂತ ಸರಳ ಮಾರ್ಗವಾಗಿದ್ದು, ಭಜನೆಯಿಂದ ಭಗವಂತನ ಸಾಕ್ಷಾತ್ಕಾರವಾಗಿ ಭಜಕರಲ್ಲಿ ಉತ್ತಮ ಸಂಸ್ಕಾರ ಮೂಡಿ ಬರುತ್ತದೆ ಎಂದು ಮೈಸೂರಿನ ಸುತ್ತೂರು ಮಠದ ಪೂಜ್ಯ ಶಿವರಾತ್ರಿ ದೇಶೀಕೇಂದ್ರ ಸ್ವಾಮೀಜಿ ಹೇಳಿದರು.

ಅವರು ಭಾನುವಾರ ಧರ್ಮಸ್ಥಳದಲ್ಲಿ ಅಮೃತವರ್ಷಿಣಿ ಸಭಾಭವನದಲ್ಲಿ 28 ನೇ ವರ್ಷದ ಭಜನಾ ಕಮ್ಮಟದ ಸಮಾರೋಪ ಸಮಾರಂಭದಲ್ಲಿ ಆಶೀರ್ವಚನ ನೀಡಿದರು.

ಭಗವಂತನ ಸಾಕ್ಷಾತ್ಕಾರಕ್ಕೆ ಹಲವಾರು ಮಾರ್ಗಗಳಿದ್ದರೂ ಶ್ರದ್ಧಾ-ಭಕ್ತಿಯಿಂದ ರಾಗ, ತಾಳ, ಲಯಬದ್ಧವಾಗಿ ಶಿಸ್ತಿನಿಂದ ಭಜನೆ ಹಾಡಿದರೆ ಸುಲಭದಲ್ಲಿ ದೇವರ ಅನುಗ್ರಹಕ್ಕೆ ಪಾತ್ರರಾಗಬಹುದು. ನಾಡಿನ ಅನೇಕ ಸಾಧು-ಸಂತರು, ಮೀರಾಬಾಯಿ ಯಂತಹ ಸಾಧಕರು ಭಕ್ತಿಯಿಂದ ತಮ್ಮನ್ನು ತಾವು ಸಮರ್ಪಿಸಿಕೊಂಡು ದೇವರ ಅನುಗ್ರಹಕ್ಕೆ ಪಾತ್ರರಾಗಿದ್ದಾರೆ.

ಇಸ್ಕಾನ್‌ನವರು ವಿದೇಶಗಳಲ್ಲಿ ಕೂಡಾ ಭಜನೆ ಮೂಲಕ ದೇವರ ಅನುಗ್ರಹಕ್ಕೆ ಪಾತ್ರರಾಗುವ ಬಗ್ಯೆ ಅರಿವು, ಜಾಗೃತಿ ಮೂಡಿಸಿದ್ದಾರೆ.

ಭಜನೆಯಿಂದ ನಮ್ಮಲ್ಲಿರುವ ಸಾತ್ವಿಕಶಕ್ತಿ ಜಾಗೃತವಾಗಿ ನೈತಿಕತೆಯೊಂದಿಗೆ ಆರೋಗ್ಯ ಪೂರ್ಣ ಸಮಾಜ ನಿರ್ಮಾಣವಾಗುತ್ತದೆ. ಪ್ರಾರ್ಥನೆ, ಜಪ, ತಪ, ಧ್ಯಾನ ಇದ್ದಲ್ಲಿ ಭಕ್ತರು ಮತ್ತು ಭಗವಂತನ ಮಧ್ಯೆ ಅವಿನಾಭಾವ ಸಂಬಂಧ ಮೂಡಿ ಬರುತ್ತದೆ ಎಂದು ಸ್ವಾಮೀಜಿ ಹೇಳಿದರು.

ಎಲ್ಲಾ ವಿಷಯಗಳಲ್ಲಿಯೂ ಸೂಕ್ಷ್ಮಗ್ರಾಹಿಯಾದ ವೀರೇಂದ್ರ ಹೆಗ್ಗಡೆಯವರು ಹತ್ತು-ಹಲವು ಜನಮಂಗಳ ಕಾರ್ಯಗಳನ್ನು ಮಾಡಿ ರಾಜರ್ಷಿಯಾಗಿರುವುದು ಎಲ್ಲರಿಗೂ ಸಂತಸ ಮತ್ತು ಅಭಿಮಾನದ ಸಂಗತಿಯಾಗಿದೆ ಎಂದು ಅವರು ಹೇಳಿದರು.

ಸುಬ್ರಹ್ಮಣ್ಯ ಮಠದ ವಿದ್ಯಾಪ್ರಸನ್ನತೀರ್ಥ ಸ್ವಾಮೀಜಿ ಮಾತನಾಡಿ, ಸನಾತನ ಸಂಸ್ಕೃತಿಯ ಪುನರುತ್ಥಾನಕ್ಕೆ ಕೃಷಿಸಂಸ್ಕೃತಿ ಮತ್ತು ಋಷಿಸಂಸ್ಕೃತಿಯನ್ನು ಮರೆಯಬಾರದು. ಭಜನೆಯಿಂದ ನಾಲಗೆ ಪವಿತ್ರವಾಗಿ ಸಾರ್ಥಕ ಬದುಕಿಗೆ ಸ್ಪೂರ್ತಿ ದೊರಕುತ್ತದೆ.

ಭಾವುಕರಾಗಿ ಭಜನೆ ಹಾಡುವುದರಿಂದ ಜೀವನಮಟ್ಟ ಸುಧಾರಣೆಯೊಂದಿಗೆ ನೈತಿಕ ಹಾಗೂ ಧಾರ್ಮಿಕ ಮಟ್ಟವೂ ಉನ್ನತಿಗೇರುತ್ತದೆ ಎಂದು ಅವರು ಹೇಳಿದರು. ಪಾಶ್ಚಾತ್ಯ ಸಂಸ್ಕೃತಿಯ ಅಂಧಾನುಕರಣೆ ಸಲ್ಲದು ಎಂದು ಅವರು ತಿಳಿಸಿದರು.

ಸುಶ್ರಾವ್ಯವಾಗಿ ಭಜನೆಯೊಂದನ್ನು ಹಾಡಿ, ಸ್ವಾಮೀಜಿ ಶ್ರೋತೃಗಳ ಮುಕ್ತ ಪ್ರಶಂಸೆಗೆ ಪಾತ್ರರಾದರು.

ಅಧ್ಯಕ್ಷತೆ ವಹಿಸಿದ ಧರ್ಮಾಧಿಕಾರಿ ಡಿ.ವೀರೇಂದ್ರ ಹೆಗ್ಗಡೆಯವರು ಮಾತನಾಡಿ, ಶಿಬಿರಾರ್ಥಿಗಳು ಕಮ್ಮಟದಲ್ಲಿ ಪಡೆದ ಅನುಭವವನ್ನು ಸದುಪಯೋಗ ಮಾಡಿ ಆಯಾ ಊರಿನ ನಾಯಕರಾಗಿ ಪ್ರಗತಿಯ ರೂವಾರಿಗಳಾಗಬೇಕು. ನಿತ್ಯವೂ ರಾಗ, ತಾಳ, ಲಯಬದ್ಧವಾಗಿ ಭಜನೆ ಹಾಡಿ ಸಾರ್ಥಕ ಜೀವನ ನಡೆಸಬೇಕು ಎಂದು ಸಲಹೆ ನೀಡಿದರು.

ಕಮ್ಮಟದಲ್ಲಿ ಉತ್ತಮ ತರಬೇತಿ ಮತ್ತು ಮಾರ್ಗದರ್ಶನ ನೀಡಿದ ಸಂಪನ್ಮೂಲ ವ್ಯಕ್ತಿಗಳನ್ನು ಮತ್ತು ಹಿರಿಯ ವಿದ್ವಾಂಸರನ್ನು ಹೆಗ್ಗಡೆಯವರು ಅಭಿನಂದಿಸಿದರು.

ಶಿಬಿರಾರ್ಥಿಗಳಿಂದ ಸಾಮೂಹಿಕ ನೃತ್ಯ ಭಜನೆ ಮತ್ತು ಕುಣಿತ ಭಜನೆ ನಡೆಯಿತು.

ಹೇಮಾವತಿ ವೀ. ಹೆಗ್ಗಡೆ, ಡಿ. ಸುರೇಂದ್ರ ಕುಮಾರ್, ಡಿ.ಹರ್ಷೇಂದ್ರ ಕುಮಾರ್, ಸುಪ್ರಿಯಾ ಹರ್ಷೇಂದ್ರ ಕುಮಾರ್, ಐಶ್ವರ್ಯ ನಿಶ್ಚಲ್ ಕುಮಾರ್ ಉಪಸ್ಥಿತರಿದ್ದರು.

ಭಜನಾ ಕಮ್ಮಟದ ಕಾರ್ಯದರ್ಶಿ ಎ.ವಿ. ಶೆಟ್ಟಿ ವರದಿ ಸಾದರಪಡಿಸಿ ಒಂದು ವಾರ ನಡೆದ ಕಮ್ಮಟದಲ್ಲಿ 107 ಪುರುಷರು ಮತ್ತು 105 ಮಹಿಳೆಯರು ಸೇರಿದಂತೆ ಒಟ್ಟು 212 ಶಿಬಿರಾರ್ಥಿಗಳು ಭಾಗವಹಿಸಿದ್ದಾರೆ ಎಂದರು.

ಬ್ರಹ್ಮಾವರದ ತಿಮ್ಮಪ್ಪ ಕರ್ಕೇರಾ ಮತ್ತು ಸುಳ್ಯದ ಶ್ರೀಲತಾ ಕಮ್ಮಟದ ಬಗ್ಯೆ ಅಭಿಪ್ರಾಯ, ಅನಿಸಿಕೆ ವ್ಯಕ್ತಪಡಿಸಿದರು.

ಮಾಣಿಲದ ಮೋಹನದಾಸ ಸ್ವಾಮೀಜಿ, ಶಾಸಕ ಹರೀಶ್ ಪೂಂಜ, ಮಾಜಿ ಶಾಸಕ ಕೆ. ಪ್ರತಾಪಸಿಂಹ ನಾಯಕ್ ಇದ್ದರು.

ಭಜನಾ ಕಮ್ಮಟದ ಸಂಚಾಲಕ ಸುಬ್ರಹ್ಮಣ್ಯ ಪ್ರಸಾದ್ ಸ್ವಾಗತಿಸಿದರು. ರತ್ನವರ್ಮ ಜೈನ್ ಧನ್ಯವಾದವಿತ್ತರು. ಶ್ರೀನಿವಾಸ ರಾವ್ ಧರ್ಮಸ್ಥಳ ಕಾರ್ಯಕ್ರಮ ನಿರ್ವಹಿಸಿದರು.

# ಸ್ಥಳೀಯ, ವಿಧಾನಸಭೆ, ಲೋಕಸಭಾ ಚುನಾವಣೆಗಳಲ್ಲಿ ಕಾಂಗ್ರೆಸ್ ಗೆಲುವು ನಿಶ್ಚಿತ: ಸಿದ್ದರಾಮಯ್ಯ ವಿಶ್ವಾಸ



ಮೈಸೂರು, ಅ.4: 'ಕಾಂಗ್ರೆಸ್ ಪಕ್ಷವು ಗ್ರಾ.ಪಂ., ತಾ.ಪಂ., ಜಿ.ಪಂ., 2008ರ ವಿಧಾನಸಭೆ ಹಾಗೂ 2029ರ ಲೋಕಸಭಾ ಚುನಾವಣೆಯಲ್ಲಿ ಗೆದ್ದು ಅಧಿಕಾರಕ್ಕೆ ಬರಲಿದೆ. ಈ ಆಶಾಭಾವನೆ ಯಲ್ಲಿಯೇ ಕಾರ್ಯಕರ್ತರು ಕೆಲಸ ಮಾಡಬೇಕು' ಎಂದು ಎಐಸಿಸಿ ಕಾರ್ಯಕಾರಿ ಸಮಿತಿ ಸದಸ್ಯ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.ಇಲ್ಲಿನ ವರ್ತುಲ ರಸ್ತೆಯ ಉತ್ತನಹಳ್ಳಿ ಸಮೀಪದ ಭಾನವಿ ಪ್ಯಾಲೇಸ್ ಕಲ್ಯಾಣಮಂಟಪದಲ್ಲಿ ಭಾನುವರ ಆಯೋಜಿಸಿದ್ದ ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿಯ ನೂತನ ಅಧ್ಯಕ್ಷ ಬೀರಿಹುಂಡಿ ಬಸವಣ್ಣ ಅವರ ಪದಗ್ರಹಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.'ಕಾಂಗ್ರೆಸ್ ಯಾವುದೇ ಒಂದು ವರ್ಗದ ಪಕ್ಷವಲ್ಲ. ಎಲ್ಲರದು ಹಾಗೂ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಪಕ್ಷ. ಮೈಸೂರು ಜಿಲ್ಲೆಯಲ್ಲೂ ಬಹಳಷ್ಟು ಬಲವಾಗಿದೆ. ಮತ್ತಷ್ಟು ಬಲಪಡಿಸಲು ಅಗತ್ಯ ಬೆಂಬಲ ನೀಡುತ್ತೇನೆ' ಎಂದು ತಿಳಿಸಿದರು.ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ ಅವರು, 'ಬಿಜೆಪಿ ಸ್ವಾತಂತ್ರ್ಯಕ್ಕೆ ಹೋರಾಡಿದ ಪಕ್ಷವಲ್ಲ. ಆ ಪಕ್ಷದ ನಾಯಕರು ಸ್ವಾತಂತ್ರ್ಯ ಹೋರಾಟದಲ್ಲಿ ಭಾಗಿಯಾಗಿದ್ದರಾ? ಒಂದಾದರೂ ಅಣೆಕಟ್ಟು ಕಟ್ಟಿದ್ದೇವೆ ಎಂದು ಬಿಜೆಪಿಯವರು ಹೇಳಲಿ' ಎಂದು ಸವಾಲು ಹಾಕಿದರು. 'ಇವರು ಇರುವ ಕೈಗಾರಿಕೆಗಳನ್ನೂ ಮಾರುತ್ತಿದ್ದಾರೆ' ಎಂದು ಟೀಕಿಸಿದರು.

ಗ್ಯಾರಂಟಿ ನಿಲ್ಲಬಾರದು:- 'ನಾನು ಮುಖ್ಯಮಂತ್ರಿ ಆಗಿದ್ದಾಗ ಪಂಚ ಗ್ಯಾರಂಟಿ ಯೋಜನೆಯನ್ನು ನೀಡಿದ್ದೆ. ಅವು ಮುಂದುವರಿಯಬೇಕು. ಯಾವುದೇ ಕಾರಣಕ್ಕೂ ನಿಲ್ಲಿಸಬಾರದು. ದುವರಿಸಲಾಗುವುದು ಎಂದು ಈಗಿನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕೂಡ ಹೇಳಿದ್ದಾರೆ. ನಾವು ಕೊಟ್ಟಿರುವ ಮತ್ತಷ್ಟು ಭರವಸೆಗಳು ಈಡೇರಬೇಕು' ಎಂದರು. 'ಡಿ.ಕೆ.ಶಿವಕುಮಾರ್, ಪ್ರಜಾಸೇವೆ, ಭಾರತ್ ಜೋಡೊ ಯುವ ಸಂಘಟನೆ ರಚನೆ ಮೊದಲಾದ ಒಳ್ಳೆಯ ಕಾರ್ಯಕ್ರಮ ಮಾಡಿದ್ದಾರೆ, ಅವೂ ಮುಂದುವರಿಯಬೇಕು' ಎಂದು ಹೇಳಿದರು. 'ವಿಜಯ್‌ಕುಮಾರ್ ಜಿಲ್ಲೆಯಲ್ಲಿ ಪಕ್ಷ ಸಂಘಟನೆಗೆ ಬಹಳಷ್ಟು ಶ್ರಮಿಸಿದ್ದಾರೆ. ಚುನಾವಣೆಗಳ ಗೆಲುವಿಗೂ ಸಹಕರಿಸಿದ್ದಾರೆ. ಅವರಿಗೆ ಕಾರ್ಯಕರ್ತರ ಆಶಯದಂತೆ ಜವಾಬ್ದಾರಿ ಕೋಡೋಣ' ಎಂದು ಭರವಸೆ ನೀಡಿದರು.

ಮುಖ್ಯಮಂತ್ರಿ ಆಗಬೇಕು:- 'ನೀವು ಮತ್ತೆ ಮುಖ್ಯಮಂತ್ರಿ ಆಗಬೇಕು' ಎಂದು ಕೆಲವರು ಕೂಗಿದರು. 'ನಿಮ್ಮ ಅಭಿಮಾನಕ್ಕೆ ಧನ್ಯವಾದಗಳು' ಎಂದಷ್ಟೆ ಸಿದ್ದರಾಮಯ್ಯ ಪ್ರತಿಕ್ರಿಯಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಯತೀಂದ್ರ, ಪ್ರಸ್ತುತ ಸಾಕಷ್ಟು ರಾಜಕೀಯ ಸ್ಥಿತ್ಯಂತರಗಳಾಗಿವೆ. ಅವುಗಳಿಗೆ ಹೊಂದಿಕೊಂಡು ಪಕ್ಷವನ್ನು ಬಲಿಷ್ಠವಾಗಿ ಕಟ್ಟಬೇಕಾಗಿದೆ. ಸಂವಿಧಾನದ ಮೂಲ ಆಶಯಗಳ ಅನುಷ್ಠಾನದ ಸಿದ್ಧಾಂತದ ಮೇಲೆ ಕಾಂಗ್ರೆಸ್ ರಾಜಕಾರಣ ಮಾಡುತ್ತಿದೆ. ಸಿದ್ದರಾಮಯ್ಯ ಅವರು ರಾಜ್ಯ ರಾಜಕಾರಣದಲ್ಲಿ ಎಂದಿಗೂ ಪ್ರಸ್ತುತವಾಗಿ ಇದ್ದೇ ಇರುತ್ತಾರೆ ಎಂದರು. 12 ವರ್ಷಗಳಿಂದ ಅಧ್ಯಕ್ಷರಾಗಿ ನಿರಂತರವಾಗಿ ಶ್ರಮಿಸಿದ ವಿಜಯ್‌ಕುಮಾರ್ ಸೇವೆ ಶ್ಲಾಘನೀಯ ವಾದುದು' ಎಂದು ಹೇಳಿದರು.ನಿಕಟಪೂರ್ವ ಅಧ್ಯಕ್ಷ ಬಿ.ಜೆ. ವಿಜಯ್‌ಕುಮಾರ್, ನಂಬಿಕೆ ರಾಜಕಾರಣ ಹಿನ್ನಡೆ ಅನುಭವಿಸುತ್ತಿದೆ. ಮಾದರಿ, ಬದ್ಧತೆಯ ಹಾಗೂ ಪ್ರಾಮಾಣಿಕ ರಾಜಕಾರಣದ ಬಗ್ಗೆ ತರಬೇತಿ ನೀಡುವ ಕುರಿತು ಸಿದ್ದರಾಮಯ್ಯ ಅವರ ಹೆಸರಿನಲ್ಲಿ ಕರ್ನಾಟಕ ಸರ್ಕಾರವೇ ಸಂಸ್ಥೆಯೊಂದನ್ನು ಮೈಸೂರಿನಲ್ಲೇ ಸ್ಥಾಪಿಸಬೇಕು' ಎಂದು ಒತ್ತಾಯಿಸಿದರು.

ಶಾಸಕ ಕೆ.ವೆಂಕಟೇಶ್, ಪದಗ್ರಹಣ ಮಾಡಿದ ಬೀರಿಹುಂಡಿ ಬಸವಣ್ಣ ಮಾತನಾಡಿದರು. ಶಾಸಕರಾದ ಡಿ.ರವಿಶಂಕರ್, ಅನಿಲ್ ಚಿಕ್ಕಮಾದು, ದರ್ಶನ್ ಧ್ರುವನಾರಾಯಣ್, ವಿಧಾನಪರಿಷತ್ ಸದಸ್ಯ ಡಾ.ಡಿ. ತಿಮ್ಮಯ್ಯ, ಕೆ.ಶಿವಕುಮಾರ್, ಮಾಜಿ ಶಾಸಕರಾದ ಎಂ.ಕೆ. ಸೋಮಶೇಖರ್, ಎಚ್.ಪಿ.ಮಂಜುನಾಥ್, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್, ಪಕ್ಷದ ನಗರ ಜಿಲ್ಲಾ ಸಮಿತಿಯ ಅಧ್ಯಕ್ಷ ಆರ್.ಮೂರ್ತಿ, ನಿಗಮ ಮಂಡಳಿಗಳ ಅಧ್ಯಕ್ಷರು, ಪಕ್ಷದ ಮುಖಂಡರು ಪಾಲ್ಗೊಂಡಿದ್ದರು.

# ನಕಲಿ ಮತದಾರರಿಗೆ ಎಸ್‌ಐಆರ್ ಕಂಟಕ; ಚುನಾವಣಾಧಿಕಾರಿ ಕಚೇರಿ ಎದುರು ಕಾಂಗ್ರೆಸ್ ಗೊಂದಲ ಸೃಷ್ಟಿ: ಬೊಮ್ಮಾಯಿ ಕಿಡಿ



ಬೆಂಗಳೂರು, ಅ.4: ಕಳೆದ 20 ವರ್ಷಗಳಿಂದ ಕಾಂಗ್ರೆಸ್ ಪಕ್ಷದವರು ನಕಲಿ ಮತಗಳನ್ನು ಹಾಕಿಸಿಕೊಂಡು, ಒಂದೇ ವ್ಯಕ್ತಿ ಎರಡು ಕಡೆ ಮತಗಳನ್ನು ಹಾಕಿಸುವುದು ಅಥವಾ ಸತ್ತವರ ಹೆಸರಿನಲ್ಲಿ ಮತಗಳನ್ನು ಹಾಕಿಸಿಕೊಂಡು ಆಯ್ಕೆಯಾಗುತ್ತಿದ್ದರು. ಈಗ ಅವರಿಗೆ ತೊಂದರೆಯಾಗಿದೆ. ಹೀಗಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಕಲಿ ಮತಗಳ ರಕ್ಷಣೆಗಾಗಿ ಚುನಾವಣಾಧಿಕಾರಿ ಕಚೇರಿ ಎದುರು ಧರಣಿ ನಡೆಸುವ ನಾಟಕವಾಡಿದ್ದಾರೆ ಎಂದು ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.

ಹಾವೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಎಸ್‌ಐಆರ್ ಪ್ರಕ್ರಿಯೆ ಆರಂಭದಿಂದಲೂ ಬಹಳ ಸರಳವಾಗಿ ನಡೆದುಕೊಂಡು ಬರುತ್ತಿತ್ತು. ಪ್ರಾರಂಭದಲ್ಲಿ ಕಾಂಗ್ರೆಸ್‌ನವರು ಅಲ್ಲಲ್ಲಿ ಮಸೀದಿಯಲ್ಲಿ ಅರ್ಜಿ ತುಂಬಿಸುವುದಕ್ಕೆ ನಾವು ವಿರೋಧಿಸಿದ್ದೇವು.. ಆದರೆ ನಂತರದ ಕ್ರಮಗಳ ಪ್ರಕಾರ ಇದು ಸರಳವಾಗಿ ಮುಗಿಯಬೇಕಿತ್ತು, ಅಕ್ಟೋಬರ್ 8 ರಂದು ಕರಡು ಮತ ಪಟ್ಟಿಯನ್ನು ಕೊಡಬೇಕಾಗಿತ್ತು. ಇಂತ ಸಂದರ್ಭದಲ್ಲಿ ಕಾಂಗ್ರೆಸ್ ನವರು ಚುನಾವಣಾಧಿಕಾರಿ ಕಚೇರಿ ಮುಂದೆ ಧರಣಿ ನಡೆಸಿ ಗೊಂದಲ ಸೃಷ್ಟಿಸಿದ್ದಾರೆ. ನಮ್ಮ ಪಕ್ಷದ ಪ್ರಮುಖರು ಚುನಾವಣಾಧಿಕಾರಿಯನ್ನು ಭೇಟಿ ಮಾಡಿ ಮನವಿ ಮಾಡಿದ್ದಾರೆ. ಈಗ ಕಾನೂನು ಪ್ರಕಾರ ಎಲ್ಲವೂ ಹೊರಬರುತ್ತಿದೆ ಎಂದಿರುವ ಅವರು, ರಾಜ್ಯ ಸರ್ಕಾರಕ್ಕೆ ನೇರವಾಗಿ ಇದರ ವಿರುದ್ಧ ಮೊಕದ್ದಮೆ ಹಾಕುವ ಯಾವುದೇ ಅಧಿಕಾರವಿಲ್ಲ, ಇದು ಸಂಪೂರ್ಣವಾಗಿ ಚುನಾವಣಾ ಅಧಿಕಾರಿಗಳು ಮಾಡಬೇಕಾದ ಕೆಲಸ. ಕಾನೂನಿನ ಪ್ರಕಾರ ಅರ್ಹರ ಮತಗಳು ಮಾತ್ರ ರಕ್ಷಿಸಲ್ಪಡಬೇಕು ಮತ್ತು ಅನರ್ಹರ ಮತಗಳನ್ನು ತೆಗೆದು ಹಾಕಬೇಕು ಎನ್ನುವುದು ನಮ್ಮ ಸ್ಪಷ್ಟ ನಿಲುವು ಎಂದು ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ಸವಣೂರು ತಾಲೂಕು ಪ್ರತ್ಯೇಕ ವಿಧಾನಸಭಾ ಕ್ಷೇತ್ರ ಆಗಬೇಕು ಎನ್ನುವ ಬೇಡಿಕೆ ಕುರಿತು ಕೇಳಿದ್ರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, . ಚುನಾವಣಾ ಆಯೋಗದ ನಿಯಮಗಳ ಪ್ರಕಾರವೇ ಡಿಲಿಮಿಟೇಶನ್ (ಗಡಿ ನಿರ್ಣಯ) ಪ್ರಕ್ರಿಯೆ ನಡೆಯಬೇಕು, ಅದಾದ ಬಳಿಕ ಕೇಂದ್ರ ಮತ್ತು ರಾಜ್ಯ ಸಮಿತಿಗಳು ರಚನೆಯಾಗುತ್ತವೆ. ಒಂದು ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಜನಸಂಖ್ಯೆ ಇರಬೇಕು ಎಂದು ನಿರ್ಧಾರ ಆಗುತ್ತದೆ. ಆ ಸಂದರ್ಭದಲ್ಲಿ ಅವರ ಮನವಿಯನ್ನು ಪರಿಗಣಿಸ ಲಾಗುತ್ತದೆ ಎಂದು ಹೇಳಿದರು. ಎಸ್ ಐ ಆರ್ ಪ್ರಕ್ರಿಯೆ ಶುರುವಾದ ನಂತರ ನಡೆದ ಎಲ್ಲ ಚುನಾವಣೆಗಳನ್ನು ರದ್ದು ಪಡಿಸುವಂತೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೀಡಿರುವ ಹೇಳಿಕೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್‌ನವರು ಎಲ್ಲ ಕಡೆ ಸೋತಿದ್ದಾರೆ. ಅದಕ್ಕಾಗಿ ಕುಂಟು ನೆಪ ಹೇಳುತ್ತಿದ್ದಾರೆ. ಅವರ ಪಕ್ಷ ಯಾಕೆ ಸೋತಿದೆ ಅನುವುದನ್ನು ಆತ್ಮಾವಲೋಕನ ಮಾಡಿಕೊಳ್ಳಲಿ ಎಂದು ತಿರುಗೇಟು ನೀಡಿದರು.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಅಮಾನತು ಮಾಡಬೇಕೆಂಬ ಬೇಡಿಕೆಗೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ಹಾಗೂ ಅವರ ಮಿತ್ರ ಪಕ್ಷದವರಿಗೆ ದೇಶದ ಅಭಿವೃದ್ಧಿ ಸಹಿಸಿಕೊಳ್ಳಲು ಆಗುತ್ತಿಲ್ಲ.

ಅವರು ದೇಶದಲ್ಲಿ ಹೇಗಾದರೂ ಮಾಡಿ ದಂಗೆ ಎಬ್ಬಿಸಬೇಕೆಂದು ಬಯಸುತ್ತಿದ್ದಾರೆ. ಅದಕ್ಕೆ ದೇಶದ ಜನರು ಸೊಪ್ಪು ಹಾಕುವುದಿಲ್ಲ ಎಂದು ಬೊಮ್ಮಾಯಿ ಹೇಳಿದರು.

# ಎಸ್.ಐ.ಆರ್ ಸಮಸ್ಯೆ ವಿರುದ್ಧ ಹೋರಾಟಕ್ಕೆ "ಸತ್ಯಾಗ್ರಹ" ಡಿಜಿಟಲ್ ರಾಷ್ಟ್ರೀಯ ವೇದಿಕೆ: ರಾಹುಲ್ ಗಾಂಧಿಯಿಂದ ತಂತ್ರಜ್ಞಾನದ ಸ್ಪರ್ಶ: ಡಾ. ಆನಂದ್ ಕುಮಾರ್



ಬೆಂಗಳೂರು, ಅ.4: ಎಸ್.ಐ.ಆರ್ ಮೂಲಕ ಶೋಷಿತರು, ಅಲ್ಪ ಸಂಖ್ಯಾತರು, ದುರ್ಬಲ ವರ್ಗದವರ ಮತಗಳನ್ನು ಅಳಿಸಿಹಾಕಲು ನಡೆಸಿದ ಷಡ್ಯಂತ್ರಗಳನ್ನು ಅತ್ಯಂತ ಪರಿಣಾಮಕಾರಿಯಾಗಿ ಪತ್ತೆಹಚ್ಚಿ ಕೇಂದ್ರ ಚುನಾವಣಾ ಆಯೋಗದ ವಿರುದ್ಧ ನಿರ್ಣಾಯಕ ಹೋರಾಟ ನಡೆಸಲು ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಆರಂಭಿಸಿರುವ ಸತ್ಯಾಗ್ರಹ ಡಿಜಿಟಲ್ ವೇದಿಕೆ ಹೋರಾಟದ ಸೇನಾನಿಗಳಿಗೆ ಮತ್ತಷ್ಟು ಪುಷ್ಟಿ ನೀಡಲಿದೆ. ಡಿಜಿಟಲ್ ಜಗತ್ತಿನಲ್ಲಿ ಚದುರಿದ ಧ್ವನಿಗಳನ್ನು ಒಗ್ಗೂಡಿಸಿ, ನೈಜ ಬದಲಾವಣೆಯ ಶಕ್ತಿಯನ್ನಾಗಿ ಪರಿವರ್ತಿಸಲು ಸಹಕಾರಿಯಾಗಲಿದೆ ಎಂದು ಎಐಸಿಸಿ ಎಸ್.ಸಿ ವಿಭಾಗದ ಡಾ. ಆನಂದ್ ಕುಮಾರ್ ಹೇಳಿದ್ದಾರೆ.

ಆಧುನಿಕ ತಂತ್ರಜ್ಞಾನ ಯುಗದಲ್ಲಿ ಜೆನ್ ಜಿ ಮತ್ತು ಆಲ್ಫಾ ಸಮುದಾಯಗಳ ಹೋರಾಟಕ್ಕೆ ಈ ವೇದಿಕೆ ಧೀಃಶಕ್ತಿಯಾಗಲಿದೆ. ಜನಪರ ಸಮಸ್ಯೆಗಳಷ್ಟೇ ಅಲ್ಲದೇ, ಎಸ್.ಐ.ಆರ್ ವಿರುದ್ಧದ ಹೋರಾಟಕ್ಕೆ ಇದು ಹೊಸ ರಾಷ್ಟ್ರೀಯ ವೇದಿಕೆ ಒದಗಿಸುವ ವಿಭಿನ್ನ ಪ್ರಯೋಗವಾಗಿದೆ. ಆಯೋಗದ ವಿರುದ್ಧದ ಹೋರಾಟಕ್ಕೆ ಹೊಸದಿಕ್ಕು, ಹೊಸ ಸ್ಪರ್ಷ, ಹೊಸತನಕ್ಕೆ ಇದು ನಾಂದಿಯಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಡಾ. ಆನಂದಕುಮಾರ್, ಸತ್ಯಾಗ್ರಹದ ಪರಿಕಲ್ಪನೆಯನ್ನು ಡಿಜಿಟಲ್ ಯುಗಕ್ಕೆ ಹೊಂದಿಸಿದ್ದು, ದೇಶದ ಜನರ ಆರ್ತನಾದಕ್ಕೆ ಇದು ಕಿವಿಯಾಗಲಿದೆ. ದೇಶದ ವಿವಿಧ ಭಾಗಗಳಲ್ಲಿ ತಮ್ಮ ಹಕ್ಕುಗಳು ಮತ್ತು ಸಮಸ್ಯೆಗಳಿಗಾಗಿ ಹೋರಾಡುತ್ತಿರುವ ಜನರು ಹಾಗೂ ಸಂಘಟನೆಗಳನ್ನು ಒಂದೇ ವೇದಿಕೆಯಲ್ಲಿ ಜೋಡಿಸುವುದು ಸತ್ಯಾಗ್ರಹ ವೇದಿಕೆ ಪ್ರಮುಖ ಉದ್ದೇಶವಾಗಿದೆ. ವಿದ್ಯಾರ್ಥಿಗಳು, ರೈತರು, ಮಹಿಳೆಯರು, ದಲಿತರು, ಆದಿವಾಸಿಗಳು, ಯುವ ಸಮೂಹ ಸೇರಿದಂತೆ ವಿವಿಧ ಸಮುದಾಯಗಳ ಹೋರಾಟಗಳನ್ನು ರಾಷ್ಟ್ರೀಯ ಮಟ್ಟದಲ್ಲಿ ಪ್ರತಿಬಿಂಬಿಸುವಂತೆ ಮಾಡುವ ಕೇಂದ್ರ ಬಿಂದು ಇದಾಗಿದೆ ಎಂದು ಹೇಳಿದ್ದಾರೆ.

ರಾಹುಲ್ ಗಾಂಧಿಯವರ ಈ ಪ್ರಯತ್ನದ ಹಿಂದೆ ಇರುವ ಮೂಲ ಆಲೋಚನೆ ಸರಳವಾಗಿದ್ದು, ಹಲವು ಭಾಗಗಳಲ್ಲಿ ಜನರು ತಮ್ಮದೇ ಆದ ಸಮಸ್ಯೆಗಳ ವಿರುದ್ಧ ಹೋರಾಡುತ್ತಿದ್ದಾರೆ. ಅನೇಕ ಬಾರಿ ಆ ಹೋರಾಟಗಳು ಪರಸ್ಪರ ಸಂಪರ್ಕವಿಲ್ಲದೆ, ಸ್ಥಳೀಯ ಮಟ್ಟಕ್ಕೆ ಸೀಮಿತವಾಗುತ್ತವೆ. ಒಂದು ಗ್ರಾಮದ ಭೂಮಿ ಸಮಸ್ಯೆ, ಇನ್ನೊಂದು ಪ್ರದೇಶದ ಮಹಿಳಾ ಸುರಕ್ಷತಾ ವಿಚಾರ, ಎಲ್ಲೋ ನಡೆಯುತ್ತಿರುವ ರೈತರ ಹೋರಾಟ ಇವೆಲ್ಲವೂ ಪ್ರತ್ಯೇಕ ಘಟನೆಗಳಂತೆ ಕಾಣಬಹುದು. ಆದರೆ ಅವುಗಳ ಹಿಂದೆ ಇರುವ 'ನ್ಯಾಯದ ಬೇಡಿಕೆ ಒಂದೇ ಆಗಿದೆ. ಈ ವಿಭಿನ್ನ ಧ್ವನಿಗಳನ್ನು ಒಂದೇ ಡಿಜಿಟಲ್ ನಕ್ಷೆಯಲ್ಲಿ ತರುವ ಪ್ರಯತ್ನವೇ 'ಸತ್ಯಾಗ್ರಹ' ವೇದಿಕೆ. ಇಡೀ ದೇಶದಲ್ಲಿ ಎಸ್.ಐ.ಆರ್ ವಿರುದ್ಧ ಸಂಘಟಿತ ಹೋರಾಟ ನಡೆಸಿ ಚುನಾವಣಾ ಆಯೋಗ ಬಾಗುವಂತೆ ಮಾಡಿದ ಕೀರ್ತಿ ಕರ್ನಾಟಕಕ್ಕೆ ಸಲ್ಲುತ್ತದೆ. ಇಂತಹ ಹಲವಾರು ಹೋರಾಟಗಳಿಗೆ ಮಹತ್ವದ ಜಾಲವಾಗಿ ಇದು ಕಾರ್ಯನಿರ್ವಹಿಸಲಿದೆ ಎಂದು ಹೇಳಿದ್ದಾರೆ.

ಜನರ ಹಕ್ಕೊತ್ತಾಯಗಳಿಗೆ ಸತ್ಯಾಗ್ರಹದ ಮೂಲಕ ರಾಹುಲ್ ಗಾಂಧಿ ಡಿಜಿಟಲೀಕರಣದ ಸ್ಪರ್ಷ ನೀಡಿದ್ದಾರೆ. ಇದರಿಂದ ಸಾಂಪ್ರದಾಯಿಕ ರಾಜಕೀಯ ಸಂಘಟನೆಗಳಾಚೆಗೆ ಒಂದು ರೀತಿಯ ಡಿಜಿಟಲ್ ಜನಚಳವಳಿ ಜಾಲ ರೂಪುಗೊಳ್ಳಲಿದೆ. ರಾಹುಲ್ ಗಾಂಧಿ ಈ ವೇದಿಕೆಯನ್ನು ವಿರೋಧ ಪಕ್ಷದ ನಾಯಕನಾಗಿ ಜನರ ಹೋರಾಟಗಳಿಗೆ ಧ್ವನಿಯಾಗುವ ಸಾಧನವಾಗಿ ಪ್ರಸ್ತುತಪಡಿಸಿದ್ದಾರೆ. ಸಂಸತ್ತಿನಲ್ಲಿ, ಬೀದಿಯಲ್ಲಿ ಅಥವಾ ಪತ್ರಗಳ ಮೂಲಕ ಸಾಧ್ಯವಾದ ರೀತಿಯಲ್ಲಿ ಜನರ ಸಮಸ್ಯೆಗಳ ಹೋರಾಟದಲ್ಲಿ ತಾವು ನಿಲ್ಲುವುದಾಗಿ ಅವರು ಹೇಳಿದ್ದಾರೆ.

ಇದು ಜನಸಾಮಾನ್ಯರ ಬದುಕಿನಲ್ಲಿ ಬದಲಾವಣೆ ತರಲಿದೆ. ಕೇವಲ ಸರ್ಕಾರದ ನೀತಿಗಳನ್ನು ಟೀಕಿಸುವ ವಿರೋಧ ಪಕ್ಷದ ನಾಯಕನ ಬದಲು, ದೇಶದ ವಿವಿಧ ಭಾಗಗಳಲ್ಲಿನ ಅಸಮಾಧಾನಗಳನ್ನು ಗುರುತಿಸಿ ಅವುಗಳನ್ನು ರಾಜಕೀಯವಾಗಿ ಒಗ್ಗೂಡಿಸುವ ಪ್ರಯತ್ನ ಇದಾಗಿದೆ. ಎರಡೂ ದೃಷ್ಟಿಕೋನಗಳು ವಾಸ್ತವತೆಯಿಂದ ಕೂಡಿವೆ. ಜನರ ಸಮಸ್ಯೆಗಳನ್ನು ರಾಜಕೀಯ ಪಕ್ಷಗಳು ವಿಭಿನ್ನವಾಗಿ ನೋಡಬೇಕು ಎಂಬುದಕ್ಕೆ ಇದು ಜ್ವಲಂತ ನಿದರ್ಶನವಾಗಿದೆ. ಈ ವೇದಿಕೆಯು ವಿಶ್ವಾಸಾರ್ಹತೆ ಹೊಂದಿದ್ದು, ಜನರ ಸಮಸ್ಯೆಗಳಿಗೆ ಆದ್ಯತೆ ದೊರೆಯಲಿದೆ. ರಾಹುಲ್ ಗಾಂಧಿ ಅವರ ತಂಡ ಪ್ರತಿಯೊಂದು ಮನವಿಯನ್ನು ಪರಿಶೀಲಿಸಿ, ಅಗತ್ಯವಿರುವ ಕಡೆ ನೆರವು ನೀಡುವುದಾಗಿ ಹೇಳಿದೆ. ಅಭಿಯಾನ ಒಂದು ದಿನದ ಕಾರ್ಯಕ್ರಮವಲ್ಲ, ದೀರ್ಘಾವಧಿಯ ಪ್ರಯತ್ನವಾಗಲಿದೆ. ಭಾರತದ ರಾಜಕೀಯದಲ್ಲಿ ಚಳವಳಿಗಳು ಹೊಸದಲ್ಲ. ಆದರೆ ಚಳವಳಿಗಳನ್ನು ಡಿಜಿಟಲ್ ನಕ್ಷೆಯಲ್ಲಿ ಜೋಡಿಸಿ, ಅವುಗಳಿಗೆ ಪರಸ್ಪರ ಸಂಪರ್ಕ ಕಲ್ಪಿಸುವ ಪ್ರಯತ್ನ ಹೊಸ ರಾಜಕೀಯ ಪ್ರಯೋಗವಾಗಿದೆ ಎಂದು ಡಾ. ಆನಂದ ಕುಮಾರ್ ಅಭಿಪ್ರಾಯಪಟ್ಟಿದ್ದಾರೆ.

ರಾಹುಲ್ ಗಾಂಧಿಯವರ 'ಸತ್ಯಾಗ್ರಹ' ವೇದಿಕೆ ಮುಂದಿನ ದಿನಗಳಲ್ಲಿ ಸ್ಪಷ್ಟ ಚಿತ್ರಣ ನೀಡಲಿದೆ. ಅದು ಕೇವಲ ಕಾಂಗ್ರೆಸ್‌ನ ಡಿಜಿಟಲ್ ಪ್ರಚಾರ ವೇದಿಕೆಯಲ್ಲ. ನಿಜವಾದ ಜನಹೋರಾಟಗಳಿಗೆ ಸಂಪರ್ಕ, ಬೆಂಬಲ ಮತ್ತು ರಾಜಕೀಯ ಪ್ರಭಾವ ಒದಗಿಸುವ ರಾಷ್ಟ್ರೀಯ ವೇದಿಕೆಯಾಗಿ ಪರಿವರ್ತನೆ ತರಲಿದೆ. ಹೋರಾಟ ವಲಯದಲ್ಲಿ ಇದು ಹೊಸ ಅಧ್ಯಾಯದ ಪುಟಗಳನ್ನು ತೆರೆಯಲಿದೆ ಎಂದಿದ್ದಾರೆ.

# 2027ರಿಂದ ಕೆಪಿಎಸ್ ಶಾಲೆಗಳಿಗೆ ಉಚಿತ ವಾಹನ ವ್ಯವಸ್ಥೆ: ಸಚಿವ ಮಧು ಬಂಗಾರಪ್ಪ ಘೋಷಣೆ

**ರಾಜ್ಯದಲ್ಲಿ 2,500 ಕರ್ನಾಟಕ ಪಬ್ಲಿಕ್ ಶಾಲೆಗಳ ನಿರ್ಮಾಣ: 4,500 ಕೋಟಿ ಅನುದಾನ ಮೀಸಲು**



ಸೊರಬ, ಅ.4: ರಾಜ್ಯದ ಸರ್ಕಾರದ ಮಹತ್ವಾಕಾಂಕ್ಷೆಯ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು (ಕೆಪಿಎಸ್) ಶೀಘ್ರದಲ್ಲೇ ತೆರೆಯಲಿದೆ. ಮುಂದಿನ ವರ್ಷದಿಂದ ಕನ್ನಡ ಮತ್ತು ಇಂಗ್ಲಿಷ್ ದ್ವಿಭಾಷಾ ನೀತಿ ಜಾರಿಗೊಳಿಸಲಿರುವ ರಾಜ್ಯ ಸರ್ಕಾರ ಅಗತ್ಯ ಅನುದಾನ ಮೀಸಲಿಟ್ಟಿದೆ. ವಿಶೇಷವೆಂದರೆ 2027ರಿಂದ ಕೆಪಿಎಸ್ ಶಾಲೆಗಳಿಗೆ ಉಚಿತ ಶಾಲಾವಾಹನಗಳು ಓಡಾಲಿವೆ. ಈ ಕುರಿತು ಖುದ್ದಿ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರೇ ಮಾಹಿತಿ ನೀಡಿದ್ದಾರೆ.ಭಾನುವಾರ ಸೊರಬ ವಿಧಾನಸಭಾ ಕ್ಷೇತ್ರಕ್ಕೆ ಒಳಪಡುವ ಸಾಗರ ತಾಲ್ಲೂಕಿನ ತಾಳಗುಪ್ಪ ಹೋಬಳಿ ವ್ಯಾಪ್ತಿಯಲ್ಲಿ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ. ಇಂದು ಸುಮಾರು 2 ಕೋಟಿ ಅನುದಾನದಲ್ಲಿ ವಿವಿಧ ಗ್ರಾಮಗಳ ರಸ್ತೆ ಅಭಿವೃದ್ಧಿ ಮತ್ತು ವಿವಿಧ ಕಾಮಗಾರಿಗಳಿಗೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರೂ ಆದ ಮಧು ಬಂಗಾರಪ್ಪ ಅವರು ಶಂಕುಸ್ಥಾಪನೆ ನೆರವೇರಿಸಿದರು.

ಕೆಪಿಎಸ್ ಶಾಲೆಗಳಿಗೆ ಉಚಿತ ಶಾಲಾ ವಾಹನ-ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳು ಎದುರಿಸುತ್ತಿರುವ ಸಾರಿಗೆ ಸಮಸ್ಯೆಯ ಬಗ್ಗೆ ಪ್ರಸ್ತಾಪಿಸಿದರು. ನಾನು ಎಲ್ಲಿಗೆ ಹೋದರೂ ಸರ್ಕಾರಿ ಶಾಲಾ ಮಕ್ಕಳಿಗೆ ಬಸ್ ವ್ಯವಸ್ಥೆಯ ಸಮಸ್ಯೆ ಗಮನಕ್ಕೆ ಬರುತ್ತಿದೆ. ಇನ್ನು ಮುಂದೆ ಈ ಸಮಸ್ಯೆ ಇರಬಾರದು ಎಂಬ ಉದ್ದೇಶದಿಂದ ಮುಂದಿನ ವರ್ಷದಿಂದ ಕೆಪಿಎಸ್ ಶಾಲೆಗಳಿಗೆ ವಿಶೇಷ ವಾಹನಗಳ ವ್ಯವಸ್ಥೆಯನ್ನು ಉಚಿತವಾಗಿ ಕಲ್ಪಿಸಲು ತೀರ್ಮಾನಿಸಿದ್ದೇವೆ ಎಂದು ಘೋಷಿಸಿದರು.ನಿಮ್ಮ ಒಂದು ಮತ ನನಗೆ 1 ಕೋಟಿ 14 ಲಕ್ಷ ಮಕ್ಕಳ ಸೇವೆ ಮಾಡುವ ಭಾಗ್ಯ ಕಲ್ಪಿಸಿದೆ. ರಾಜ್ಯದಲ್ಲಿ 44 ಸಾವಿರ ಸರ್ಕಾರಿ ಶಾಲೆಗಳಿವೆ. ಮುಂದಿನ ದಿನಗಳಲ್ಲಿ 2,500 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ನಿರ್ಮಿಸುವ ಗುರಿ ಹೊಂದಿದ್ದೇವೆ. ಮೊದಲ ಹಂತದಲ್ಲಿ 1,000 ಕೆಪಿಎಸ್ ಶಾಲೆಗಳು ನಿರ್ಮಾಣವಾಗಲಿವೆ ಎಂದರು.

4,500 ಕೋಟಿ ಅನುದಾನ-ಉದ್ದೇಶಿತ ಕೆಪಿಎಸ್ ಶಾಲೆಗಳ ನಿರ್ಮಾಣಕ್ಕೆ ಸರ್ಕಾರವು 4,500 ಕೋಟಿ ಅನುದಾನ ಮೀಸಲಿಟ್ಟಿದೆ. ಕೆಪಿಎಸ್ ಶಾಲೆಗಳು ರಾಜ್ಯದ ಮಾದರಿ ಶಾಲೆಗಳಾಗುವುದರಲ್ಲಿ ಯಾವುದೇ ಅನುಮಾನವಿಲ್ಲ. ನಮ್ಮ ನಾಯಕ ರಾಹುಲ್ ಗಾಂಧಿ ಅವರೂ ಕೆಪಿಎಸ್ ಶಾಲೆಗಳ ಪರಿಕಲ್ಪನೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ" ಎಂದರು.

ಪೂರ್ವ ಪ್ರಾಥಮಿಕ ಶಿಕ್ಷಣದಿಂದ ಪಿಯುಸಿ ಹಂತದವರೆಗೆ ಒಂದೇ ಕ್ಯಾಂಪಸ್ನಲ್ಲಿ ಶಿಕ್ಷಣ ಪಡೆಯುವ ವ್ಯವಸ್ಥೆ ಕಲ್ಪಿಸಲಾಗುವುದು. ಖಾಸಗಿ ಶಾಲೆಗಳಿಗಿಂತ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಕೆಪಿಎಸ್ ಶಾಲೆಗಳಲ್ಲಿ ನೀಡುವ ಗುರಿ ಇಟ್ಟುಕೊಂಡಿದ್ದೇವೆ ಎಂದು ತಿಳಿಸಿದರು.

31 ಸಾವಿರ ಶಿಕ್ಷಕರ ನೇಮಕಾತಿ-ಸಚಿವನಾದ ಬಳಿಕ ಹಿಂದಿನ ಬಿಜೆಪಿ ಸರ್ಕಾರ ಬಾಕಿ ಉಳಿಸಿದ್ದ 13 ಸಾವಿರ ಶಿಕ್ಷಕರ ನೇಮಕಾತಿ ಪ್ರಕ್ರಿಯೆಯನ್ನು ತ್ವರಿತಗೊಳಿಸಿ ಶಿಕ್ಷಕರಿಗೆ ನೇಮಕಾತಿ ಆದೇಶ ನೀಡಿದ್ದೇನೆ. ಇದೀಗ 17,500 ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಆರಂಭವಾಗಿದೆ. ಡಿಸೆಂಬರ್ ಒಳಗೆ ಪ್ರಕ್ರಿಯೆ ಪೂರ್ಣಗೊಳ್ಳಲಿದೆ. ನನ್ನ ಅವಧಿಯಲ್ಲಿ ಒಟ್ಟು 31 ಸಾವಿರ ಶಿಕ್ಷಕರ ನೇಮಕಾತಿ ಮಾಡಿದಂತಾಗಲಿದೆ ಎಂದು ವಿವರಿಸಿದರು.

ತಾಳಗುಪ್ಪ ಹೋಬಳಿಯ ಶಿರವಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಾಳಿಪುರ ಗ್ರಾಮದ ಸಮುದಾಯ ಭವನದ ಮುಂಭಾಗದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಸಚಿವರು ಭೂಮಿಪೂಜೆ ನೆರವೇರಿಸಿದರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅನುದಾನದಲ್ಲಿ 35 ಲಕ್ಷ ವೆಚ್ಚದಲ್ಲಿ ಈ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ.

ಅದೇ ರೀತಿ ಶಿರವಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸುಂಕದೇವರಕೊಪ್ಪ ಗ್ರಾಮದ ಹೆದ್ದಾರಿ-69ರಿಂದ ಗುರಲಗುಂಜಿ ಮಾರ್ಗವಾಗಿ ನವುಲೆಮನೆ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿ ಕಾಮಗಾರಿಗೆ 35 ಲಕ್ಷ ವೆಚ್ಚದಲ್ಲಿ ಸಚಿವ ಮಧು ಬಂಗಾರಪ್ಪ ಅವರು ಗುದ್ದಲಿಪೂಜೆ ನೆರವೇರಿಸಿದರು.

ಕಾನಲೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಡೇಮನೆ ಗ್ರಾಮದ ಮೇಲಿಕೇರಿ ರಸ್ತೆ ಅಭಿವೃದ್ಧಿಗೆ 40 ಲಕ್ಷ ಹಾಗೂ ಕೆಲುವೆ ಗ್ರಾಮದ ಗುಡ್ಡೆಕೇರಿ ರಸ್ತೆ ಅಭಿವೃದ್ಧಿಗೆ 40 ಲಕ್ಷ ವೆಚ್ಚದ ಕಾಮಗಾರಿಗಳಿಗೆ ಸಚಿವರು ಶಂಕುಸ್ಥಾಪನೆ ನೆರವೇರಿಸಿದರು.ಇದೇ ಸಂದರ್ಭದಲ್ಲಿ ಸೈದೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸೈದೂರು ಪ್ರಾಥಮಿಕ ಪಶು ಚಿಕಿತ್ಸಾಲಯದ ನೂತನ ಕಟ್ಟಡ ನಿರ್ಮಾಣಕ್ಕೆ 50 ಲಕ್ಷ ವೆಚ್ಚದಲ್ಲಿ ಸಚಿವ ಮಾಡು ಬಂಗಾರಪ್ಪ ಅವರು ಭೂಮಿಪೂಜೆ ನೆರವೇರಿಸಿದರು.

ತಾಳಗುಪ್ಪ ಭಾಗದ ರಸ್ತೆ ಅಭಿವೃದ್ಧಿಗೆ ವಿಶೇಷ ಆದ್ಯತೆ-ಸುಂಕದೇವರಕೊಪ್ಪ ಗ್ರಾಮದಲ್ಲಿ ಮಾತನಾಡಿದ ಸಚಿವ ಮಧು ಬಂಗಾರಪ್ಪ ಅವರು, "ನನ್ನ ಅನುದಾನವನ್ನು ರಸ್ತೆಗಳ ಅಭಿವೃದ್ಧಿಗೆ ಹೆಚ್ಚು ಬಳಸುತ್ತಿದ್ದೇನೆ. ಇತ್ತೀಚೆಗೆ ಸುರಿದ ಮಳೆಯಿಂದ ಹಲವು ಕಡೆ ರಸ್ತೆಗಳು ಹಾಳಾಗಿವೆ. ತಾಳಗುಪ್ಪ ಭಾಗದ ರಸ್ತೆ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಿದ್ದೇನೆ" ಎಂದು ಹೇಳಿದರು.

ಸಾಗರ ಬರಪೀಡಿತ ತಾಲೂಕು ಘೋಷಣೆಗೆ ಮನವಿ-ಇದೇ ವೇಳೆ ಸಾಗರ ತಾಲ್ಲೂಕನ್ನು ಬರಪೀಡಿತ ತಾಲೂಕು ಎಂದು ಘೋಷಿಸುವಂತೆ ಸ್ಥಳೀಯರು ಸಚಿವ ಮಧು ಬಂಗಾರಪ್ಪ ಅವರಿಗೆ ಮನವಿ ಸಲ್ಲಿಸಿದರು.

ಸ್ಪಂದಿಸಿದ ಸಚಿವರು, ಸೋಮವಾರ ಸಾಗರದಲ್ಲಿ ಪ್ರಜಾಸೇವೆ ಕಾರ್ಯಕ್ರಮ ನಡೆಯಲಿದೆ. ಅಲ್ಲಿ ನಿಮ್ಮ ಸಾಗರ ಶಾಸಕರೂ ಇರಲಿದ್ದಾರೆ. ನಿಮ್ಮ ಮನವಿಯನ್ನು ಸಚಿವ ಸಂಪುಟ ಸಭೆಯ ಗಮನಕ್ಕೆ ತಂದು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲಾಗುವುದು ಎಂದು ಭರವಸೆ ಕೊಟ್ಟರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಬರ: ರೈತರಿಗೆ 50 ಸಾವಿರ ರೂ. ಪರಿಹಾರ ನೀಡಲು ವಿಜಯೇಂದ್ರ ಆಗ್ರಹ

**ಬೆಂಗಳೂರು ಅ.4:** ಪ್ರಧಾನಿ ನರೇಂದ್ರ ಮೋದಿ ಅವರು 25 ವರ್ಷಗಳ ಸಾರ್ವಜನಿಕ ಜೀವನದಲ್ಲಿ ದೇಶವನ್ನು ಸದೃಢಗೊಳಿಸುವ ನಿಟ್ಟಿನಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಅವರ ಸೇವಾ ಸಂಕಲ್ಪದ ಹಿನ್ನೆಲೆಯಲ್ಲಿ ಬಿಜೆಪಿ ದೇಶಾದ್ಯಂತ ಸೇವಾ ಸಂಕಲ್ಪ ಅಭಿಯಾನವನ್ನು ಹಮ್ಮಿಕೊಂಡಿದ್ದು, ಸಮಾಜಮುಖಿ ಕಾರ್ಯಕ್ರಮಗಳನ್ನು ನಡೆಸುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು. ತುಮಕೂರು ಜಿಲ್ಲೆ ಗುಬ್ಬಿ ತಾಲೂಕಿನ ಹಾಗಲವಾಡಿ ಜುಂಜಪ್ಪನ ಹಟ್ಟಿಯಲ್ಲಿ ಸುದ್ದಿಗಾರ ರೊಂದಿಗೆ ಮಾತನಾಡಿದ ಅವರು, ಸೇವಾ ಸಂಕಲ್ಪ ಹಾಗೂ ಬೂತ್ ಸಂಕಲ್ಪವನ್ನು ಒಟ್ಟಾಗಿ ನಡೆಸಲಾಗುತ್ತಿದೆ. ಕಾಡುಗೊಲ್ಲರ ಜುಂಜಪ್ಪನ ಹಟ್ಟಿಯಲ್ಲಿ ದೇವರ ಸೇವೆ ಮಾಡುವ ಮೂಲಕ ಈ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ ಎಂದರು.

**ಬರ ಪರಿಹಾರದಲ್ಲಿ ಸರ್ಕಾರದ ನಿರ್ಲಕ್ಷ್ಯ:**

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಚುನಾಯಿತ ಸರ್ಕಾರವೊಂದು ರಾಜ್ಯದಲ್ಲಿ ಆಡಳಿತ ನಡೆಸುತ್ತಿದೆ ಎಂಬ ಭಾವನೆ ಜನರಿಗೆ ಮೂಡುತ್ತಿಲ್ಲ ಎಂದು ವಿಜಯೇಂದ್ರ ಟೀಕಿಸಿದರು. ರಾಜ್ಯದಲ್ಲಿ ಭೀಕರ ಬರ ಪರಿಸ್ಥಿತಿ ಇದ್ದರೂ ಕೇಂದ್ರ ಸರ್ಕಾರದ ಅನುದಾನಕ್ಕಾಗಿ ಕಾಯುತ್ತಾ ಕುಳಿತಿರುವ ರಾಜ್ಯ ಸರ್ಕಾರ, ಒಂದು ಹೆಕ್ಟೇರ್‌ಗೆ ಕೇವಲ 2,500 ಪರಿಹಾರ ಘೋಷಿಸಿರುವುದು ಅತ್ಯಂತ ಕಡಿಮೆ ಮೊತ್ತವಾಗಿದೆ ಎಂದು ಅವರು ಆಕ್ಷೇಪಿಸಿದರು. ಬರದಿಂದ ಸಂಕಷ್ಟದಲ್ಲಿರುವ ರೈತರಿಗೆ ಎಕರೆಗೆ 50 ಸಾವಿರ ಪರಿಹಾರ ನೀಡಬೇಕು ಎಂದು ಬಿಜೆಪಿ ಆಗ್ರಹಿಸಿದೆ. ರೈತರ ಸಂಕಷ್ಟಕ್ಕೆ ಸೂಕ್ತ ಸ್ಪಂದನೆ ನೀಡುವ ಬದಲು ಸರ್ಕಾರ ಅತ್ಯಲ್ಪ ಪರಿಹಾರ ಘೋಷಿಸಿದೆ ಎಂದು ವಿಜಯೇಂದ್ರ ಹೇಳಿದರು. ಮುಖ್ಯಮಂತ್ರಿ ರೈತರಿಗಿಂತ ರಿಯಲ್ ಎಸ್ಟೇಟ್ ಕ್ಷೇತ್ರದ ಬಗ್ಗೆ ಹೆಚ್ಚಿನ ಕಾಳಜಿ ಇದೆ ಎಂಬ ಆರೋಪವನ್ನು ಜನರೇ ಮಾಡುತ್ತಿದ್ದಾರೆ ಎಂದು ಅವರು ಹೇಳಿದರು. ಬರ ಪರಿಹಾರಕ್ಕಾಗಿ ಸರ್ಕಾರದ ಪಕ್ಷದ ಶಾಸಕರೇ ರಾಜೀನಾಮೆ



ನೀಡುವ ಮಾತುಗಳನ್ನು ಆಡುತ್ತಿದ್ದಾರೆ ಎಂದು ವಿಜಯೇಂದ್ರ ಹೇಳಿದರು.

**ಗ್ಯಾರಂಟಿಗಳಿಂದ ಖಜಾನೆ ಖಾಲಿಯಾಗಿದೆ: ವಿಜಯೇಂದ್ರ**

ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಖಜಾನೆ ಖಾಲಿಯಾಗಿದ್ದು, ಸರ್ಕಾರಿ ನೌಕರರಿಗೆ ಸಂಬಳ ನೀಡಲೂ ಹಣದ ಕೊರತೆ ಎದುರಾಗಿದೆ ಎಂದು ವಿಜಯೇಂದ್ರ ಆರೋಪಿಸಿದರು. ರಾಜ್ಯದ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದೆ. ಪೊಲೀಸ್ ಇಲಾಖೆ ಹಾಗೂ ನೀರಾವರಿ ಇಲಾಖೆಯ ಸಿಬ್ಬಂದಿಗೂ ಸಂಬಳ ನೀಡಲು ಹಣವಿಲ್ಲ ಎಂಬ ಪರಿಸ್ಥಿತಿ ನಿರ್ಮಾಣವಾಗಿದೆ. ಸರ್ಕಾರ ನೈಜ ಹಣಕಾಸು ಸ್ಥಿತಿಯನ್ನು ಜನರ ಮುಂದೆ

### ಮುಖ್ಯಮಂತ್ರಿ ಅಧಿಕಾರ ದುರುಪಯೋಗದ ಆರೋಪ

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಅಧಿಕಾರವನ್ನು ದುರುಪಯೋಗ ಪಡಿಸಿಕೊಳ್ಳುತ್ತಿದ್ದಾರೆ ಎಂದು ವಿಜಯೇಂದ್ರ ಆರೋಪಿಸಿದರು. ಟ್ವೆಸ್ ಯೋಜನೆಗೆ ಸಂಬಂಧಿಸಿದಂತೆ ಸರ್ಕಾರ ಟೇಕ್‌ಓವರ್ ಮಾಡಲು ಮುಂದಾಗಿದೆ. ಬಿಡದಿ ಟೌನ್‌ಶಿಪ್ ಯೋಜನೆಯನ್ನು ಸ್ಥಳೀಯ ವಿರೋಧದ ನಡುವೆಯೂ ಮುಂದುವರಿಸಲು ಸರ್ಕಾರ ಪ್ರಯತ್ನಿಸುತ್ತಿದೆ ಎಂದು ಅವರು ಆರೋಪಿಸಿದರು.

### ಫಾರಂ-7 ವಿಚಾರದಲ್ಲಿ ಬಿಜೆಪಿ ಕಾರ್ಯಕರ್ತರ ವಿರುದ್ಧ ಎಫ್‌ಐಆರ್

ಚುನಾವಣಾ ಆಯೋಗದ ನಿಯಮಗಳ ಪ್ರಕಾರ ಮತದಾರರ ಪಟ್ಟಿಯಲ್ಲಿ ಅನುಮಾನಾಸ್ಪದವಾಗಿ ಕಂಡುಬರುವ ಮತದಾರರ ಬಗ್ಗೆ ಆಕ್ಷೇಪ ಸಲ್ಲಿಸಲು ಫಾರಂ–7 ಮೂಲಕ ಅವಕಾಶವಿದೆ. ಆದರೆ ಇದೇ ಫಾರಂ ವಿಚಾರವನ್ನು ಮುಂದಿಟ್ಟುಕೊಂಡು ಚುನಾವಣಾ ಆಯೋಗದ ವಿರುದ್ಧ ಪ್ರತಿಭಟನೆ ನಡೆಸಲಾಗಿದ್ದು, ಬಿಜೆಪಿ ಕಾರ್ಯಕರ್ತರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ವಿಜಯೇಂದ್ರ ಹೇಳಿದರು. ನಾವು ಸಲ್ಲಿಸಿದ ಅರ್ಜಿಗಳು ನಿಯಮಬದ್ಧವಾಗಿಲ್ಲದಿದ್ದರೆ ಸಂಬಂಧಪಟ್ಟ ಅಧಿಕಾರಿಗಳು ಅವುಗಳನ್ನು ತಿರಸ್ಕರಿಸುತ್ತಾರೆ. ಅದಕ್ಕಾಗಿ ಬಿಜೆಪಿ ಕಾರ್ಯಕರ್ತರ ವಿರುದ್ಧ ಪ್ರಕರಣ ದಾಖಲಿಸುವ ಅಗತ್ಯವೇನು ಎಂದು ಅವರು ಪ್ರಶ್ನಿಸಿದರು.

ಇದಲ್ಲದೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಶ್ವೇತಪತ್ರ ಹೊರಡಿಸಬೇಕು ಎಂದು ಒತ್ತಾಯಿಸಿದರು. ಬಡವರ ಹಾಗೂ ರೈತರಿಗೆ ಸಂಬಂಧಿಸಿದ ವಿಚಾರಗಳಲ್ಲಿ ಸರ್ಕಾರದ ಕ್ರಮಗಳ ಬಗ್ಗೆ ವಿಜಯೇಂದ್ರ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು.

**ಜನರೊಂದಿಗೆ ಸೇರಿ ಬದಲಾವಣೆಗೆ ಸಂಕಲ್ಪ:**

ಕಾಂಗ್ರೆಸ್ ಸರ್ಕಾರ ಆಡಳಿತದಿಂದ ಜನರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಮಾತನಾಡಿದ ವಿಜಯೇಂದ್ರ, ಬಡವರು ಮತ್ತು ರೈತರ ಪರವಾಗಿ ಬಿಜೆಪಿ ನಿರಂತರವಾಗಿ ಧ್ವನಿ ಎತ್ತಲಿದೆ ಎಂದರು. ಈ ಸರ್ಕಾರವನ್ನು ಬದಲಾಯಿಸಬೇಕು ಎಂಬ ಸಂಕಲ್ಪವನ್ನು ನಾವು ಮತ್ತು ಜನರು ಮಾಡಿದ್ದೇವೆ. ಮುಂದಿನ ದಿನಗಳಲ್ಲಿ ಬಿಜೆಪಿ ಅಧಿಕಾರಕ್ಕೆ ಬರುವ ನಿಟ್ಟಿನಲ್ಲಿ ಸಂಘಟನೆ ಹಾಗೂ ಜನರೊಂದಿಗೆ ನಿರಂತರವಾಗಿ ಕೆಲಸ ಮಾಡುತ್ತೇವೆ ಎಂದು ವಿಜಯೇಂದ್ರ ಹೇಳಿದರು.

## ಅಂತರ್ಜಲ ಮರುಪೂರಣಕ್ಕೆ ಜಲಮೂಲಗಳ ಬಳಕೆ: ಅಜಯ್ ಸಿಂಗ್

**ಬೆಂಗಳೂರು ಅ.4:** ಕರ್ನಾಟಕದಲ್ಲಿ ಬಳಕೆಯಲ್ಲಿರುವ ಜಲಮೂಲಗಳ ಪೈಕಿ ಸುಮಾರು ಶೇ.30ರಷ್ಟು ಜಲಮೂಲಗಳು ಅಂತರ್ಜಲ ಮರುಪೂರಣಕ್ಕೆ ಪ್ರಮುಖವಾಗಿ ಬಳಕೆಯಾಗುತ್ತಿದ್ದು, ರಾಜ್ಯದ ಜಲಸುರಕ್ಷತಾ ವ್ಯವಸ್ಥೆಯಲ್ಲಿ ಕೆರೆ, ಕಟ್ಟೆ ಮತ್ತು ಟ್ಯಾಂಕ್‌ಗಳು ಪ್ರಮುಖ ಪಾತ್ರ ವಹಿಸುತ್ತಿವೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಅಜಯ್ ಧರ್ಮಸಿಂಗ್ ತಿಳಿಸಿದ್ದಾರೆ.

ಕೇಂದ್ರ ಜಲಶಕ್ತಿ ಸಚಿವಾಲಯದ ಎರಡನೇ ಜಲಮೂಲಗಳ ಗಣತಿ ಪ್ರಕಾರ, ಕರ್ನಾಟಕದಲ್ಲಿ ಬಳಕೆಯಲ್ಲಿರುವ 28,075 ಜಲಮೂಲಗಳ ಪೈಕಿ 8,353, ಅಂದರೆ ಸುಮಾರು ಶೇ.29.8ರಷ್ಟು, ಅಂತರ್ಜಲ ಮರುಪೂರಣಕ್ಕಾಗಿ ಪ್ರಮುಖವಾಗಿ ಬಳಸಲಾಗುತ್ತಿದೆ. ದಕ್ಷಿಣ ಭಾರತದ ಪ್ರಮುಖ ರಾಜ್ಯಗಳೊಂದಿಗೆ ಹೋಲಿಸಿದಾಗ ಈ ಪ್ರಮಾಣ ತಮಿಳುನಾಡಿನಲ್ಲಿ ಶೇ.34.3, ಕರ್ನಾಟಕದಲ್ಲಿ ಶೇ.29.8, ತೆಲಂಗಾಣದಲ್ಲಿ ಶೇ.27.5, ಆಂಧ್ರಪ್ರದೇಶದಲ್ಲಿ ಶೇ.19.2 ಮತ್ತು ಕೇರಳದಲ್ಲಿ ಶೇ.15.3ರಷ್ಟಿದೆ.



ಇದು ರಾಜ್ಯಗಳ ನಡುವಿನ ಹೋಲಿಕೆಗೆ ಸೀಮಿತವಾದ ವಿಷಯವಲ್ಲ. ಮಳೆಯ ಏರುಪೇರು ಮತ್ತು ಬರಪರಿಸ್ಥಿತಿಯನ್ನು ಎದುರಿಸುವ ಕರ್ನಾಟಕಕ್ಕೆ ಅಂತರ್ಜಲ ಮರುಪೂರಣವೇ ದೀರ್ಘಕಾಲೀನ ಜಲಭದ್ರತೆಯ ಪ್ರಮುಖ ಆಧಾರ. ಕೆರೆ, ಕಟ್ಟೆ ಮತ್ತು ಟ್ಯಾಂಕ್‌ಗಳು ಕೇವಲ ನೀರು ಸಂಗ್ರಹಿಸುವ ಮೂಲಗಳಲ್ಲ; ಅವು ನಮ್ಮ ಭವಿಷ್ಯದ ಅಂತರ್ಜಲವನ್ನು ಉಳಿಸುವ ವ್ಯವಸ್ಥೆಗಳು, ಎಂದು ಡಾ.ಅಜಯ್ ಧರ್ಮಸಿಂಗ್ ಹೇಳಿದರು.

ರಾಜ್ಯದ ಸುಮಾರು ಶೇ.96ರಷ್ಟು ಜಲಮೂಲಗಳು ಗ್ರಾಮೀಣ ಪ್ರದೇಶಗಳಲ್ಲಿ ಇರುವುದರಿಂದ, ಅವುಗಳ ಸಂರಕ್ಷಣೆ ಮತ್ತು ಮರುಪೂರಣ ಸಾಮರ್ಥ್ಯ ಹೆಚ್ಚಿಸುವುದು ಕೃಷಿ, ಕುಡಿಯುವ ನೀರು, ಪಶುಸಂಗೋಪನೆ ಹಾಗೂ ಗ್ರಾಮೀಣ ಜಲಸುರಕ್ಷತೆಗೆ ನೇರವಾಗಿ ಸಂಬಂಧಿಸಿದೆ ಎಂದು ಸಚಿವರು ತಿಳಿಸಿದರು. ಅಂತರ್ಜಲ ಮರುಪೂರಣಕ್ಕೆ ಪ್ರಮುಖವಾಗಿ ಬಳಕೆಯಾಗುತ್ತಿರುವ 8,353 ಜಲಮೂಲಗಳಲ್ಲಿ 5,302 ಜಲಮೂಲಗಳು, 1,548 ಕೆರೆಗಳು ಹಾಗೂ 1,267 ಕೊಳಗಳು ಸೇರಿವೆ. ಇದು ಕರ್ನಾಟಕದ ಸಾಂಪ್ರದಾಯಿಕ ಜಲಮೂಲ ವ್ಯವಸ್ಥೆಗಳು ಇಂದಿಗೂ ಅಂತರ್ಜಲ ಸಂರಕ್ಷಣೆಯಲ್ಲಿ ಪರಿಣಾಮಕಾರಿ ಪಾತ್ರ ವಹಿಸುತ್ತಿರುವುದನ್ನು ತೋರಿಸುತ್ತದೆ.

ಮುಂದಿನ ಹಂತದಲ್ಲಿ ಜಲಾನಯನ

- **28,075 ಬಳಕೆಯಲ್ಲಿರುವ ಜಲಮೂಲಗಳಲ್ಲಿ 8,353 ಜಲಮೂಲಗಳ ಪ್ರಮುಖ ಬಳಕೆ ಅಂತರ್ಜಲ ಮರುಪೂರಣಕ್ಕೆ**
- **ಶೇ.96ರಷ್ಟು ಜಲಮೂಲಗಳು ಗ್ರಾಮೀಣ ಪ್ರದೇಶಗಳಲ್ಲಿ; ಕೆರೆ–ಕಟ್ಟೆಗಳ ಮರುಪೂರಣ ಸಾಮರ್ಥ್ಯ ಹೆಚ್ಚಿಸಲು ಒತ್ತು**

ಪ್ರದೇಶಗಳ ಸಂರಕ್ಷಣೆ, ಹೂಳು ತೆರವು, ಕೆರೆಗಳ ಪುನಶ್ಚೇತನ ಹಾಗೂ ಮಳೆನೀರಿನ ಸಂಗ್ರಹವನ್ನು ಅಂತರ್ಜಲ ನಿರ್ವಹಣೆಯೊಂದಿಗೆ ಸಮಗ್ರವಾಗಿ ಜೋಡಿಸಬೇಕು. ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಜಲಮೂಲಗಳ ಮರುಪೂರಣ ಸಾಮರ್ಥ್ಯ ಹೆಚ್ಚಿಸುವುದು ನಮ್ಮ ಆದ್ಯತೆಯಾಗಲಿದೆ ಎಂದು ತಿಳಿಸಿದ್ದಾರೆ.




ಶ್ರೀನಗರದ ಲಾಲ್‌ಚೌಕ್‌ನಲ್ಲಿ ಅಲ್ಪಸಂಖ್ಯಾತ ಮೋರ್ಚಾದ ರಾಷ್ಟ್ರೀಯ ಅಧ್ಯಕ್ಷರ ಭೇಟಿಯ ಅಂಗವಾಗಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಬಿಜೆಪಿ ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ರೈಲ್ವೆ ರಾಜ್ಯ ಸಚಿವ ಸೋಮಣ್ಣ ಮಾತನಾಡಿದರು. ರಾಷ್ಟ್ರೀಯ ಮೋರ್ಚಾ ಅಧ್ಯಕ್ಷ ಕುನ್ವರ್ ರಶೀದ್ ಅಲಿ, ಜಿಲ್ಲಾ ಮೋರ್ಚಾ ಅಧ್ಯಕ್ಷ ರಂಜಿತ್ ಸಿಂಗ್, ಶ್ರೀನಗರ ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಇಂತಿತಾಜ್ ಭಟ್ ಹಾಗೂ ಶ್ರೀನಗರ ಜಿಲ್ಲಾ ಬಿಜೆಪಿಯ ಇತರ ಪದಾಧಿಕಾರಿಗಳು ಹಾಜರಿದ್ದರು.

## ಮೈಸೂರು ದಸರಾ ನಾಡಕುಸ್ತಿ ಪಂದ್ಯಾವಳಿಗೆ ಚಾಲನೆ



**ಮೈಸೂರು,ಅ.4:** ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಗಳಲ್ಲಿ ಒಂದಾದ 'ದಸರಾ ನಾಡಕುಸ್ತಿ' ಪಂದ್ಯಾವಳಿಯ ಸಾಂಪ್ರದಾಯಿಕ ಜೋಡಿ ಕಟ್ಟುವ ಕಾರ್ಯಕ್ರಮಕ್ಕೆ ನಗರಾಭಿವೃದ್ಧಿ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಯತೀಂದ್ರ ಸಿದ್ದರಾಮಯ್ಯ ಅವರು ಭಾನುವಾರ ಚಾಲನೆ ನೀಡಿದರು.ನಗರದ ಡಿ. ದೇವರಾಜ ಅರಸ್ ವಿವಿಧೋದ್ದೇಶ ಕ್ರೀಡಾಂಗಣದಲ್ಲಿ ನೆರವೇರಿದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಚಾಲನೆ ನೀಡಿ, ಮಾತನಾಡಿದ ಸಚಿವರು, ಮೈಸೂರಿನ ಸಾಂಸ್ಕೃತಿಕ ಹಿರಿಮೆಯ ದಸರಾ ಮಹೋತ್ಸವದಷ್ಟೇ ನಮ್ಮ ಮಣ್ಣಿನ ಕ್ರೀಡೆಯಾದ ಕುಸ್ತಿಗೂ ಸುದೀರ್ಘವಾದ ಇತಿಹಾಸವಿದೆ. ಸ್ಥಳೀಯ ಹಾಗೂ ರಾಜ್ಯದ ಕ್ರೀಡಾಪಟುಗಳಿಗೆ ಸೂಕ್ತ ವೇದಿಕೆ ಮತ್ತು ಪ್ರೋತ್ಸಾಹ ನೀಡುವುದೇ ಈ ಕ್ರೀಡಾಕೂಟದ ಮುಖ್ಯ ಉದ್ದೇಶವಾಗಿದೆ ಎಂದರು. ಇಂತಹ ಕ್ರೀಡೆಗಳಲ್ಲಿ ಸೋಲು ಗೆಲುವಿಗಿಂತ ಭಾಗವಹಿಸುವಿಕೆ ಮತ್ತು ಕ್ರೀಡಾಸ್ಫೂರ್ತಿ ಅತ್ಯಂತ ಮುಖ್ಯ ಎಂದು ತಿಳಿಸಿ, ಕುಸ್ತಿ ಪಂದ್ಯಾವಳಿಯಲ್ಲಿ ಭಾಗವಹಿಸುತ್ತಿರುವ ಎಲ್ಲಾ ಪೈಲ್ವಾನರಿಗೂ ಹಾಗೂ ಕ್ರೀಡಾಪಟುಗಳಿಗೂ ಶುಭ ಹಾರೈಸಿ ಅಭಿನಂದನೆ ಸಲ್ಲಿಸಿದರು.ಇದೇ ವೇಳೆ 2026ರ ದಸರಾ ಕುಸ್ತಿ ಪಂದ್ಯಾವಳಿಯ ಅಧಿಕೃತ ಪೋಸ್ಟರ್ ಅನ್ನು ಬಿಡುಗಡೆ ಮಾಡಲಾಯಿತು.ಈ ಸಂದರ್ಭದಲ್ಲಿ ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್. ಶ್ರೀವತ್ಸ, ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಮಲ್ಲಿಕಾರ್ಜುನ ಬಾಲದಂಡಿ, ಅಪರ ಪೊಲೀಸ್ ವರಿಷ್ಠಾಧಿಕಾರಿಗಳಾದ ನಾಗೇಶ್. ಎಲ್, ದಸರಾ ಕುಸ್ತಿ ಸಮಿತಿಯ ಕಾರ್ಯಾಧ್ಯಕ್ಷರಾದ ಧರ್ಮೇಂದ್ರ, ಕಾರ್ಯದರ್ಶಿಗಳಾದ ನರಸಿಂಹ ಮೂರ್ತಿ ಸೇರಿದಂತೆ ಹಲವು ಹಿರಿಯ ಅಧಿಕಾರಿಗಳು, ಗಣ್ಯರು ಹಾಗೂ ನೂರಾರು ಕುಸ್ತಿಪಟುಗಳು ಉಪಸ್ಥಿತರಿದ್ದರು.

## ರಾಜ್ಯಾದ್ಯಂತ ಕೇಂದ್ರ ಬರ ಅಧ್ಯಯನ ತಂಡದ ಪ್ರವಾಸ: ಇಂದು ಕೇಂದ್ರಕ್ಕೆ ವರದಿ

**ಬೆಂಗಳೂರು,ಅ.4:** ರಾಜ್ಯದಲ್ಲಿ ಉಂಟಾಗಿರುವ ತೀವ್ರ ಬರಪರಿಸ್ಥಿತಿಯ ಅಧ್ಯಯನಕ್ಕಾಗಿ ಕೇಂದ್ರ ಸರ್ಕಾರದ ವಿವಿಧ ಸಚಿವಾಲಯಗಳ ಉನ್ನತಾಧಿಕಾರಿಗಳ ತಂಡವು ರಾಜ್ಯಾದ್ಯಂತ ಪ್ರವಾಸ ಕೈಗೊಂಡಿದೆ. ಇದೇ 6ರವರೆಗೆ ಅಧಿಕಾರಿಗಳು ಬರ ಅಧ್ಯಯನ ಕೈಗೊಂಡು, ಕೇಂದ್ರ ಸರ್ಕಾರಕ್ಕೆ ವರದಿ ಸಲ್ಲಿಸಲಿದ್ದಾರೆ.

ಅಧಿಕಾರಿಗಳ ಈ ತಂಡವನ್ನು ಒಟ್ಟು ಮೂರು ವಿಭಾಗಗಳಾಗಿ ವಿಭಜಿಸಲಾಗಿದೆ. ಅಜಿತ್ ಕುಮಾರ್ ಸಾಹು ನೇತೃತ್ವದ ಮೊದಲನೇ ತಂಡವು ತುಮಕೂರು, ಚಿತ್ರದುರ್ಗ, ದಾವಣಗೆರೆ ಹಾಗೂ ವಿಜಯನಗರ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡಿದೆ. ಸಹಾಯಕ ಆಯುಕ್ತ ಡಾ. ಸುಧಾಂ ಭಾಗ್ ನೇತೃತ್ವದ 2ನೇ ತಂಡ ಹಾಸನ, ಮೈಸೂರು, ಚಾಮರಾಜನಗರ, ಮತ್ತು ಮಂಡ್ಯ ಜಿಲ್ಲೆಗಳಿಗೆ ಭೇಟಿ ನೀಡಲಿದೆ.

ನಿರ್ದೇಶಕ ಡಾ. ಮನ್‌ಸಿಂಗ್ ನೇತೃತ್ವದ ಮೂರನೇ ತಂಡವು ಯಾದಗಿರಿ, ರಾಯಚೂರು, ಬಾಗಲಕೋಟೆ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಪ್ರವಾಸಕೈಗೊಂಡು, ಅನಾವೃಷ್ಟಿಯಿಂದ ಆಗಿರುವ ಅನಾಹುತಗಳ ಬಗ್ಗೆ ಪರಿಶೀಲನೆ ನಡೆಸಲಿದೆ.

ಹಾಸನ ಜಿಲ್ಲೆಗೆ ಭೇಟಿ ನೀಡಿರುವ ಡಾ. ಸುಧಾಂ ಭಾಗ್ ತಂಡವು ಶನಿವಾರ ದುದ್ದಾಭಾಗದ ರೈತರ ಜಮೀನಿಗೆ ಭೇಟಿ ನೀಡಿ, ಬರ ಪರಿಸ್ಥಿತಿಯ ಪರಿಶೀಲನೆ ನಡೆಸಿತು. ಭಾನುವಾರ ಬಾಣಾವರ ಸೇರಿದಂತೆ ಉಳಿದ ಸ್ಥಳಗಳಿಗೆ ಅಧಿಕಾರಿಗಳ ತಂಡವು ಭೇಟಿ ನೀಡಲಿದೆ. ಇದಕ್ಕೂ ಮುನ್ನ, ಕೇಂದ್ರ ಬರ ಅಧ್ಯಯನ ತಂಡ ಜಿಲ್ಲಾಧಿಕಾರಿ ಲತಾಕುಮಾರಿ ಅವರನ್ನು ಭೇಟಿಯಾಗಿ ಜಿಲ್ಲೆಯಲ್ಲಿನ ಬರ ಪರಿಸ್ಥಿತಿಯ ಬಗ್ಗೆ ಮಾಹಿತಿಯನ್ನು ಪಡೆದುಕೊಂಡಿತು.

ಕೇಂದ್ರದ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ಜಂಟಿ ಕಾರ್ಯದರ್ಶಿ ಅಜಿತ್ ಕುಮಾರ್ ಸಾಹು ನೇತೃತ್ವದ ತಂಡ ಇಂದು ದಾವಣಗೆರೆಗೆ ಆಗಮಿಸಿದ್ದು, ಮಧ್ಯಾಹ್ನ ದಾವಣಗೆರೆ, ನ್ಯಾಮತಿ, ಹೊನ್ನಾಳಿ ತಾಲೂಕುಗಳ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಲಿದೆ. ದಾವಣಗೆರೆಯಲ್ಲೇ ತಂಡವು ವಾಸ್ತವ್ಯ ಹೂಡಿತು. ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಸೇರಿದಂತೆ ಮತ್ತಿತರರು ಬರ ಅಧ್ಯಯನ ತಂಡದೊಂದಿಗೆ ಉಪಸ್ಥಿತರಿದ್ದು, ಅಗತ್ಯ ಮಾಹಿತಿಯನ್ನು ನೀಡಲಿದ್ದಾರೆ. ಕೇಂದ್ರದ ಹಿರಿಯ ಅಧಿಕಾರಿ ಡಾ. ಮನ್ ಸಿಂಗ್ , ಪಾರ್ಥಾ ಪಾಲ್ ಹಾಗೂ ರಾಕೇಶ್ ಕುಮಾರ್ ನೇತೃತ್ವದ ಬರ ಅಧ್ಯಯನ ತಂಡವು ಯಾದಗಿರಿ ಜಿಲ್ಲೆಗೆ ಭೇಟಿ ನೀಡಿದೆ.

ಜಿಲ್ಲೆಯ ಶಹಾಪುರ ತಾಲೂಕಿನ ವಿವಿಧ ಗ್ರಾಮಗಳಿಗೆ ಭೇಟಿ ನೀಡಿರುವ ಅಧಿಕಾರಿಗಳ ತಂಡ ಮಳೆ ಕೊರತೆಯಿಂದಾಗಿ ಹಾನಿಯಾಗಿರುವ ಹತ್ತಿ, ತೊಗರಿ ಸೇರಿದಂತೆ ವಿವಿಧ ಬೆಳೆಗಳ ನಷ್ಟ ಕುರಿತು ರೈತರೊಂದಿಗೆ ಮಾತುಕತೆ ನಡೆಸಿದ್ದು, ಮಾಹಿತಿಯನ್ನು ಸಂಗ್ರಹಿಸಿದೆ. ಯಾದಗಿರಿ ಜಿಲ್ಲಾಧಿಕಾರಿ ರಾಹುಲ್ ಪಾಂಡೆ, ತಂಡದೊಂದಿಗೆ ಹಾಜರಿದ್ದು, ಕೇಂದ್ರ ಅಧಿಕಾರಿಗಳಿಗೆ ಅಗತ್ಯ ಮಾಹಿತಿಗಳನ್ನು ನೀಡಿದ್ದಾರೆ. ಸುಧಾಂ ಭಾಗ್ ನೇತೃತ್ವದ ತಂಡವು ಚಾಮರಾಜನಗರ ಜಿಲ್ಲೆಯಲ್ಲೂ ಸೋಮವಾರ ಬೆಳೆಹಾನಿ ವೀಕ್ಷಣೆ ಮಾಡಲಿದೆ. ಚಾಮರಾಜನಗರ ತಾಲೂಕಿನ ಕೆರೆಹಳ್ಳಿ, ಗುಂಡ್ಲುಪೇಟೆ ತಾಲೂಕಿನ ನಿಟ್ರೆ, ಸೋಮನಹಳ್ಳಿ, ರಾಘವಾಪುರದಲ್ಲಿ ವೀಕ್ಷಣೆ ಕೈಗೊಳ್ಳಲಿದೆ. ನಾಡಿದ್ದು, ತಂಡವು ಹನೂರು ತಾಲೂಕಿನ ವಿವಿಧ ಪ್ರದೇಶಗಳಲ್ಲಿ ಬರ ಪರಿಶೀಲನೆ ಕೈಗೊಳ್ಳಲಿದೆ.

## ಎಸ್‌ಐಆರ್ ವಿಚಾರ: ಬಿಜೆಪಿ, ಚುನಾವಣಾ ಆಯೋಗದ ವಿರುದ್ಧ ಸಚಿವ ಖರ್ಗೆ ವಾಗ್ದಾಳಿ

**ಬೆಂಗಳೂರು, ಅ.4:** ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಕರ್ನಾಟಕದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಶನಿವಾರ ಬಿಜೆಪಿ ಮತ್ತು ಚುನಾವಣಾ ಆಯೋಗದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ನೂರಾರು ಮುದ್ರಿತ ಅರ್ಜಿಗಳನ್ನು ವಿತರಿಸಲಾಗಿದೆ ಎಂಬ ಆರೋಪವನ್ನು ಪ್ರಶ್ನಿಸಿದ ಅವರು, ಈ ಪ್ರಕ್ರಿಯೆಯ ಪಾರದರ್ಶಕತೆ ಮತ್ತು ವಿಶ್ವಾಸಾರ್ಹತೆಯ ಬಗ್ಗೆ ಸ್ಪಷ್ಟನೆ ನೀಡುವಂತೆ ಆಗ್ರಹಿಸಿದರು. ನೇರವಾಗಿ ಬಿಜೆಪಿಯನ್ನು ಗುರಿಯಾಗಿಸಿಕೊಂಡು ಮಾತನಾಡಿದ ಖರ್ಗೆ, 'ಬೂತ್ ಮಟ್ಟದ ಏಜೆಂಟ್' ಅಲ್ಲದ ವ್ಯಕ್ತಿಗಳಿಗೆ 400 ರಿಂದ 500 ಅರ್ಜಿಗಳನ್ನು ಹಸ್ತಾಂತರಿಸಲು ನಿಯಮಗಳು ಅವಕಾಶ ನೀಡುವುದಿಲ್ಲ ಎಂದು ಹೇಳಿದರು. ಬಿಎಲ್‌ಎಗಳಿಗೂ ಸಹ ಮುದ್ರಿತ ಅರ್ಜಿಗಳನ್ನು ನೀಡುವಂತಿಲ್ಲ ಎಂದು ಅವರು ಪ್ರತಿಪಾದಿಸಿದರು. "ಅವರು ಬಿಎಲ್‌ಎಗಳಲ್ಲದಿದ್ದರೆ, ಅವರಿಗೆ 400 ರಿಂದ 500 ಅರ್ಜಿಗಳನ್ನು ನೀಡಲು ಸಾಧ್ಯವಿಲ್ಲ. ಒಂದು ವೇಳೆ ಅವರು ಬಿಎಲ್‌ಎಗಳಾಗಿದ್ದರೂ ಸಹ, ಮುದ್ರಿತ ಅರ್ಜಿಗಳನ್ನು ನೀಡುವಂತಿಲ್ಲ.

ಹಾಗಾದರೆ 400ಕ್ಕೂ ಹೆಚ್ಚು ಅರ್ಜಿಗಳು ಎಲ್ಲಿಂದ ಬಂದವು" ಎಂದು ಅವರು ಪ್ರಶ್ನಿಸಿದರು. ಈ ವಿಷಯವು ಕೇವಲ ಅರ್ಜಿಗಳಿಗೆ ಸಂಬಂಧಿಸಿದ್ದಲ್ಲ, ಬದಲಾಗಿ ಇಡೀ ಎಸ್‌ಐಆರ್ ಪ್ರಕ್ರಿಯೆಯ ವಿಶ್ವಾಸಾರ್ಹತೆಗೆ ಸಂಬಂಧಿಸಿದೆ ಎಂದು ಸಚಿವರು ಹೇಳಿದರು. ಈ ಪ್ರಕ್ರಿಯೆಯ ಬಗ್ಗೆ ಮಾಜಿ ಚುನಾವಣಾ ಆಯುಕ್ತರು ವ್ಯಕ್ತಪಡಿಸಿದ ಟೀಕೆಗಳು ಹಾಗೂ ಬಿಹಾರ ಮತ್ತು ಪಶ್ಚಿಮ ಬಂಗಾಳದಲ್ಲಿ ನಡೆದ ಬೆಳವಣಿಗೆಗಳನ್ನು ಉಲ್ಲೇಖಿಸಿದ ಅವರು, ಮತದಾರರ ಪಟ್ಟಿ ಪರಿಷ್ಕರಣೆ ನಡೆಯುತ್ತಿರುವ ರೀತಿಯ ಬಗ್ಗೆ ಗಂಭೀರ ಪ್ರಶ್ನೆಗಳು ಎದ್ದಿವೆ ಎಂದು ಹೇಳಿದರು. ಎಸ್‌ಐಆರ್ ಅನ್ನು "ನಾಟಕ" ಎಂದು ಬಣ್ಣಿಸಿದ ಪ್ರಿಯಾಂಕ್ ಖರ್ಗೆ, ಜನರು ಸ್ವತಃ ಈ ಪ್ರಕ್ರಿಯೆಯನ್ನು ಪ್ರಶ್ನಿಸುತ್ತಿದ್ದಾರೆ ಎಂದು ಆರೋಪಿಸಿದರು ಮತ್ತು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು "ಸತ್ಯವನ್ನು ಮುಚ್ಚಿಡುತ್ತಿದ್ದಾರೆ" ಎಂದು ದೂರಿದರು. ಸಿಇಸಿ ಕೇಂದ್ರ ಸರ್ಕಾರದ "ಕೈಗೊಂಬೆಯಾಗಿ" ಕಾರ್ಯನಿರ್ವಹಿಸುತ್ತಿದ್ದಾರೆ ಎಂದೂ ಅವರು ಆರೋಪಿಸಿದರು. ಫಾರ್ಮ್ 6ಕ್ಕಾಗಿ ಬಳಸಲಾದ ಸಾಫ್ಟ್‌ವೇರ್ ಬಗ್ಗೆಯೂ ಪ್ರಶ್ನೆಗಳನ್ನು ಎತ್ತಿದ ಖರ್ಗೆ, ಅದರಲ್ಲಿ ತಿರುಚುವಿಕೆ ನಡೆದಿದೆ ಎಂಬ ಆರೋಪಗಳು ಗಂಭೀರವಾಗಿದ್ದು, ಆ ವ್ಯವಸ್ಥೆಯನ್ನು ಐಐಟಿ (ಲೆಕ್ಕಪರಿಶೋಧನೆಗೆ ಒಳಪಡಿಸಬೇಕೆಂದು ಹೇಳಿದರು. "ಸಾಫ್ಟ್‌ವೇರ್‌ನಲ್ಲಿ ಯಾವುದೇ ತಿರುಚುವಿಕೆ ನಡೆದಿಲ್ಲ ಎಂದಾದರೆ, ಅದನ್ನು ಏಕೆ ಲೆಕ್ಕಪರಿಶೋಧನೆಗೆ ಒಳಪಡಿಸಲಾಗುತ್ತಿದೆ? ಐಐಟಿ ಲೆಕ್ಕಪರಿಶೋಧನೆ ನಡೆಯುತ್ತಿರುವಾಗ, ಯಾವುದೇ ತಿರುಚುವಿಕೆ ನಡೆದಿಲ್ಲ ಎಂದು ಯಾರಾದರೂ ಮುಂಚಿತವಾಗಿ ಹೇಗೆ ಹೇಳಲು ಸಾಧ್ಯ? ಅದನ್ನು ಸಾಬೀತುಪಡಿಸಬೇಕಲ್ಲವೇ" ಎಂದು ಅವರು ಪ್ರಶ್ನಿಸಿದರು.ಮುಖ್ಯ ಚುನಾವಣಾ ಆಯುಕ್ತರಿಗೆ ನ್ಯಾಯಾಂಗ ರಕ್ಷಣೆ ನೀಡುವ ಚುನಾವಣಾ ಆಯೋಗದ ಕ್ರಮವನ್ನೂ ಅವರು ಪ್ರಶ್ನಿಸಿದರು. ಇಂತಹ ರಕ್ಷಣೆಯ ಅಗತ್ಯವೇನು ಎಂದು ಕೇಳಿದ ಅವರು, ಹಿಂದಿನ ಚುನಾವಣಾ ಆಯುಕ್ತರು ಅಂತಹ ರಕ್ಷಣೆಯನ್ನು ಕೋರಿರಲಿಲ್ಲ ಎಂಬುದನ್ನು ಗಮನಸೆಳೆದರು. SIR ವಿಷಯದಲ್ಲಿ ಕಾಂಗ್ರೆಸ್ ಮತ್ತು ಬಿಜೆಪಿ ನಡುವಿನ ಸಂಘರ್ಷ ತೀವ್ರಗೊಂಡಿರುವ ಹಿನ್ನೆಲೆಯಲ್ಲಿ ಈ ಹೇಳಿಕೆಗಳು ಹೊರಬಿದ್ದಿವೆ; ಬಿಜೆಪಿ ಮತದಾರರ ಪಟ್ಟಿ ಪರಿಷ್ಕರಣಾ ಪ್ರಕ್ರಿಯೆಯನ್ನು ಟೀಕಿಸುತ್ತಿದ್ದರೆ, ಕಾಂಗ್ರೆಸ್ ಚುನಾವಣಾ ಆಯೋಗದ ಕಾರ್ಯವಿಧಾನಗಳು ಮತ್ತು ಈ ಪ್ರಕ್ರಿಯೆಯ ವಿಶ್ವಾಸಾರ್ಹತೆಯತ್ತ ಗಮನ ಸೆಳೆಯುತ್ತಿದೆ.

ಬಿಹಾರ, ಪಶ್ಚಿಮ ಬಂಗಾಳ ಮತ್ತು ಹರಿಯಾಣದಲ್ಲಿನ ಬೆಳವಣಿಗೆಗಳು ಹಾಗೂ ಮಾಜಿ ಚುನಾವಣಾ ಅಧಿಕಾರಿಗಳು ಎತ್ತಿರುವ ಪ್ರಶ್ನೆಗಳ ಹಿನ್ನೆಲೆಯಲ್ಲಿ, ಎಸ್‌ಐಆರ್ ಪ್ರಕ್ರಿಯೆಯನ್ನು ಕೂಲಂಕಷವಾಗಿ ಪರಿಶೀಲಿಸುವುದು ಮತ್ತು ಅದನ್ನು ನಡೆಸುತ್ತಿರುವವರಿಂದ ಹೊಣೆಗಾರಿಕೆಯನ್ನು ಆಗ್ರಹಿಸುವುದು ಅಗತ್ಯ ಎಂದು ಖರ್ಗೆ ಹೇಳಿದರು.

## ವಿವಿಧ ರಾಜ್ಯಗಳಲ್ಲಿ ಬಿಜೆಪಿಗೆ ಗೆಲುವು ತರಲು ಇಸಿ ಷಡ್ಯಂತ್ರ: ಸಚಿವ ಸಂತೋಷ್ ಲಾಡ್ ಆರೋಪ

**ಬೆಂಗಳೂರು,ಅ.4:** ವಿವಿಧ ರಾಜ್ಯಗಳ ಚುನಾವಣೆಯಲ್ಲಿ ಬಿಜೆಪಿಯನ್ನು ಗೆಲ್ಲಿಸಲು ಕೇಂದ್ರ ಚುನಾವಣಾ ಆಯೋಗವೇ ಷಡ್ಯಂತ್ರ ಮಾಡಿದೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಾರಾಷ್ಟ್ರ, ಹರಿಯಾಣ, ಪಶ್ಚಿಮಬಂಗಾಳ ಮತ್ತು ಬಿಹಾರದ ಚುನಾವಣೆಯಲ್ಲಿ ಬಿಜೆಪಿಯನ್ನು ಗೆಲ್ಲಿಸಲು ಚುನಾವಣಾ ಆಯೋಗ ಎಸ್‌ಐಆರ್ ಹೆಸರಿನಲ್ಲಿ ಸಂಚು ನಡೆಸಿದೆ ಎಂಬ ಗಂಭೀರ ಆರೋಪ ಮಾಡಿದ್ದಾರೆ. ದೇಶದಲ್ಲಿ 13 ಕೋಟಿ ಮತದಾರರನ್ನು ಹೊರಗಿಡುವ ಪ್ರಕ್ರಿಯೆಯಲ್ಲಿ ಸರ್ಕಾರದ ಅನುಮತಿ ಪಡೆದಿಲ್ಲ ಎಂಬುದು ಈಗ ಬಹಿರಂಗವಾಗಿದೆ ಎಂದರು. ಅರ್ಜಿ ನಮೂನೆ–6ರಲ್ಲಿ ಬದಲಾವಣೆ ತರಬೇಕಾದರೆ ಆಯೋಗದ ಎಲ್ಲಾ ಆಯುಕ್ತರ ಜೊತೆ ಚರ್ಚೆ ನಡೆಸಿ, ನಂತರ ಸರ್ಕಾರದ ಜೊತೆ ಸಮಾಲೋಚನೆ ನಡೆಸಿ ನಿರ್ಧಾರ ತೆಗೆದುಕೊಳ್ಳಬೇಕು. ಆದರೆ ಆ ರೀತಿ ಯಾವುದೇ ಬೆಳವಣಿಗೆಗಳಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

## ಏಷ್ಯನ್ ಕ್ರೀಡಾಕೂಟದಲ್ಲಿ ಚಿನ್ನದ ಸಂಭ್ರಮ: ಹಾಕಿ ಆಟಗಾರರಿಗೆ ಅದ್ಧೂರಿ ಸ್ವಾಗತ

**ಬೆಂಗಳೂರು,ಅ.4:** ಏಷ್ಯನ್ ಕ್ರೀಡಾಕೂಟದಲ್ಲಿ ಐತಿಹಾಸಿಕ ದಾಖಲೆ ಮಾಡಿ, ಚಿನ್ನದ ಪದಕ ಗಳಿಸಿದ ಮಹಿಳೆಯರ ಹಾಕಿ ತಂಡ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿಯಿತು.

ವಿಮಾನ ನಿಲ್ದಾಣದಲ್ಲಿ ಭಾರತೀಯ ಕ್ರೀಡಾ ಪ್ರಾಧಿಕಾರದ ಹಿರಿಯ ಅಧಿಕಾರಿಗಳು ಹಾಗೂ ಭಾರೀ ಸಂಖ್ಯೆಯಲ್ಲಿ ನೆರೆದಿದ್ದ ಕ್ರೀಡಾಭಿಮಾನಿಗಳು ಸಂಭ್ರಮ, ಸಡಗರದಿಂದಲೇ ಚಿನ್ನದ ಪದಕ ವಿಜೇತರನ್ನು ಬರಮಾಡಿಕೊಂಡರು. ಡೊಳ್ಳುಕುಣಿತ ಮೊದಲಾದ ಜನಪದ ಕಲಾ ತಂಡಗಳ ಮೂಲಕ ಆಟಗಾರ್ತಿಯರನ್ನು ಬರಮಾಡಿಕೊಳ್ಳಲಾಯಿತು. ಚಿನ್ನದ ಪದಕ ವಿಜೇತಯರಿಗೆ ಕ್ರೀಡಾಪ್ರಾಧಿಕಾರದ ಅಧಿಕಾರಿಗಳು ಮೈಸೂರು ಪೇಟ ತೊಡಿಸಿ, ಗೌರವಿಸಿದ್ದು, ವಿಶೇಷವೆನಿಸಿತು.

ಅಲ್ಲದೆ, ವಿಮಾನ ನಿಲ್ದಾಣದಲ್ಲಿ ನೆರೆದಿದ್ದ ಕ್ರೀಡಾಭಿಮಾನಿಗಳು ಪುಷ್ಪವೃಷ್ಟಿಗೈಯುವ ಮೂಲಕ ಸಂತಸ ವ್ಯಕ್ತಪಡಿಸಿದರು. 44 ವರ್ಷಗಳ ಬಳಿಕ ಭಾರತೀಯ ವನಿತೆಯರ ಹಾಕಿ ತಂಡ ಏಷ್ಯನ್ ಕ್ರೀಡಾಕೂಟದಲ್ಲಿ ಚಿನ್ನದ ಪದಕವನ್ನು ಗಳಿಸಿರುವುದು ನೂತನ ದಾಖಲೆ ಎನಿಸಿದೆ.

ಏಷ್ಯನ್ ಕ್ರೀಡಾಕೂಟದ ಹಾಕಿ ಪಂದ್ಯಾವಳಿಯ ಅಂತಿಮ ಪಂದ್ಯದಲ್ಲಿ ಭಾರತೀಯ ಮಹಿಳಾ ತಂಡವು ಚೈನಾವನ್ನು ಸೋಲಿಸುವ ಮೂಲಕ ಐತಿಹಾಸಿಕ ಜಯ ದಾಖಲಿಸಿದ್ದರು. ಅದೇ ರೀತಿ ಪುರುಷರ ತಂಡವು 5–1 ಗೋಲುಗಳ ಅಂತರದಿಂದ ಮಲೇಷ್ಯಾವನ್ನು ಬಗ್ಗುಬಡಿದು,




ಚಿನ್ನದ ಪದಕವನ್ನು ಮುಡಿಗೇರಿಸಿಕೊಂಡಿತ್ತು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಹ ಏಷ್ಯನ್ ಕ್ರೀಡಾಕೂಟದಲ್ಲಿ ಚಿನ್ನದ ಪದಕ ಗಳಿಸಿರುವ ಹಾಕಿ ತಂಡವನ್ನು ಹೃತ್ಪೂರ್ವಕವಾಗಿ ಅಭಿನಂದಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಡಿ.ಕೆ. ಶಿವಕುಮಾರ್, ಶನಿವಾರ ನಡೆದ ಪಂದ್ಯದಲ್ಲಿ ಭಾರತೀಯ ಪುರುಷರ ತಂಡವು ಮಲೇಷ್ಯಾದ ವಿರುದ್ಧ ಜಯಗಳಿಸಿದ್ದಕ್ಕೆ ಸಂತಸ ವ್ಯಕ್ತಪಡಿಸಿದ್ದಾರೆ. ವಿಶೇಷವಾಗಿ ಮೋಹಿತ್ , ಎಚ್. ಎಸ್. ಹರಿಶಿತ್, ಎಂ. ಲಕ್ಷ್ಮಣ್ ಮತ್ತು ರಘುನಾಥನ್ ಎಂ., ಅವರುಗಳು ಈ ಜಯಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ಮುಖ್ಯಮಂತ್ರಿ ಅವರು ತಮ್ಮ ಸಂದೇಶದಲ್ಲಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಬೆಂಗಳೂರು ಏರ್‌ಪೋರ್ಟ್ ಟೋಲ್ ಟ್ರಾಫಿಕ್ ಕಿರಿಕಿರಿ

**ಬೆಂಗಳೂರು, ಅ.4:** ಬೆಂಗಳೂರಲ್ಲಿ ಅತಿ ಹೆಚ್ಚು ಟ್ರಾಫಿಕ್ ಆಗುವ ರಸ್ತೆ ಅಂದರೆ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ರಸ್ತೆ. ಅದಕ್ಕೆ ಕಾರಣ ಅಂದರೆ ಟೋಲ್ ಪ್ಲಾಜಾ. ಇದರಿಂದ ನಿಮಿಷಗಟ್ಟಲೇ ಪ್ರತಿ ವಾಹನ ಕಾಯಲೇಬೇಕಾಗುತ್ತದೆ. ಅದಕ್ಕೆ ಬ್ರೇಕ್ ಹಾಕಲು ಐಟಿ ದಿಗ್ಗಜ ಮೋಹನ್ ದಾಸ್ ಹೆದ್ದಾರಿ ಸಚಿವ ನಿತಿನ್ ಗಡ್ಕರಿಗೆ ಒತ್ತಾಯಿಸಿದ್ದಾರೆ.




**ಟೋಲ್ ಪ್ಲಾಜಾ ಎಡವಟ್ಟು: ಏರ್‌ಪೋರ್ಟ್ ರಸ್ತೆಯಲ್ಲಿ ಕಿ.ಮೀ.ಗಟ್ಟಲೆ ಕ್ಯೂ**

ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ರಸ್ತೆ ಟ್ರಾಫಿಕ್ ಬಗ್ಗೆ ಈಗಾಗಲೇ ದೊಡ್ಡಮಟ್ಟದಲ್ಲಿ ಸೋಶಿಯಲ್ ಮೀಡಿಯಾದಲ್ಲಿ ಆಕ್ರೋಶ, ಅಸಮಾಧಾನ ವ್ಯಕ್ತವಾಗುತ್ತ ಇರುತ್ತದೆ. ಇದಕ್ಕೆ ಕಾರಣ ಟೋಲ್ ಪ್ಲಾಜಾ. ಟೋಲ್ ಪ್ಲಾಜಾದಲ್ಲಿ ಸರಿಯಾಗಿ ಸ್ಕ್ಯಾನ್ ಆಗುವುದಿಲ್ಲ, ಹೀಗಾಗಿ ಫಾಸ್ಟ್ ಟ್ಯಾಗ್ ಮೂಲಕ ಹಣ ಕಟ್ ಆಗುವುದಕ್ಕೆ ತುಂಬಾ ಸಮಯ ತೆಗೆದುಕೊಳ್ಳುತ್ತಿದೆ.

**ಮಲ್ಟಿ–ಲೈನ್ ಫ್ರೀ ಫ್ಲೋ ಮಾದರಿ ಜಾರಿಗೆ ಆಗ್ರಹ:** ನಿತಿನ್ ಗಡ್ಕರಿಗೆ ಮೋಹನ್ ದಾಸ್ ಪೈ ಒತ್ತಾಯ

ಫಾಸ್ಟ್ ಟ್ಯಾಗ್ ಸ್ಕ್ಯಾನ್ ಸಮಸ್ಯೆಯಿಂದ ಕಿಮೀಗಟ್ಟಲೆ ಕ್ಯೂ ನಿಲ್ಲಬೇಕಾದ ಪರಿಸ್ಥಿತಿ ಉಂಟಾಗಿದೆ. ಹೀಗಾಗಿ ಐಟಿ ದಿಗ್ಗಜ ಮೋಹನ್ ದಾಸ್ ಪೈ, ಏರ್‌ಪೋರ್ಟ್ ಟೋಲ್‌ನಲ್ಲಿ ಮಲ್ಟಿ–ಲೈನ್ ಫ್ರೀ ಫ್ಲೋ ಟೋಲ್ ಮಾದರಿ ಜಾರಿಗೆ ತನ್ನಿ ಎಂದು ರಾಷ್ಟ್ರೀಯ ಹೆದ್ದಾರಿ ಮತ್ತು ಸಾರಿಗೆ ಸಚಿವ ನಿತಿನ್ ಗಡ್ಕರಿ ಅವರಿಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡುವ ಮೂಲಕ ಒತ್ತಾಯಿಸಿದ್ದಾರೆ. ಈ ಮಾದರಿ ಜಾರಿ ಮಾಡಿದರೆ ಏರ್‌ಪೋರ್ಟ್ ಮಾರ್ಗದ ಟ್ರಾಫಿಕ್ ಕಂಟ್ರೋಲ್ ಆಗುವ ನಿರೀಕ್ಷೆಯಿದ್ದು, ತಮಿಳುನಾಡು ಟೆಕ್ನಾಲಜಿ ನಗರಕ್ಕೂ ತನ್ನಿ ಎಂಬ ಕೂಗು ಸೋಶಿಯಲ್ ಮೀಡಿಯಾದಲ್ಲೂ ಜೋರಾಗಿದೆ.

# 174 ಜನರ ಜೀವ ಉಳಿಸಿದ ಭಾರತೀಯ ಪೈಲಟ್ ಸ್ಮಿತ್‌ಗೆ ಇಸ್ರೇಲ್‌ನಿಂದ ಉನ್ನತ ಗೌರವ

**ದುಬೈ,ಅ.4:** ಫ್ಲೈದುಬೈ ವಿಮಾನದಲ್ಲಿ ನಡೆದ ಭೀಕರ ಹೈಜಾಕ್ ಹಾಗೂ ದುರಂತ ಯತ್ನವನ್ನು ತಮ್ಮ ಪ್ರಾಣದ ಹದಿನಾಲ್ಕನೇ ಹಂತದಲ್ಲೂ ತಡೆದು, ಸುಮಾರು 174 ಪ್ರಯಾಣಿಕರ ಪ್ರಾಣ ಉಳಿಸಿದ ಭಾರತೀಯ ಪೈಲಟ್ ಕ್ಯಾಪ್ಟನ್ ಸ್ಮಿತ್ ಮಚ್ಚಾರ್ ಅವರ ಶೌರ್ಯಕ್ಕೆ ಇಡೀ ಜಗತ್ತೇ ಸಲಾಂ ಹೇಳುತ್ತಿದೆ. ಅವರ ಈ ಅಭೂತಪೂರ್ವ ಧೈರ್ಯ ಸಾಹಸವನ್ನು ಗುರುತಿಸಿ ಇಸ್ರೇಲ್ ಸರ್ಕಾರವು ಅವರಿಗೆ ತನ್ನ ಅತ್ಯುನ್ನತ ನಾಗರಿಕ ಪ್ರಶಸ್ತಿಯನ್ನು ಘೋಷಿಸಿದೆ. ದುಬೈನಿಂದ ಟೆಲ್ ಅವೀವ್‌ಗೆ ತೆರಳುತ್ತಿದ್ದ ಫ್ಲೈದುಬೈ ವಿಮಾನದಲ್ಲಿ ಪ್ರಯಾಣಿಕರ ಪ್ರಾಣಕ್ಕೆ ಕಂಟಕ ಎದುರಾಗಿತ್ತು. ಕಾಕ್ಪಿಟ್‌ನಲ್ಲಿ ಸಹ-ಪೈಲಟ್‌ನಿಂದ ತೀವ್ರ ಹಲ್ಲೆಗೊಳಗಾಗಿ, ಕತ್ತಿಯಿಂದ ಇರಿಯಲ್ಪಟ್ಟು ತೀವ್ರವಾಗಿ ಗಾಯಗೊಂಡರೂ ಸಹ ಕ್ಯಾಪ್ಟನ್ ಸ್ಮಿತ್ ಧೈರ್ಯ ಗೆಡಲಿಲ್ಲ. ತೀವ್ರ



ರಕ್ತಸ್ರಾವದ ನಡುವೆಯೂ ವಿಮಾನ ದುರಂತಕ್ಕೀಡಾಗದಂತೆ ನಿಯಂತ್ರಿಸಿ, ಕಾಕ್‌ಪಿಟ್ ಬಾಗಿಲನ್ನು ಲಾಕ್ ಮುರಿದು ತೆರೆಯುವ ಮೂಲಕ ಇಸ್ರೇಲಿ ಪ್ರಯಾಣಿಕರು ಮತ್ತು ವಿಮಾನ ಸಿಬ್ಬಂದಿ ಒಳಗಡೆ ಬಂದು ಪರಿಸ್ಥಿತಿಯನ್ನು ನಿಯಂತ್ರಿಸಲು ನೆರವಾದರು. ಇವರ ಸಮಯಪ್ರಜ್ಞೆಯಿಂದಾಗಿ ನೂರಾರು ಜನರ ಜೀವ ಉಳಿಯಿತು.

**ಪ್ರಧಾನಿ ನೆತನ್ಯಾಹು ಅವರಿಂದ ನೇರ ಕರೆ ಹಾಗೂ ಶ್ಲಾಘನೆ:**

ಇಸ್ರೇಲ್ ಪ್ರಧಾನಮಂತ್ರಿ ಬೆಂಜಮಿನ್ ನೆತನ್ಯಾಹುಅವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಕ್ಯಾಪ್ಟನ್ ಸ್ಮಿತ್ ಮಚ್ಚಾರ್ ಅವರಿಗೆ ನೇರವಾಗಿ ದೂರವಾಣಿ ಕರೆ ಮಾಡಿ ಮಾತನಾಡಿದ್ದಾರೆ. ಸಂಭಾಷಣೆಯ ವೇಳೆ ಪ್ರಧಾನಿ ನೆತನ್ಯಾಹು, "ನಿಮ್ಮ ಅದ್ಭುತ ಧೈರ್ಯ ಮತ್ತು ಸಾಹಸ ಇಡೀ ಇಸ್ರೇಲ್ ಜನತೆಗೆ ಪ್ರೇರಣೆಯಾಗಿದೆ. ನಿಮ್ಮ ಸಮಯಪ್ರಜ್ಞೆಯಿಂದಾಗಿ ನೂರಾರು ಕುಟುಂಬಗಳು ಸುರಕ್ಷಿತವಾಗಿವೆ" ಎಂದು ಕೊಂಡಾಡಿದ್ದಾರೆ. ಅಲ್ಲದೆ, ಇಸ್ರೇಲ್ ದೇಶದ ಈ ಅತ್ಯುನ್ನತ ನಾಗರಿಕ ಗೌರವಕ್ಕೆ ಕ್ಯಾಪ್ಟನ್ ಸ್ಮಿತ್ ಅವರು ಸಂಪೂರ್ಣ ಅರ್ಹರಾಗಿದ್ದಾರೆ ಎಂದು ಪ್ರಶಂಸಿದ್ದಾರೆ.

# ಇಸ್ರೇಲ್‌ನ ತನಿಖೆಯ ಪ್ರಕಾರ, ಫ್ಲೈದುಬೈ ವಿಮಾನ ಅಪಹರಣದ ಪ್ರಯತ್ನವು ಬಹುಶಃ ಲೋನ್-ವುಲ್ಫ್ ದಾಳಿಯಾಗಿರಬಹುದು

**ಟೆಲ್ ಅವಿವ್, ಅ.4:** ದುಬೈನಿಂದ ಟೆಲ್ ಅವಿವ್ಗೆ ತೆರಳುತ್ತಿದ್ದ ಫ್ಲೈದುಬೈ ವಿಮಾನವನ್ನು ಅಪಹರಿಸಲು ನಡೆದಿದೆ ಎನ್ನಲಾದ ಪ್ರಯತ್ನವು ಬಹುಶಃ 'ಲೋನ್-ವುಲ್ಫ್' ದಾಳಿಯಾಗಿರಬಹುದು ಎಂದು ಇಸ್ರೇಲ್ನ ಪ್ರಾಥಮಿಕ ತನಿಖೆಯು ಸೂಚಿಸಿದೆ ಎಂದು ಈ ವಿಷಯದ ಬಗ್ಗೆ ತಿಳಿದಿರುವ ಮೂಲಗಳು ಇಂದು ಸಿಬಿಎಸ್ ನ್ಯೂಸ್‌ಗೆ ತಿಳಿಸಿವೆ.

ತನಿಖೆ ಇನ್ನೂ ನಡೆಯುತ್ತಿದ್ದು ಎಲ್ಲಾ ಸಾಧ್ಯತೆಗಳನ್ನು ಪರಿಶೀಲಿಸಲಾಗುತ್ತಿದ್ದರೂ, ಸದ್ಯಕ್ಕೆ ಇದರಲ್ಲಿ ಯಾವುದೇ ಮೂರನೇ ವ್ಯಕ್ತಿಯ ಅಥವಾ ಗುಂಪಿನ ಭಾಗವಹಿಸುವಿಕೆ ಇರುವ ಸಾಧ್ಯತೆ ಕಡಿಮೆ ಎಂದು ಮೂಲಗಳು ಹೇಳಿವೆ. ವಿಮಾನವು ಇಸ್ರೇಲ್ ಅನ್ನು ಸಮೀಪಿಸುತ್ತಿದ್ದಾಗ ಬುಧವಾರ ಈ ಘಟನೆ ಸಂಭವಿಸಿದೆ. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಪ್ರಯಾಣಿಕರು ಮತ್ತು ವಿಮಾನದ ಕ್ಯಾಪ್ಟನ್ ನೀಡಿರುವ ಮಾಹಿತಿಯ ಪ್ರಕಾರ, 'ಅಲ್ ಹಮಾಮಿ' ಎಂದು ಗುರುತಿಸಲಾದ ಸಹ-ಪೈಲಟ್ (ಕೋ-ಪೈಲಟ್), ಕ್ಯಾಪ್ಟನ್ ಅವರಿಗೆ ಚಾಕುವಿನಿಂದ ಇರಿದು ವಿಮಾನವನ್ನು ಪತನಗೊಳಿಸಲು ಪ್ರಯತ್ನಿಸಿದ್ದಾರೆ.

ಕಾಕ್‌ಪಿಟ್‌ನ ಬಾಗಿಲನ್ನು ತೆರೆಯುವಷ್ಟು ಸಮಯದವರೆಗೆ ಕ್ಯಾಪ್ಟನ್ ಸಹ-ಪೈಲಟ್ನನ್ನು ತಡೆಹಿಡಿಯುವಲ್ಲಿ ಯಶಸ್ವಿಯಾದರು. ನಂತರ ಇಸ್ರೇಲಿ ಪ್ರಯಾಣಿಕರು ಮತ್ತು ಫ್ಲೈದುಬೈ ಸಿಬ್ಬಂದಿ ಶಂಕಿತನನ್ನು ನಿಯಂತ್ರಣಕ್ಕೆ ತೆಗೆದುಕೊಂಡರು; ಅದೇ ಸಮಯದಲ್ಲಿ ವಿಮಾನದಲ್ಲಿದ್ದ ಕರ್ತವ್ಯದಲ್ಲಿಲ್ಲದ ಇಬ್ಬರು ಪೈಲಟ್‌ಗಳು ವಿಮಾನದ ನಿಯಂತ್ರಣವನ್ನು ವಹಿಸಿಕೊಂಡು ಸೌದಿ ಅರೇಬಿಯಾದ ತಬುಕ್‌ನಲ್ಲಿ ತುರ್ತು ಭೂಸ್ಪರ್ಶ ಮಾಡಿದರು. ಅಲ್ ಹಮಾಮಿ ಈಗ ಯುಎಇಯಲ್ಲಿದ್ದು, ತುರ್ತು ಭೂಸ್ಪರ್ಶದ ನಂತರ ಸೌದಿ ಅಧಿಕಾರಿಗಳಿಂದ ಪ್ರಾಥಮಿಕ ವಿಚಾರಣೆಗೆ ಒಳಗಾದ ಬಳಿಕ, ಅಲ್ಲಿ ಎರಡನೇ ಸುತ್ತಿನ ವಿಚಾರಣೆಯನ್ನು ಎದುರಿಸುತ್ತಿದ್ದಾರೆ. ತನಿಖೆಯಲ್ಲಿ ಭಾಗವಹಿಸಲು ಇಸ್ರೇಲ್ ತನ್ನ ಪ್ರತಿನಿಧಿಗಳನ್ನು ಯುಎಇಗೆ ಕಳುಹಿಸಿದೆ. ಅಲ್ ಹಮಾಮಿ ಒಮಾನ್‌ನಲ್ಲಿ ಜನಿಸಿರಲಿಲ್ಲ ಮತ್ತು ತಮ್ಮ ಜೀವನದ ಬಹುಭಾಗವನ್ನು ದೇಶದ ಹೊರಗೆ ಕಳೆದಿದ್ದರು ಎಂದು ಮೂಲಗಳು ತಿಳಿಸಿವೆ. ಅವರ ತಾಯಿ ಸಿರಿಯನ್ ಮತ್ತು ತಂದೆ ಓಮಾನಿ ಪ್ರಜೆ ಎಂದು ಹೇಳಲಾಗಿದೆ. ಓಮನ್ ಸರ್ಕಾರವು ಅವರ ರಾಷ್ಟ್ರೀಯತೆಯನ್ನು ಸಾರ್ವಜನಿಕವಾಗಿ ದೃಢಪಡಿಸಿಲ್ಲ. ಅವರು ಬಹುಶಃ ದ್ವಿ-ಪೌರತ್ವವನ್ನು ಹೊಂದಿರಬಹುದು ಮತ್ತು ಇದೇ ಕಾರಣದಿಂದಾಗಿ ಅವರಿಗೆ ಇಸ್ರೇಲ್‌ಗೆ ಪ್ರಯಾಣಿಸಲು ಅನುಮತಿ ಸಿಕ್ಕಿರಬಹುದು ಎಂದು ಮೂಲಗಳು ಅಭಿಪ್ರಾಯಪಟ್ಟಿವೆ.

# ನಾಯಕರ ನಡುವಿನ ಸಂಘರ್ಷ: ಗೋರಖ್ ಪುರದಲ್ಲಿ ಪಕ್ಷದ ಎಲ್ಲಾ ಘಟಕ ವಿಸರ್ಜಿಸಿದ ಎಸ್‌ಪಿ ಅಧ್ಯಕ್ಷರು

**ಗೋರಖ್‌ಪುರ, ಅ.4:** ಶನಿವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಪಕ್ಷದ ನಾಯಕರ ನಡುವೆ ಸಂಘರ್ಷ ಉಂಟಾಗಿ ಮುಜುಗರದ ಸನ್ನಿವೇಶ ನಿರ್ಮಾಣವಾದ ಹಿನ್ನೆಲೆಯಲ್ಲಿ, ಸಮಾಜವಾದಿ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಅಖಿಲೇಶ್ ಯಾದವ್ ಅವರು ಭಾನುವಾರ ಗೋರಖ್‌ಪುರ ಜಿಲ್ಲಾ ಮತ್ತು ಮಹಾನಗರ ಘಟಕಗಳನ್ನು ಸಂಪೂರ್ಣವಾಗಿ ವಿಸರ್ಜಿಸಿದ್ದಾರೆ. ಪತ್ರಿಕಾಗೋಷ್ಠಿಯ ವೇಳೆ ಪಕ್ಷದ ಇಬ್ಬರು ನಾಯಕರ ನಡುವೆ ಉಂಟಾದ ವಿವಾದದ ನಂತರ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಹೇಳಲಾಗಿದೆ. ಹೊರಡಿಸಲಾದ ಆದೇಶದ ಪ್ರಕಾರ, ಜಿಲ್ಲಾ ಅಧ್ಯಕ್ಷರು ಮತ್ತು ಮಹಾನಗರ ಅಧ್ಯಕ್ಷರು ಸೇರಿದಂತೆ ಸಂಪೂರ್ಣ ಜಿಲ್ಲಾ ಕಾರ್ಯಕಾರಿ ಸಮಿತಿ, ಮಹಾನಗರ ಕಾರ್ಯಕಾರಿ ಸಮಿತಿ, ಅಂಗಸಂಸ್ಥೆಗಳು ಹಾಗೂ ಗೋರಖ್ಪುರದ ರಾಜ್ಯ ಮತ್ತು ಪ್ರಾದೇಶಿಕ ಕಾರ್ಯಕಾರಿ ಸಮಿತಿಗಳ ಎಲ್ಲಾ ಪದಾಧಿಕಾರಿಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ವಿಸರ್ಜಿಸಲಾಗಿದೆ. ಒಂದು ದಿನದ ಹಿಂದೆ, ಪತ್ರಿಕಾಗೋಷ್ಠಿಯಲ್ಲಿ ಇಬ್ಬರು ಎಸ್‌ಪಿ ನಾಯಕರ ನಡುವಿನ ವಾಗ್ವಾದವು ಕೈಕೈ ಮಿಲಾಯಿಸುವ ಹಂತಕ್ಕೆ ತಲುಪಿತ್ತು. ಸಮಾಜವಾದಿ ಪಕ್ಷದ ಅಭ್ಯರ್ಥಿಯಾಗಿ ಗೋರಖ್‌ಪುರ ಗ್ರಾಮೀಣ ಕ್ಷೇತ್ರದಿಂದ ವಿಧಾನಸಭಾ ಚುನಾವಣೆಗೆ ಸ್ಪರ್ಧಿಸುತ್ತಿರುವ ಅಂಶುಮಾನ್ ಸಿಂಗ್ ಮತ್ತು ಮಾಜಿ ಜಿಲ್ಲಾ ಅಧ್ಯಕ್ಷ ನಗೀನಾ ಸಾಹ್ನಿ ಅವರ ನಡುವೆ ಪತ್ರಿಕಾಗೋಷ್ಠಿಯಲ್ಲಿ ವಾಗ್ವಾದ ನಡೆದಿತ್ತು. ಈ ವೇಳೆ ಅಂಶುಮಾನ್ ಅವರ ಪುತ್ರ ಮಾಜಿ ಜಿಲ್ಲಾ ಅಧ್ಯಕ್ಷರಿಗೆ ಕಪಾಳಮೋಕ್ಷ ಮಾಡಿದರು. ಅಲ್ಲಿ ಉಪಸ್ಥಿತರಿದ್ದವರು ಮಧ್ಯಪ್ರವೇಶಿಸಿ ಪರಿಸ್ಥಿತಿಯನ್ನು ತಿಳಿಗೊಳಿಸಿದರು. ನಂತರ ಈ ಸಂಪೂರ್ಣ ವಿಷಯವನ್ನು ರಾಷ್ಟ್ರೀಯ ಅಧ್ಯಕ್ಷರ ಗಮನಕ್ಕೆ ತರಲಾಯಿತು. ಸಂಜೆಯ ವೇಳೆಗೆ ಅಂಶುಮಾನ್ ಸಿಂಗ್ ಅವರನ್ನು ಪಕ್ಷದಿಂದ ಉಚ್ಚಾಟಿಸಲಾಯಿತು. ಮರುದಿನ, ಪಕ್ಷವು ಗೋರಖ್‌ಪುರ ಜಿಲ್ಲೆಯ ಸಂಪೂರ್ಣ ಕಾರ್ಯಕಾರಿ ಸಮಿತಿಯನ್ನು ವಿಸರ್ಜಿಸಿತು.

# ಸ್ಪೇನ್‌ನಲ್ಲಿ ಗೃಹ ಬಿಕ್ಕಟ್ಟು; ಸಣ್ಣ ಮನೆಗೂ 2 ಲಕ್ಷ ರೂ ಬಾಡಿಗೆ: ಬೀದಿಗಿಳಿದು ಲಕ್ಷಾಂತರ ಜನರ ಹೋರಾಟ



**ಬಾರ್ಸಿಲೋನಾ, ಅ.4:** ಯೂರೋಪ್ನ ಪ್ರಮುಖ ರಾಷ್ಟ್ರಗಳಲ್ಲೊಂದೆನಿಸಿದ ಸ್ಪೇನ್‌ನಲ್ಲಿ ತೀವ್ರ ಮಟ್ಟದ ಗೃಹ ಬಿಕ್ಕಟ್ಟು ಎದುರಾಗಿದೆ. ಅಗತ್ಯ ವಸತಿ ಸೌಲಭ್ಯದ ಅತೀವ ಕೊರತೆ ಆಗಿದೆ. ಮನೆಗಳ ಲಭ್ಯತೆ ಕಡಿಮೆ ಇರುವುದರಿಂದ ಬಾಡಿಗೆ ಸಿಕ್ಕಾಪಟ್ಟೆ ಏರುತ್ತಿದೆ. ಅದರಲ್ಲೂ ಪ್ರಮುಖ ನಗರಗಳಾದ ಮ್ಯಾಡ್ರಿಡ್, ಬಾರ್ಸಿಲೋನಾದಲ್ಲಂತೂ ಜನರು ಹೈರಾಣಾಗಿ ಹೋಗಿದ್ದಾರೆ. ಲಕ್ಷಾಂತರ ಜನರು ಬೀದಿಗಿಳಿದು ಬೃಹತ್ ಪ್ರತಿಭಟನೆಗಳನ್ನು ನಡೆಸುತ್ತಿದ್ದಾರೆ. ಬಾಡಿಗೆಯನ್ನು ಶೇ.50ರಷ್ಟು ಇಳಿಸಿ, ಇಲ್ಲವೇ ನಾವು ಬಾಡಿಗೆ ನೀಡುವುದನ್ನು ತಡೆಯುತ್ತೇವೆ ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದ್ದಾರೆ. ಜನಾಕ್ರೋಶಕ್ಕೆ ಸರ್ಕಾರವೇ ಪತನಗೊಳ್ಳುವ ಸಾಧ್ಯತೆ ಇದೆ. ಕಳೆದ ಐದು ವರ್ಷಗಳಲ್ಲಿ ಸ್ಪೇನ್‌ನಲ್ಲಿ ಮನೆ ಬಾಡಿಗೆ ದರಗಳು ಸರಾಸರಿ ಶೇ. 30 ರಿಂದ ಶೇ. 50 ರಷ್ಟು ಏರಿಕೆಯಾಗಿವೆ. ಮ್ಯಾಡ್ರಿಡ್ ಮತ್ತು ಬಾರ್ಸಿಲೋನಾದಂತಹ ಮಹಾನಗರಗಳಲ್ಲಿ ಯುವಜನರು ಮತ್ತು ಮಧ್ಯಮ ವರ್ಗದ ಕುಟುಂಬಗಳು ತಮ್ಮ ಆದಾಯದ ಶೇ. 50 ಕ್ಕಿಂತ ಹೆಚ್ಚು ಭಾಗವನ್ನು ಕೇವಲ ಬಾಡಿಗೆಗಾಗಿಯೇ ವೆಚ್ಚ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

**ಸಾಧಾರಣ ಮನೆಗೆ 2 ಲಕ್ಷ ರೂ ಬಾಡಿಗೆ:**

ಪ್ರಮುಖ ನಗರಗಳಲ್ಲಿ ಒಂದು ಚದರ ಮೀಟರ್ ವಸತಿಗೆ ಸರಾಸರಿ 20ರಿಂದ 25 ಯೂರೋ ದರ ಇದೆ. ಅಂದರೆ, 1,000 ಚದರಡಿ ವಿಸ್ತೀರ್ಣದ ಮನೆಗೆ ಬರೋಬ್ಬರಿ 2 ಲಕ್ಷ ರುಪಾಯಿಗೂ ಹೆಚ್ಚಿನ ಬಾಡಿಗೆ ದರ ಚಾಲ್ತಿಯಲ್ಲಿದೆ. ಒಂದು ಅಂದಾಜು ಪ್ರಕಾರ ಸ್ಪೇನ್‌ನಲ್ಲಿ ಮನೆಗಳಿಗೆ ಇರುವ ಬೇಡಿಕೆ ಪರಿಗಣಿಸಿದರೆ, ಸುಮಾರು 7 ಲಕ್ಷ ಮನೆಗಳ ಕೊರತೆ ಇದೆ. ಹೀಗಾಗಿ, ಬಾಡಿಗೆ ವಿಪರೀತ ಏರಲು ಕಾರಣವಾಗಿದೆ.

# ಮತದಾರರ ಪಟ್ಟಿಗಳ ವಿವಾದಾತ್ಮಕ ನಿರ್ವಹಣೆಯ ವಿರುದ್ಧ ಮುಂಬೈನಲ್ಲಿ ಪ್ರತಿಭಟನೆ

**ಮುಂಬೈ, ಅ.4:** ಮಹಾರಾಷ್ಟ್ರದ ರಾಜಕೀಯ ಭೂದೃಶ್ಯದಲ್ಲಿ ಅಲೆಗಳನ್ನು ಎಬ್ಬಿಸಿರುವ ಪ್ರಮುಖ ರಾಜಕೀಯ ಬೆಳವಣಿಗೆಯಲ್ಲಿ, ದೂರವಾಗಿರುವ ಸೋದರಸಂಬಂಧಿಗಳಾದ ಉದ್ಧವ್ ಠಾಕ್ರೆ ಮತ್ತು ರಾಜ್ ಠಾಕ್ರೆ ಅವರು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಮತ್ತು ಮತದಾರರ ಪಟ್ಟಿಗಳ ವಿವಾದಾತ್ಮಕ ನಿರ್ವಹಣೆಯ ವಿರುದ್ಧ ಭಾನುವಾರ ಮುಂಬೈನಲ್ಲಿ ಬೃಹತ್ ಜಂಟಿ ಪ್ರತಿಭಟನಾ ಮೆರವಣಿಗೆಯನ್ನು ಮುನ್ನಡೆಸಿದರು. ನಿರೀಕ್ಷೆಗಳನ್ನು ಮೀರಿ, ಐತಿಹಾಸಿಕ ಪ್ರದರ್ಶನವು ಕಾಂಗ್ರೆಸ್ ಮತ್ತು ಎನ್‌ಸಿಪಿ (ಶರದ್ ಪವಾರ್ ಬಣ) ದ ಪ್ರಮುಖ ನಾಯಕರು ಹಿಂದಿನ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಠಾಕ್ರೆ ನೇತೃತ್ವದ ಪಕ್ಷಗಳೊಂದಿಗೆ ಒಂದೇ ವೇದಿಕೆಯನ್ನು ಹಂಚಿಕೊಳ್ಳಲು ಸಾಕ್ಷಿಯಾಯಿತು. ಕಾಂಗ್ರೆಸ್ನ ಪ್ರಮುಖ ನಾಯಕರಾದ ಬಾಳಾಸಾಹೇಬ್ ಥೋರಟ್ ಮತ್ತು ವಿಜಯ್ ವಡೆಟ್ಟಿವಾರ್ ಸೇರಿದಂತೆ ಹಿರಿಯ ಮಹಾ ವಿಕಾಸ್ ಅಘಾಡಿ (ಎಂವಿಎ) ನಾಯಕರು, ಎನ್‌ಸಿಪಿ (ಎಸ್‌ಪಿ) ರಾಜ್ಯ ಅಧ್ಯಕ್ಷ ಜಯಂತ್ ಪಾಟೀಲ್ ಜೊತೆಗೆ ಮೆರವಣಿಗೆಯಲ್ಲಿ ಸಕ್ರಿಯವಾಗಿ ಭಾಗವಹಿಸಿದರು ಮತ್ತು ವೇದಿಕೆಯಲ್ಲಿ ಪ್ರಮುಖ ಸ್ಥಾನಗಳನ್ನು ಆಕ್ರಮಿಸಿಕೊಂಡರು.

ಸಾಮೂಹಿಕ ರಾಜಕೀಯ ಇಚ್ಛಾಶಕ್ತಿಯನ್ನು ಪ್ರದರ್ಶಿಸುತ್ತಾ, ಭಾಗವಹಿಸುವ ಪಕ್ಷಗಳು ಪ್ರಜ್ಞಾಪೂರ್ವಕವಾಗಿ ಪಕ್ಷದ ಚಿಹ್ನೆಗಳನ್ನು ಬದಿಗಿಟ್ಟು, ಸಾರ್ವಜನಿಕ ಹಕ್ಕುಗಳಿಗಾಗಿ ರಾಜಕೀಯೇತರ ಹೋರಾಟವಾಗಿ ಆಂದೋಲನವನ್ನು ಬಿಂಬಿಸಲು ಭಾರತೀಯ ರಾಷ್ಟ್ರೀಯ ಧ್ವಜ (ತ್ರಿವರ್ಣ) ದೊಂದಿಗೆ ಬೀದಿಗಳಲ್ಲಿ ಪ್ರವಾಹವನ್ನು ಬೀರಲು ಆಯ್ಕೆ ಮಾಡಿಕೊಂಡವು. ಹಿಂದಿನ ಸೈದ್ಧಾಂತಿಕ ಮತ್ತು ಪ್ರಾದೇಶಿಕ ವಿವಾದಗಳ ಹೊರತಾಗಿಯೂ – ವಿಶೇಷವಾಗಿ ಎಂಎನ್‌ಎಸ್




ಮುಖ್ಯಸ್ಥ ರಾಜ್ ಠಾಕ್ರೆ ಅವರ ಹಿಂದಿನ ರಾಜಕೀಯ ನಿಲುವುಗಳನ್ನು ಸುತ್ತುವರೆದಿರುವ – ಕಾಂಗ್ರೆಸ್ ಮತ್ತು ಎನ್ಸಿಪಿ ಈ ಕರೆಯನ್ನು ಬೆಂಬಲಿಸಲು ಮುಂದೆ ಬಂದವು, ಇದು ಮಹಾರಾಷ್ಟ್ರದಲ್ಲಿ ಸ್ಥಾಪನಾ ವಿರೋಧಿ ಶಕ್ತಿಗಳ ಪ್ರಬಲ ಬಲವರ್ಧನೆಯನ್ನು ಸೂಚಿಸುತ್ತದೆ. ಎಂಎನ್‌ಎಸ್ ಮುಖ್ಯಸ್ಥರೊಂದಿಗೆ ತಮ್ಮ ಉಪಸ್ಥಿತಿಯನ್ನು ಸಮರ್ಥಿಸಿಕೊಂಡ ಹಿರಿಯ ಕಾಂಗ್ರೆಸ್ ನಾಯಕ ಬಾಳಾಸಾಹೇಬ್ ಥೋರಟ್, ಮೆರವಣಿಗೆಯು ವೈಯಕ್ತಿಕ ಪಕ್ಷದ ರೇಖೆಗಳನ್ನು ಮೀರಿದೆ, ಸಂವಿಧಾನವನ್ನು ರಕ್ಷಿಸಲು ಮತ್ತು ಭಾರತೀಯ ಪ್ರಜಾಪ್ರಭುತ್ವವನ್ನು ರಕ್ಷಿಸಲು ಇದು ಒಂದು ಪ್ರಮುಖ ಕೂಗು ಎಂದು ಪ್ರತಿಪಾದಿಸಿದರು.

ಜಂಟಿ ರಂಗವು ಸಿಇಸಿ ಜ್ಞಾನೇಶ್ ಕುಮಾರ್ ಮೇಲೆ ಒತ್ತಡವನ್ನು ತೀವ್ರಗೊಳಿಸಿದೆ, ವ್ಯವಸ್ಥಿತ ಚುನಾವಣಾ ಕುಶಲತೆ ಮತ್ತು ಮತದಾರರ ಪಟ್ಟಿಗಳ ವಿವಾದಾತ್ಮಕ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಬಗ್ಗೆ ಹೊಣೆಗಾರಿಕೆಯನ್ನು ಒತ್ತಾಯಿಸಿದೆ. ಪ್ರಜಾಪ್ರಭುತ್ವ ಸಮಗ್ರತೆಯ ಮೇಲೆ ಕಟ್ಟುನಿಟ್ಟಾಗಿ ಗಮನ ಹರಿಸಲು, ಯಾವುದೇ ರಾಜಕೀಯ ಪಕ್ಷದ ಧ್ವಜಗಳನ್ನು ಪ್ರದರ್ಶಿಸಬಾರದು ಎಂದು ಸಂಘಟಕರು ಆದೇಶಿಸಿದರು, ಪ್ರತಿಭಟನೆಯನ್ನು ರಾಷ್ಟ್ರೀಯ ಗುರುತಿನ ಏಕೀಕೃತ ಪ್ರದರ್ಶನದಿಂದ ಮಾತ್ರ ವ್ಯಾಖ್ಯಾನಿಸಲಾಗಿದೆ ಎಂದು ಖಚಿತಪಡಿಸಿಕೊಂಡರು.

# ಪಂಜಾಬ್‌ನಲ್ಲಿ ಬಹುಮತದೊಂದಿಗೆ ಸರ್ಕಾರ ರಚಿಸುತ್ತೇವೆ ಆ ರಾಜ್ಯದಲ್ಲಿ ಕಾನೂನು, ಸುವ್ಯವಸ್ಥೆ ಕುಸಿತ: ಸಚಿನ್ ಪೈಲಟ್

**ಟೋಂಕ್, ಅ. 4:** ಭಗವಂತ್ ಮಾನ್ ನೇತೃತ್ವದ ಸರ್ಕಾರದ ಅಡಿಯಲ್ಲಿ ಪಂಜಾಬ್‌ನಲ್ಲಿ ಕಾನೂನು-ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದಿದೆ ಎಂದು ಕಾಂಗ್ರೆಸ್ ನಾಯಕ ಹಾಗೂ ಪಂಜಾಬ್ ಕಾಂಗ್ರೆಸ್ ಉಸ್ತುವಾರಿ ಸಚಿನ್ ಪೈಲಟ್ ಭಾನುವಾರ ಆರೋಪಿಸಿದ್ದಾರೆ. ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ರಾಜ್ಯದಲ್ಲಿ ಸ್ಪಷ್ಟ ಬಹುಮತದೊಂದಿಗೆ ಸರ್ಕಾರ ರಚಿಸಲಿದೆ ಎಂಬ ವಿಶ್ವಾಸವನ್ನೂ ಅವರು ವ್ಯಕ್ತಪಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಪೈಲಟ್, "ಪಂಜಾಬ್‌ನಲ್ಲಿ ಗ್ಯಾಂಗ್‌ಸ್ಟರ್‌ಗಳು ಬಹಿರಂಗವಾಗಿ ಗುಂಡಿನ ದಾಳಿ ನಡೆಸುತ್ತಿದ್ದಾರೆ, ಎನ್‌ಕೌಂಟರ್‌ಗಳು ನಡೆಯುತ್ತಿವೆ ಮತ್ತು ಜೈಲುಗಳ ಒಳಗಿನಿಂದಲೇ ಕಾರ್ಯಾಚರಣೆ ನಡೆಸುತ್ತಿರುವ ವ್ಯಕ್ತಿಗಳು



ಸುಲಿಗೆ ಹಣಕ್ಕಾಗಿ ಬೇಡಿಕೆ ಇಡುತ್ತಿದ್ದಾರೆ. ಅಲ್ಲಿ ಕಾನೂನು-ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದಿದೆ. ಫೋನ್ ಮೂಲಕ ಆರ್ಡರ್ ಮಾಡುವ ಮೂಲಕ ಮನೆಗಳಿಗೇ ಮಾರಣಾಂತಿಕ ಮಾದಕವಸ್ತುಗಳನ್ನು ತಲುಪಿಸಲಾಗುತ್ತಿದೆ. ಪರಿಸ್ಥಿತಿಯನ್ನು ನಿಭಾಯಿಸುವಲ್ಲಿ ಭಗವಂತ್ ಮಾನ್ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ. ಪಂಜಾಬ್‌ನಲ್ಲಿ ನಾವು ಸ್ಪಷ್ಟ ಬಹುಮತದೊಂದಿಗೆ ಸರ್ಕಾರ ರಚಿಸುತ್ತೇವೆ ಎಂಬ ವಿಶ್ವಾಸ ನನಗಿದೆ," ಎಂದು ಹೇಳಿದರು. ಇದಕ್ಕೂ ಮುನ್ನ, ಟೋಂಕ್ ಪುರಸಭೆಯ ಅಧ್ಯಕ್ಷರಾಗಿ ಮಯಾಂಕ್ ಗೋಯಲ್ ಆಯ್ಕೆಯಾದ ಹಿನ್ನೆಲೆಯಲ್ಲಿ ನಡೆದ ವಿಜಯೋತ್ಸವ ರ್‍ಯಾಲಿಯಲ್ಲಿ ಪೈಲಟ್ ಭಾಗವಹಿಸಿದ್ದರು. ಒಂದು ದಿನದ ಹಿಂದೆಯಷ್ಟೇ, ಪಂಜಾಬ್ ಕಾಂಗ್ರೆಸ್‌ನ ನೂತನ ಮುಖ್ಯಸ್ಥರಾಗಿ ನೇಮಕಗೊಂಡ ಪರ್ಗತ್ ಸಿಂಗ್ ಅವರನ್ನು "ರಾಷ್ಟ್ರೀಯ ಐಕಾನ್" ಎಂದು ಬಣ್ಣಿಸಿ ಬೆಂಬಲ ವ್ಯಕ್ತಪಡಿಸಿದ್ದ ಪೈಲಟ್, ರಾಜ್ಯ ಪಕ್ಷದ ಮಾಜಿ ಮುಖ್ಯಸ್ಥ ಅಮರಿಂದರ್ ಸಿಂಗ್ ರಾಜಾ ವಾರಿಂಗ್ ಅವರ ಕೊಡುಗೆಯನ್ನು ಶ್ಲಾಘಿಸಿದ್ದರು ಹಾಗೂ "ಕಾಲದ ಬದಲಾವಣೆಯೊಂದಿಗೆ ಬದಲಾವಣೆ ಅನಿವಾರ್ಯ" ಎಂದು ಹೇಳಿದ್ದರು.

ಇಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಪೈಲಟ್, ಭಾರತೀಯ ಹಾಕಿ ತಂಡದ ಮಾಜಿ ನಾಯಕರಾಗಿ ಪರ್ಗತ್ ಸಿಂಗ್ ಅವರಿಗಿರುವ ಅನುಭವ ಮತ್ತು ಕ್ರೀಡಾಪಟುವಾಗಿ ಅವರಿಗಿರುವ ವ್ಯಕ್ತಿತ್ವವು ಪಂಜಾಬ್ ಜನರಿಗೆ ಸೇವೆ ಸಲ್ಲಿಸಲು ಅವರಿಗೆ ಸಹಕಾರಿಯಾಗಲಿದೆ ಎಂದು ಹೇಳಿದರು. ರಾಜಾ ವಾರಿಂಗ್ ಅವರನ್ನು ಶ್ಲಾಘಿಸಿದ ಅವರು, ವಾರಿಂಗ್ ಕಳೆದ ಎರಡು ದಶಕಗಳಿಂದ ಕಾಂಗ್ರೆಸ್‌ಗಾಗಿ ಸಮರ್ಪಣಾ ಭಾವದಿಂದ ಕೆಲಸ ಮಾಡಿದ್ದಾರೆ ಮತ್ತು ಪಂಜಾಬ್ ಕಾಂಗ್ರೆಸ್ ಮುಖ್ಯಸ್ಥರಾಗಿ ತಮ್ಮ ನಾಲ್ಕು ವರ್ಷಗಳ ಅವಧಿಯಲ್ಲಿ ಪಕ್ಷವನ್ನು ಬಲಪಡಿಸಲು ಶ್ರಮಿಸಿದ್ದಾರೆ ಎಂದು ಹೇಳಿದರು.

# ಮದರ್ ಇಂಡಿಯಾ ಎಕ್ಸ್ ಸ್ಟೂಡೆಂಟ್ಸ್ ಫೌಂಡೇಶನ್ 4ನೇ ವಾರ್ಷಿಕ ಮಹಾಸಭೆ



**ಮುಂಬಯಿ, ಅ.4:** ಮದರ್ ಇಂಡಿಯಾ ಎಕ್ಸ್ ಸ್ಟೂಡೆಂಟ್ಸ್ ಫೌಂಡೇಶನ್ ಇದರ 4ನೇ ವಾರ್ಷಿಕ ಮಹಾಸಭೆಯು ಕಳೆದ ರವಿವಾರ (ಸೆ. 27)ರಂದು ಫೋರ್ಟ್‌ನಲ್ಲಿರುವ ಪಿ. ಎಂ ರಸ್ತೆಯಲ್ಲಿರುವ ಎಲ್.ಐ. ಸಿ ಕ್ಯಾಂಟೀನ್‌ನಲ್ಲಿ ಫೌಂಡೇಶನ್‌ನ ಅಧ್ಯಕ್ಷ ಸುರೇಂದ್ರ ಎ. ಪೂಜಾರಿ ಅವರ ಅಧ್ಯಕ್ಷತೆಯಲ್ಲಿ ಜರಗಿತು.

ಪ್ರಧಾನ ಕಾರ್ಯದರ್ಶಿ ಹರೀಶ್ ಜಿ. ಮೈಂದನ್ ಅವರು ಸದಸ್ಯರನ್ನು ಸ್ವಾಗತಿಸಿ, ವರದಿ ವಾಚಿಸಿದರು. ಜತೆ ಕಾರ್ಯದರ್ಶಿ ಅಶೋಕ ಸುವರ್ಣ ಅವರು 3ನೇ ವಾರ್ಷಿಕ ಮಹಾಸಭೆಯ ಟಿಪ್ಪಣಿಯನ್ನು ಓದಿದರು. ಕರುಣಾಕರ ಕಾಪು ಸೂಚಸಿದರು. ಆರ್. ಎಚ್ ಶೆಟ್ಟಿಗಾರ್ ಅನುಮೋದಿಸಿದರು. ಕೋಶಾಧಿಕಾರಿ ಟಿ. ವಿ ಪೂಜಾರಿ ಅವರು ಆಯವ್ಯಯ ಲೆಕ್ಕಪಟ್ಟಿಗಳನ್ನು ಮಂಡಿಸಿದರು. ದಿನೇಶ್ ಹೆಮ್ಮಾಡಿ ಅವರು ಸೂಚಸಿದರು. ಬಾಬು ಡಿ.ಶೆಟ್ಟಿ ಅನುಮೋದಿಸಿ ಮಂಜೂರಿ ಮಾಡಲಾಯಿತು. ಮುಂದಿನ ವರ್ಷಕ್ಕೆ ಕೃಷ್ಣ ನಾಯಕ್ ಕಂಪೆನಿಯನ್ನು ಲೆಕ್ಕ ಪರಿಶೋಧಕರಾಗಿ ಆಯ್ಕೆ ಮಾಡಲಾಯಿತು. ಮಹಾಸಭೆಯಲ್ಲಿ ಮುಂದಿನ ಎರಡು ವರ್ಷಗಳ ಅವಧಿಗೆ ಆಡಳಿತ ಸಮಿತಿಯನ್ನು ರಚಿಸಲಾಯಿತು. ಅಧ್ಯಕ್ಷರಾಗಿ ಸುರೇಂದ್ರ ಎ.ಪೂಜಾರಿ ಅವರನ್ನು ಪುನರಾಯ್ಕೆ ಮಾಡಲಾಯಿತು. ಉಪಾಧ್ಯಕ್ಷರಾಗಿ ಯಶವಂತ್



ಎನ್. ಪೂಜಾರಿ, ಸಂತೋಷ್ ಕುಮಾರ್ ಎಸ್. ಶೆಟ್ಟಿ, ಹರೀಶ್ ಜಿ.ಮೈಂದನ್ ಮತ್ತು ಟಿ. ವಿ. ಪೂಜಾರಿ ಪ್ರಧಾನ ಕಾರ್ಯದರ್ಶಿಯಾಗಿ ಜಯರಾಮ್ ಎಂ. ಪೂಜಾರಿ ವಸಾಯಿ, ಕೋಶಾಧಿಕಾರಿಯಾಗಿ ಮಂದಾರ್ ಎನ್. ಹೆಗ್ಡೆ ಜತೆ ಕಾರ್ಯದರ್ಶಿಗಳಾಗಿ ಅಶೋಕ ಎಸ್. ಸುವರ್ಣ ಮತ್ತು ಹರೀಶ್ ಎಸ್. ಪೂಜಾರಿ ಸಹ ಕೋಶಾಧಿಕಾರಿಯಾಗಿ ಹೇಮಂತ್ ಪಿ. ಪೂಜಾರಿ ಸಮಿತಿ ಸದಸ್ಯರಾಗಿ ಉಮೇಶ್ ಎಸ್.ಶೆಟ್ಟಿ, ಸದಾನಂದ ಎಸ್. ಶೆಟ್ಟಿ, ಮಂಜುನಾಥ್ ಕೆ. ಪೂಜಾರಿ, ಭಾಸ್ಕರ್ ಕೆ. ಜತ್ತನ್, ದಿನೇಶ್ ಮೊಗವೀರ, ಶ್ರೀಕಾಂತ್ ಬಿ. ಪೂಜಾರಿ, ಕರುಣಾಕರ ಕೆ. ಕಾಪು, ಸತೀಶ್ ಬೆಳ್ಚಡ, ಸಚ್ಚಿದಾನಂದ ಜಿ. ನಾಯ್ಕ್, ಶಿವಾನಂದ ಬಂಗೇರ, ಬಾಬು ಡಿ. ಶೆಟ್ಟಿ ಆರ್ ಎಚ್. ಶೆಟ್ಟಿಗಾರ್ ಅಧ್ಯಕ್ಷರು ತಮ್ಮ ಭಾಷಣದಲ್ಲಿ ಸಂಘದ ಸದಸ್ಯರು ಒಗ್ಗಟ್ಟು, ಪರೋಪಕಾರ ಹಾಗೂ ಸಮಾಜ ಸೇವೆಯ ಸಂಘದ ಧೋರಣೆಗೆ ಬದ್ಧರಾಗಿದ್ದು, ಕಾರ್ಯಕ್ರಮಗಳನ್ನು ನಡೆಸಬೇಕು ಎಂದು ಕರೆ ನೀಡಿದರು. ವೇದಿಕೆಯಲ್ಲಿ ಜತೆ ಕಾರ್ಯದರ್ಶಿ ಜಯರಾಮ್ ಕೆ . ಪೂಜಾರಿ ರಸಾಯನಿ ಅವರು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಕರ್ನಾಟಕ ಸಂಘದ ಪ್ರಧಾನ ಕಾರ್ಯದರ್ಶಿ ಓಂದಾಸ್ ಕಣ್ಣಂಗಾರ್ ಅವರು ಉಪಸ್ಥಿತರಿದ್ದು ಕರ್ನಾಟಕ ಸಂಘದ ಸಮುಚ್ಚಯ ನಿರ್ಮಾಣದ ಪ್ರಗತಿ ಮಾಹಿತಿ ನೀಡಿ, ಕನ್ನಡಿಗರಿಗೆ ಅಗತ್ಯ ವಾಗಿ ಬೇಕಾಗಿರುವ ಈ ಸಂಘದ ಕಟ್ಟಡ ನಿರ್ಮಾಣಕ್ಕೆ ಕೈ ಜೋಡಿಸಿ ಸಹಕರಿಸಬೇಕೆಂದು ಮನವಿ ಪತ್ರ ವನ್ನು ಅಧ್ಯಕ್ಷರಿಗೆ ನೀಡಿ ವಿನಂತಿ ಮಾಡಿದರು. ಅಶೋಕ ಸುವರ್ಣ ವಂದಿಸಿದರು.

# ಸಾವಿನ ಭಯವಿರಲಿಲ್ಲ: ವಿಮಾನ ಪತನಗೊಳಿಸುವುದೇ ಉದ್ದೇಶವಾಗಿತ್ತು: ಸಹ ಪೈಲಟ್

**ರಿಯಾದ್,ಅ.4:** 170ಕ್ಕೂ ಹೆಚ್ಚು ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಫ್ಲೈದುಬೈ ವಿಮಾನವನ್ನು ಪತನಗೊಳಿಸಲು ಯತ್ನಿಸಿದ ಹಾಗೂ ಕ್ಯಾಪ್ಟನ್ ಸ್ಮಿತ್ ಮಚ್ಚಾರ್ ಮೇಲೆ ಹಲ್ಲೆ ನಡೆಸಿದ ಆರೋಪವಿರುವ ಫ್ಲೈದುಬೈ ಸಹ-ಪೈಲಟ್ ಹಮಾಮ್ ಅಲ್-ಹಮ್ಮಾಮಿ ತನಿಖಾಧಿಕಾರಿಗಳ ಮುಂದೆ ಸತ್ಯ ಬಾಯ್ಬಿಟ್ಟಿದ್ದಾನೆ.

ವಿಮಾನವನ್ನು ಪತನಗೊಳಿಸುವುದೇ ನನ್ನ ಉದ್ದೇಶವಾಗಿತ್ತು. ನನಗೆ ಸಾವಿನ ಭಯವಿರಲಿಲ್ಲ ಎಂದು ತನಿಖಾಧಿಕಾರಿಗಳಿಗೆ ತಿಳಿಸಿದ್ದಾನೆ ಎಂದು 'ದಿ ವಾಲ್ ಸ್ಟ್ರೀಟ್ ಜರ್ನಲ್' ವರದಿ ಮಾಡಿದೆ.

ಹಮ್ಮಾಮಿ ವಿಚಾರಣೆಯ ವಿವರಗಳನ್ನು ತಿಳಿದಿರುವ ಸೌದಿ ಅಧಿಕಾರಿಯೊಬ್ಬರು ಪತ್ರಿಕೆಗೆ ಈ ವಿಷಯ ತಿಳಿಸಿದ್ದು, ವಿಮಾನವನ್ನು ಪತನಗೊಳಿಸುವ ತಮ್ಮ ಉದ್ದೇಶವನ್ನು ಸಹ ಪೈಲಟ್ ಒಪ್ಪಿಕೊಂಡಿದ್ದಾರೆ. ಸಾಯುವ ಬಗ್ಗೆ ಯಾವುದೇ ಭಯವಿಲ್ಲ ಎಂದು ಹೇಳಿಕೆ ನೀಡಿದ್ದಾನೆ ಎಂದು ತಿಳಿದುಬಂದಿದೆ.

**ಈ ಮಾಹಿತಿಯು ಹೊಸ ಪ್ರಶ್ನೆಗಳನ್ನು ಹುಟ್ಟುಹಾಕಿದೆ:** ತೀವ್ರಗಾಮಿ ಸಿದ್ಧಾಂತದತ್ತ ಆಕರ್ಷಿತನಾದ ಹಾಗೂ ತೀವ್ರಗಾಮಿ ಒಲವಿನ ಕಾರಣದಿಂದ ಅಧಿಕಾರಿಗಳ ಗಮನ ಸೆಳೆದಿದ್ದ ಓಮನ್ ಪ್ರಜೆಯಾದ ಹಮ್ಮಾಮಿ, ಹೇಗೆ ಕಾಕ್‌ಪಿಟ್‌ಗೆ ಮರಳಿ ಅಂತಾರಾಷ್ಟ್ರೀಯ ವಿಮಾನವನ್ನು ಚಲಾಯಿಸಲು ಸಾಧ್ಯವಾಯಿತು ಎಂಬುದು ಈಗ ಚರ್ಚೆಯ ವಿಷಯವಾಗಿದೆ.

WSJ ವರದಿಯ ಪ್ರಕಾರ, ಹಮ್ಮಾಮಿ, ಜೂನ್ 2022ರಲ್ಲಿ ಅರೇಬಿಕ್ ಭಾಷೆಯಲ್ಲಿ ಬರೆದಿದ್ದ ಮತ್ತು ನಂತರ ಅಳಿಸಿಹಾಕಲಾದ ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ, ವಿಮಾನಯಾನ ಮತ್ತು ವಿಮಾನ ಚಾಲನಾ ತರಬೇತಿಯ ಬಗ್ಗೆ ತಮ್ಮ ಒಲವನ್ನು ವ್ಯಕ್ತಪಡಿಸಿದ್ದರು.

ವಿಮಾನಯಾನ ಮತ್ತು ವಿಮಾನ ಚಾಲನಾ ತರಬೇತಿಯನ್ನು ಸುಂದರವಾಗಿಸುವ ವಿಷಯವೇನೆಂದರೆ, ಅದು ಎಂದಿಗೂ ಏಕತಾನತೆಯಿಂದ ಕೂಡಿರುವುದಿಲ್ಲ ಎಂದು ಅವರು ಬರೆದುಕೊಂಡಿದ್ದರು. ಅಲ್ಲದೇ ತಮ್ಮ ಮೊದಲ ಏಕಾಂಗಿ ಹಾರಾಟ ಮತ್ತು ಪ್ರಯಾಣಿಕರನ್ನು ಹೊತ್ತ ವಿಮಾನವನ್ನು ಮೊದಲ ಬಾರಿಗೆ ಲ್ಯಾಂಡ್ ಮಾಡಿದ ಪ್ರಮುಖ ಘಟನೆಗಳನ್ನು ಸಹ ನೆನಪಿಸಿಕೊಂಡಿದ್ದ. ಇವು ಪೈಲಟ್ ಒಬ್ಬರು ಎಂದಿಗೂ ಮರೆಯಲಾಗದ ಅನುಭವಗಳು ಎಂದು ಹೇಳಿಕೊಂಡಿದ್ದರು.

ಕ್ಯಾಪ್ಟನ್ ಮೇಲೆ ನಡೆದ ದಾಳಿಗೆ ಕಾರಣವೇನಾಗಿರಬಹುದು ಮತ್ತು ಫ್ಲೈದುಬೈ ನೇಮಕಾತಿ ಸಮಯದಲ್ಲಿ ಹಮ್ಮಾಮಿಯ ಹಿನ್ನೆಲೆಯನ್ನು ನಿರ್ಲಕ್ಷಿಸಲ್ಪಟ್ಟಿರುವುದರ ಬಗ್ಗೆ ತನಿಖಾಧಿಕಾರಿಗಳು ಪರಿಶೀಲಿಸುತ್ತಿದ್ದಾರೆ.



ದೆಹಲಿ ಕರ್ನಾಟಕ ಸಂಘದ ಸಭಾಂಗಣದಲ್ಲಿ ಭಾನುವಾರ ಅದ್ದೂರಿಯಾಗಿ ಆಚರಿಸುತ್ತಿರುವ ಜನಕಪುರಿ ಕನ್ನಡ ಕೂಟದ 50ನೇ ವರ್ಷದ ಸಂಭ್ರಮಾಚರಣೆ ಕಾರ್ಯಕ್ರಮದ ನಿಮಿತ್ತ ದೆಹಲಿ ಎನ್‌ಸಿಆರ್‌ನ ಸ್ಥಳೀಯ ಸಂಘ ಸಂಸ್ಥೆಗಳ ಅಧ್ಯಕ್ಷರು, ಹಾಗೂ ಕಾರ್ಯದರ್ಶಿಗಳನ್ನು ಅಭಿನಂದಿಸಿ ಸನ್ಮಾನಿಸಲಾಯಿತು.

# ಹಳ್ಳಿಕಾರ್ ಸಮುದಾಯಕ್ಕೆ ಸೂಕ್ತ ಸ್ಥಾನಮಾನ ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ: ಡಾ.ಜಿ.ಪರಮೇಶ್ವರ ಭರವಸೆ

**ಬೆಂಗಳೂರು, ಅ.4:** ಹಳ್ಳಿಕಾರ್ ಸಮುದಾಯವು ರಾಜ್ಯದಲ್ಲಿ ಅತ್ಯಂತ ಕಡಿಮೆ ಜನಸಂಖ್ಯೆ ಹೊಂದಿರುವ ಸಣ್ಣ ಸಮುದಾಯಗಳಲ್ಲಿ ಒಂದಾಗಿದ್ದು, ನನ್ನ ದೃಷ್ಟಿಯಲ್ಲಿ ನಿರ್ಲಕ್ಷ್ಯಕ್ಕೆ ಒಳಗಾಗಿರುವ ಸಮುದಾಯವಾಗಿದೆ. ಈ ಸಮುದಾಯಕ್ಕೆ ಸೂಕ್ತ ಸ್ಥಾನಮಾನ ಕಲ್ಪಿಸುವ ಅಗತ್ಯವಿದೆ. ಹಿಂದುಳಿದ ವರ್ಗದ ಸೂಕ್ತ ಪ್ರವರ್ಗಕ್ಕೆ ಸೇರಿಸುವ ವಿಚಾರದಲ್ಲಿ ನನ್ನ ಸಂಪೂರ್ಣ ಸಹಮತಿ ಇದ್ದು, ಈ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಚರ್ಚಿಸುತ್ತೇನೆ ಎಂದು ಉಪ ಮುಖ್ಯಮಂತ್ರಿಗಳಾದ ಡಾ. ಜಿ. ಪರಮೇಶ್ವರ ಅವರು ತಿಳಿಸಿದರು.

2025-26ನೇ ಸಾಲಿನ ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ಮತ್ತು ಅತ್ಯಧಿಕ ಅಂಕಗಳಿಸಿದ ಹಳ್ಳಿಕಾರ್ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ವಿದ್ಯಾರ್ಥಿವೇತನ ವಿತರಣಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಣ್ಣ ಸಮುದಾಯಗಳು ಒಂದಲ್ಲೊಂದು ರೀತಿಯಲ್ಲಿ ನಿರ್ಲಕ್ಷ್ಯಕ್ಕೆ ಒಳಗಾಗಿರುವುದನ್ನು ನಾವು ನೋಡಿದ್ದೇವೆ. ರಾಜ್ಯದಲ್ಲಿ ಅನೇಕ ಸಮುದಾಯಗಳು ನಿರ್ಲಕ್ಷ್ಯಕ್ಕೆ ಒಳಗಾಗಿವೆ. ಇಂತಹ ಸಮುದಾಯಗಳ ಸ್ಥಿತಿಗತಿಗಳನ್ನು ಅಧ್ಯಯನ ಮಾಡಲು ಚಿನ್ನಸ್ವಾಮಿ ಆಯೋಗ, ವೆಂಕಟಸ್ವಾಮಿ ಆಯೋಗ ಮತ್ತು ಕಾಂತರಾಜ್ ಆಯೋಗಗಳನ್ನು ರಚಿಸಲಾಗಿತ್ತು. ಯಾವ ಸಮುದಾಯಗಳು ನಿರ್ಲಕ್ಷ್ಯಕ್ಕೆ ಒಳಗಾಗಿವೆ ಎಂಬುದನ್ನು ಗುರುತಿಸಿ, ಅವುಗಳಿಗೆ ಉತ್ತೇಜನ ನೀಡುವ ರೀತಿಯಲ್ಲಿ ಸರ್ಕಾರಗಳು ಕ್ರಮ ತೆಗೆದುಕೊಳ್ಳಬೇಕು ಎಂಬ ಉದ್ದೇಶದಿಂದ ಈ ಆಯೋಗಗಳನ್ನು ರಚಿಸಲಾಗಿತ್ತು. ಆದರೂ ಬಹಳಷ್ಟು ಸಮುದಾಯಗಳು ಇನ್ನೂ ಹಿಂದುಳಿದಿವೆ ಎಂದರು.

ಹಳ್ಳಿಕಾರ್ ಸಮುದಾಯವು ನನ್ನ ದೃಷ್ಟಿಯಲ್ಲಿ ನಿರ್ಲಕ್ಷ್ಯಕ್ಕೆ ಒಳಗಾಗಿರುವ ಸಮುದಾಯವಾಗಿದೆ. ಈ ಸಮುದಾಯಕ್ಕೆ ಸೂಕ್ತ ಸ್ಥಾನಮಾನ ಕಲ್ಪಿಸಬೇಕಿದೆ. ಹಳ್ಳಿಕಾರ್ ಸಮುದಾಯವನ್ನು ಹಿಂದುಳಿದ ವರ್ಗದ ಪ್ರವರ್ಗಕ್ಕೆ ಸೇರಿಸುವ ವಿಚಾರದಲ್ಲಿ ನಾನು ಸಂಪೂರ್ಣ ಸಹಮತಿ ವ್ಯಕ್ತಪಡಿಸುತ್ತೇನೆ. ಈ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಚರ್ಚಿಸುತ್ತೇನೆ. ಮುಖ್ಯಮಂತ್ರಿ ಅವರು ಮನಸ್ಸಿಗೆ ತೆಗೆದುಕೊಂಡರೆ ಕೆಲಸ ಆದಂತೆಯೇ. ಅವರು ಒಪ್ಪುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು.

ಸಂವಿಧಾನದ ಆಶಯದಂತೆ ಪ್ರತಿಯೊಬ್ಬರಿಗೂ ಸ್ವಾಭಿಮಾನದ ಬದುಕು ದೊರೆಯಬೇಕು. ಅದನ್ನೇ ಬಾಬಾ ಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರು



ಸಂವಿಧಾನದಲ್ಲಿ ಪ್ರತಿಪಾದಿಸಿದ್ದಾರೆ.

ಹಳ್ಳಿಕಾರ್ ಸಮುದಾಯವು ಹಿಂದುಳಿದ ವರ್ಗದ ಯಾವ ಪ್ರವರ್ಗಕ್ಕೆ ಸೇರಲು ಅರ್ಹವಾಗಿದೆಯೋ, ಆ ಪ್ರವರ್ಗಕ್ಕೆ ಸೇರಿಸುವ ನಿಟ್ಟಿನಲ್ಲಿ ಪ್ರಯತ್ನ ಮಾಡುತ್ತೇನೆ ಎಂದು ತಿಳಿಸಿದರು.

**ಕೆ.ಎಂ. ನಾಗರಾಜ ಅವರ ಸಮಾಜಮುಖಿ ಕಳಕಳಿಗೆ ಡಿಸಿಎಂ ಮೆಚ್ಚುಗೆ :** ಸುಮಾರು 2,500 ವಿದ್ಯಾರ್ಥಿಗಳನ್ನು ಉತ್ತೇಜಿಸುವ ಉದ್ದೇಶದಿಂದ ಪ್ರತಿಭಾ ಪುರಸ್ಕಾರ ನೀಡಲಾಗುತ್ತಿದೆ. ಸುಮಾರು 2 ಕೋಟಿ ಹಣವನ್ನು ಕೆ.ಎಂ. ನಾಗರಾಜ ಅವರು ಪುರಸ್ಕಾರದ ರೂಪದಲ್ಲಿ ನೀಡುತ್ತಿದ್ದಾರೆ. ಇದಕ್ಕಿಂತ ಸಮಾಜದ ಮೇಲಿನ ಕಳಕಳಿಯನ್ನು ಇನ್ನೆಲ್ಲಿ ನೋಡಲು ಸಾಧ್ಯ ಎಂದರು.

ಸಾರ್ವಜನಿಕ ಬದುಕಿನಲ್ಲಿ ಸಮಾಜದ ಮೇಲಿನ ಕಳಕಳಿಯನ್ನು ಹೇಗೆ ಅರ್ಥ ಮಾಡಿಕೊಳ್ಳಬೇಕು ಎಂಬುದಕ್ಕೆ ಇಂತಹ ಕಾರ್ಯಗಳು ಉದಾಹರಣೆಯಾಗುತ್ತವೆ. ಕೆಲವರು ತಮ್ಮ ತಂದೆ-ತಾಯಿ ಹೆಸರಿನಲ್ಲಿ ಕಲ್ಯಾಣ ಮಂಟಪಗಳನ್ನು ನಿರ್ಮಿಸುತ್ತಾರೆ, ಇತರ ಸೇವಾ ಕಾರ್ಯಗಳನ್ನು ಮಾಡುತ್ತಾರೆ. ಆದರೆ ಕೆ.ಎಂ. ನಾಗರಾಜ ಅವರು ಸಮಾಜದ ಮೇಲಿನ ಕಳಕಳಿಯನ್ನೇ ತಮ್ಮ ಸೇವೆಯ ಕ್ಷೇತ್ರವಾಗಿ ಆಯ್ಕೆ ಮಾಡಿಕೊಂಡಿದ್ದಾರೆ ಎಂದು ಹೆಮ್ಮೆ ವ್ಯಕ್ತಪಡಿಸಿದರು. ಯಾವ ಕ್ಷೇತ್ರದ ಮೂಲಕ ಸಮಾಜಕ್ಕೆ ಹೆಚ್ಚು ಒಳಿತಾಗುತ್ತದೆ, ಯಾವ ಕ್ಷೇತ್ರದ ಮೂಲಕ ಸಾಮಾಜಿಕ ಬದಲಾವಣೆ ತರಲು ಸಾಧ್ಯವಾಗುತ್ತದೆ ಎಂಬುದನ್ನು ಅರಿತು ಅವರು ಶಿಕ್ಷಣ ಕ್ಷೇತ್ರವನ್ನು ಆಯ್ಕೆ ಮಾಡಿಕೊಂಡಿದ್ದಾರೆ. ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಈ ಕೆಲಸವನ್ನು ಕೆ.ಎಂ. ನಾಗರಾಜ ಅವರು ಮಾಡದೇ ಇದ್ದಿದ್ದರೆ ಯಾರೂ ಅವರನ್ನು ಪ್ರಶ್ನಿಸುತ್ತಿರಲಿಲ್ಲ. ಆದರೆ ನಾಲ್ಕು ಜನರನ್ನು ವಿದ್ಯಾವಂತರನ್ನಾಗಿ ಮಾಡಿ ಸಮಾಜಕ್ಕೆ ಕೊಡುಗೆ ನೀಡಬೇಕು ಎಂಬ ಉದ್ದೇಶದಿಂದ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದರು.

ತಮ್ಮ ರಾಜಕೀಯ ಜೀವನದಲ್ಲಿಯೂ ನಾಗರಾಜ ಅವರ ಸಲಹೆ ಮತ್ತು ಸಹಕಾರವನ್ನು ಸ್ಮರಿಸಿದರು.

2010ರಲ್ಲಿ ಸೋನಿಯಾ ಗಾಂಧಿಯವರು ನನ್ನನ್ನು ಕೆಪಿಸಿಸಿ ಅಧ್ಯಕ್ಷನನ್ನಾಗಿ ನೇಮಕ ಮಾಡಿದರು. ಆ ಸಂದರ್ಭದಲ್ಲಿ ಕೆ.ಎಂ. ನಾಗರಾಜ ಅವರ ಆಶೀರ್ವಾದ ಪಡೆಯಲು ಅವರ ಮನೆಗೆ ಹೋಗಿದ್ದೆ. ಇಡೀ ರಾಜ್ಯ ಪ್ರವಾಸ ಮಾಡಬೇಕು, ಪ್ರತಿಯೊಂದು ಕ್ಷೇತ್ರಕ್ಕೂ ತೆರಳಿ ಪಕ್ಷ ಸಂಘಟನೆ ಮಾಡಬೇಕು, ನನ್ನಿಂದ ನಿಮಗೆ ಎಲ್ಲ ರೀತಿಯ ಸಹಕಾರ ನೀಡುತ್ತೇನೆ ಎಂದು ಅವರು ತಿಳಿಸಿದ್ದರು ಎಂದು ನೆನಪಿಸಿಕೊಂಡರು.

ನನ್ನ ಮೊದಲ ರಾಜ್ಯ ಪ್ರವಾಸಕ್ಕಾಗಿ ಪಕ್ಷದ ನಾಯಕರಿಗೆ ಅಗತ್ಯವಿರುವ ಎಲ್ಲ ರೀತಿಯ ಸೌಕರ್ಯಗಳಿದ್ದ ಬಸ್ ವ್ಯವಸ್ಥೆಯನ್ನು ಅವರು ಮಾಡಿಕೊಟ್ಟಿದ್ದರು.

ಪಕ್ಷ ಸಂಘಟನೆಯ ಕುರಿತು ಸಲಹೆಗಳನ್ನು ನೀಡಿದ್ದರು. ರಾಜಕಾರಣದಲ್ಲಿ ನಾನು ಯಶಸ್ವಿಯಾಗಲು ಅಂತಹ ಸಲಹೆ-ಸೂಚನೆಗಳು ಸಹಾಯ ವಾಗಿವೆ ಎಂದು ಹೇಳಿದರು.

---

### 2028ರ ಕರ್ನಾಟಕ ವಿಧಾನಸಭಾ ಚುನಾವಣೆಗೆ ಈಗಿನಿಂದಲೇ ಕಣಕ್ಕಿಳಿದ ಪಕ್ಷಗಳು

# ಭಾರತ್ ಜೋಡೋ 2.0 ಹಾಗೂ ಗ್ಯಾರಂಟಿ ಸಮಿತಿಗಳ ಮೂಲಕ ತಳಮಟ್ಟದಲ್ಲಿ ಕಾಂಗ್ರೆಸ್ ಸಂಘಟನೆ ದುಪ್ಪಟ್ಟು

ಬೆಂಗಳೂರು, ಅ.4: ಕರ್ನಾಟಕದಲ್ಲಿ 2028ರ ವಿಧಾನಸಭಾ ಚುನಾವಣೆಗೆ ಇನ್ನೂ ಸುಮಾರು 18 ತಿಂಗಳು ಬಾಕಿ ಇರುವಾಗಲೇ ರಾಜಕೀಯ ಪಕ್ಷಗಳು ಬಹುತೇಕ ಚುನಾವಣಾ ಮೂಡ್‌ಗೆ ಬಂದಂತೆ ಕಾಣುತ್ತಿದೆ.ರಾಜ್ಯದಲ್ಲಿ ಆಡಳಿತಾರೂಢ ಸರ್ಕಾರ ಸತತವಾಗಿ ಎರಡನೇ ಅವಧಿಗೆ ಅಧಿಕಾರಕ್ಕೆ ಬಾರದ ನಾಲ್ಕು ದಶಕಗಳ ಶಾಪವನ್ನು ಮುರಿಯುವ ಸಂಕಲ್ಪ ದಲ್ಲಿರುವ ಕಾಂಗ್ರೆಸ್, ವಿಧಾನಸಭಾ ಚುನಾವಣೆಯ ಸಿದ್ಧತೆಗಳನ್ನು ದುಪ್ಪಟ್ಟು ವೇಗದಲ್ಲಿ ನಡೆಸುತ್ತಿರುವಂತೆ ತೋರುತ್ತಿದೆ. ಸ್ಥಳೀಯ ಕಾರ್ಯಕರ್ತ ರಿಂದ ಪಡೆದ ಪ್ರತಿಕ್ರಿಯೆ ಆಧರಿಸಿ ಪಕ್ಷದ ಜಿಲ್ಲಾ ಘಟಕಗಳನ್ನು ಪುನರ್ರಚಿಸಲಾಗಿದೆ.

ಕಳೆದ ಚುನಾವಣೆಯಲ್ಲಿ ಪಕ್ಷ ಸೋತ 84 ವಿಧಾನಸಭಾ ಕ್ಷೇತ್ರಗಳಲ್ಲಿ ಕಾರ್ಯಕರ್ತರನ್ನು ಸಂಘಟಿಸುವ ಉದ್ದೇಶದಿಂದ ರಾಜ್ಯ ನಾಯಕರು ಭಾರತ್ ಜೋಡೋ 2.0 ಮೂಲಕ ಈಗಾಗಲೇ ಕ್ಷೇತ್ರಕ್ಕಿಳಿದಿದ್ದಾರೆ. ಇದರ ಜತೆಗೆ, ಮತದಾರರ ಪಟ್ಟಿಯ ಪರಿಷ್ಕರಣೆಗೆ ನಡೆಯುತ್ತಿರುವ ವಿಶೇಷ ತೀವ್ರ ಪರಿಷ್ಕರಣೆ ವಿರುದ್ಧದ ಅಭಿಯಾನವನ್ನೂ ಕಾಂಗ್ರೆಸ್ ತೀವ್ರಗೊಳಿಸಿದೆ.

ತಳಮಟ್ಟದಲ್ಲಿ ಪಕ್ಷದ ಸಂಘಟನೆ ಯನ್ನು ಬಲಪಡಿಸುವ ಉದ್ದೇಶದಿಂದ ಗ್ರಾಮ ಪಂಚಾಯಿತಿ ಹಾಗೂ ವಾರ್ಡ್ ಮಟ್ಟದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳನ್ನು ರಚಿಸುವುದು ಸೇರಿದಂತೆ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ.ರಾಜ್ಯದ 5,927 ಗ್ರಾಮ ಪಂಚಾಯಿತಿಗಳು ಹಾಗೂ ನಗರ ಪಾಲಿಕೆಗಳ ವಾರ್ಡ್‌ಗಳಲ್ಲಿ ತಲಾ ಆರು ಸದಸ್ಯರನ್ನು ಒಳಗೊಂಡ ಗ್ಯಾರಂಟಿ ಸಮಿತಿಗಳ ರಚನೆಯ ಉದ್ದೇಶ ಐದು ಪ್ರಮುಖ ಗ್ಯಾರಂಟಿ ಯೋಜನೆಗಳ ಪ ರಿ ಣಾ ಮ ಕಾ ರಿ ಅನುಷ್ಠಾನಗೊಳಿಸುವುದಾಗಿ ಸರ್ಕಾರ ಹೇಳಿದೆ. ಆದರೆ, ಇದನ್ನು ಸಾವಿರಾರು ಪಕ್ಷದ ಕಾರ್ಯಕರ್ತರಿಗೆ ಕೆಲವು ಹುದ್ದೆಗಳನ್ನು ನೀಡುವ ರಾಜಕೀಯ ಕ್ರಮವಾಗಿಯೂ ಕಾಣಲಾಗುತ್ತಿದೆ. 50,000 ಕೋಟಿಗೂ ಹೆಚ್ಚು ಬಜೆಟ್ ಅನುದಾನ ಹೊಂದಿರುವ ಈ ಯೋಜನೆಗಳ ಪ್ರಯೋಜನಗಳು ನೇರವಾಗಿ ಫಲಾನುಭವಿಗಳಿಗೆ ತಲುಪುವುದರಿಂದ, ಅವುಗಳ ಅನುಷ್ಠಾನದಲ್ಲಿ ಗ್ರಾಮ ಪಂಚಾಯಿತಿ ಮತ್ತು ವಾರ್ಡ್ ಮಟ್ಟದ ಸಮಿತಿಗಳಿಗೆ ಹೆಚ್ಚಿನ ಪಾತ್ರವೇನೂ ಇಲ್ಲ ಎಂಬ ವಾದವೂ ಇದೆ. ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಖಚಿತ ಪಡಿಸುವ ಜವಾಬ್ದಾರಿ ಅಧಿಕಾರಿಗಳದ್ದಾಗಿದ್ದು, ಈಗಾಗಲೇ ರಾಜ್ಯ, ಜಿಲ್ಲೆ ಮತ್ತು ತಾಲೂಕು ಮಟ್ಟದಲ್ಲಿಯೂ ಮೇಲ್ವಿಚಾರಣಾ ಸಮಿತಿಗಳನ್ನು ರಚಿಸಲಾಗಿದೆ. ವಾರ್ಷಿಕ 10 ಲಕ್ಷ ರೂ ಅನುದಾನದೊಂದಿಗೆ 10,000 ಭಾರತ್ ಜೋಡೋ ಯುವ ಸಂಘಗಳನ್ನು (ಯುವಕ ಸಂಘಗಳು) ಆರಂಭಿಸುವ ನಿರ್ಧಾರವೂ ಇದೇ ರೀತಿಯ ಮತ್ತೊಂದು ಪ್ರಯತ್ನ ಎಂದು ವಿಶ್ಲೇಷಿಸಲಾಗುತ್ತಿದೆ. ಮುಂದಿನ ವರ್ಷದ ಆರಂಭದಲ್ಲಿ ನಡೆಯಲಿರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗೂ ಮುನ್ನ ಇದನ್ನು ಪೂರ್ಣ ಪ್ರಮಾಣದ ಚುನಾವಣಾ ಪ್ರಚಾರಕ್ಕೆ ಮುನ್ನದ 'ವಾರ್ಮ್-ಅಪ್' ಎಂದು ನೋಡಲಾಗುತ್ತಿದೆ. ಆದರೆ, ಕಾಂಗ್ರೆಸ್ ಸರ್ಕಾರದ ಹಾಲಿ ಅವಧಿಯಲ್ಲೇ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಯಲಿದೆಯೇ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ.

ಆ ದ ಾ ಗ ್ ಯ ೂ , ಚುನಾವಣೆಗಳನ್ನು ನಡೆಸದಿರುವ ಹೊಣೆಯನ್ನು ಹೊತ್ತುಕೊಳ್ಳಲು ಸರ್ಕಾರ ಮತ್ತು ಪಕ್ಷ ಎರಡೂ ಸಿದ್ಧವಿರುವುದಿಲ್ಲ ಎಂದು ಕಾಂಗ್ರೆಸ್ನ ಕೆಲವರು ನಂಬಿದ್ದಾರೆ. ಸ್ಥಳೀಯ ಸಂಸ್ಥೆಗಳ ಚುನಾವಣಾ ಫಲಿತಾಂಶವು ಪಕ್ಷದ ಪ್ರಸ್ತುತ ಸ್ಥಿತಿಯ ಸ್ಪಷ್ಟ ಚಿತ್ರಣ ನೀಡಲಿದೆ.ವಿಧಾನಸಭಾ ಚುನಾವಣೆಗೂ ಮುನ್ನ ಹೆಚ್ಚಿನ ಗಮನ ಅಗತ್ಯವಿರುವ ಪ್ರದೇಶಗಳನ್ನು ಗುರುತಿಸಲು ಹಾಗೂ ನಾಲ್ಕು ವರ್ಷಗಳ ಅನುಷ್ಠಾನದ ಬಳಿಕ ಗ್ಯಾರಂಟಿ ಯೋಜನೆಗಳ ಕುರಿತು ವಾಸ್ತವಿಕ ಪ್ರತಿಕ್ರಿಯೆ ಪಡೆಯಲು ಇದು ನೆರವಾಗಲಿದೆ ಎಂಬುದು ಅವರ ಅಭಿಪ್ರಾಯ. ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಪ್ರತಿಪಕ್ಷ ಎನ್ಡಿಎಯ ಭಾಗವಾಗಿರುವ ಬಿಜೆಪಿ ಮತ್ತು ಜೆಡಿಎಸ್ಗೂ ತಮ್ಮ ಬಲ-ದೌರ್ಬಲ್ಯಗಳನ್ನು ಅಳೆಯಲು ಅವಕಾಶ ನೀಡಲಿವೆ. ತಳಮಟ್ಟದಲ್ಲಿ ಎರಡೂ ಪಕ್ಷಗಳು ಹೇಗೆ ಒಟ್ಟಾಗಿ ಕೆಲಸ ಮಾಡಬಹುದು ಮತ್ತು ಮತಗಳ ವರ್ಗಾವಣೆಯನ್ನು ಹೇಗೆ ಖಚಿತಪಡಿಸಿಕೊಳ್ಳಬಹುದು ಎಂಬುದನ್ನು ಪರೀಕ್ಷಿಸಲು ಇದು ವೇದಿಕೆಯಾಗಲಿದೆ. ಬಿಜೆಪಿ ಮತ್ತು ಜೆಡಿಎಸ್ ಕೂಡ ತಮ್ಮ ಚುನಾವಣಾ ತಂತ್ರ ಚುರುಕುಗೊಳಿಸುತ್ತಿವೆ. ಜೆಡಿಎಸ್ ನಾಯಕ ಹಾಗೂ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಬೆಂಗಳೂರು-ಮೈಸೂರು ಮೂಲಸೌಕರ್ಯ ಕಾರಿಡಾರ್ ಯೋಜನೆ ವಿಚಾರವಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ನಿರಂತರ ವಾಗ್ದಾಳಿ ನಡೆಸುತ್ತಿದ್ದಾರೆ. ಈ ಯೋಜನೆಯನ್ನು ಅವರು ದೇಶದಲ್ಲೇ ಅತಿ ದೊಡ್ಡ ಹಗರಣ ಎಂದು ಆರೋಪಿಸಿದ್ದಾರೆ.

ಇತ್ತ ಬಿಜೆಪಿ ಬರ ನಿರ್ವಹಣೆಯಲ್ಲಿ ಸರ್ಕಾರದ ಕ್ರಮಗಳ ವಿರುದ್ಧ ತೀವ್ರವಾಗಿ ದಾಳಿ ನಡೆಸುತ್ತಿದೆ. ವಿಶೇಷವಾಗಿ ರೈತರಿಗೆ ಕೇವಲ 2,500 ಕೃಷಿ ಒಳಹರಿವು ಸಬ್ಸಿಡಿ ಘೋಷಿಸಿರುವುದು, ಭ್ರಷ್ಟಾಚಾರ, ಕರ್ನಾಟಕ ಲೋಕಸೇವಾ ಆಯೋಗದಲ್ಲಿ ನಡೆದಿರುವ ದೊಡ್ಡ ಪ್ರಮಾಣದ ಅಕ್ರಮಗಳು ಹಾಗೂ ರಾಜ್ಯದ ಹದಗೆಡುತ್ತಿರುವ ಆರ್ಥಿಕ ಪರಿಸ್ಥಿತಿಯನ್ನು ಬಿಜೆಪಿ ಪ್ರಮುಖವಾಗಿ ಪ್ರಸ್ತಾಪಿಸುತ್ತಿದೆ.ಪ್ರಸ್ತುತ ಕಾಂಗ್ರೆಸ್ ಸರ್ಕಾರ ಬಗ್ಗೆ ರೈತರಲ್ಲಿ ಅಸಮಾಧಾನ ವಿದೆ. ಸರ್ಕಾರವು ಬೆಂಗಳೂರು ಕೇಂದ್ರಿತವಾಗಿದೆ ಎಂಬ ಭಾವನೆಯೂ ಅವರಲ್ಲಿದೆ. ಸಚಿವರು ಇತರ ಜಿಲ್ಲೆಗಳಿಗೆ ಅಪರೂಪವಾಗಿ ಭೇಟಿ ನೀಡುತ್ತಿರುವುದು ಈ ಭಾವನೆಗೆ ಕಾರಣವೆನ್ನಲಾಗಿದೆ. ಸರ್ಕಾರಕ್ಕೆ ಈ ಆತಂಕಗಳ ಅರಿವಿದೆ ಎಂದು ಹೇಳಲಾಗುತ್ತಿದ್ದರೂ, ಪ್ರತಿಕ್ರಿಯೆ ಕೇವಲ ಸಾಂಕೇ ತಿಕವಾಗಿದೆ ಎಂಬ ಅಭಿಪ್ರಾಯವೂ ಇದೆ. ರಾಜ್ಯದಲ್ಲಿ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಲು ಕೇಂದ್ರದ ತಂಡ ಇತ್ತೀಚೆಗಷ್ಟೇ ಆಗಮಿ ಸಿದ್ದು, ಕೇಂದ್ರಸರ್ಕಾರಕ್ಕೆ ವರದಿ ಸಲ್ಲಿಸಲಿದೆ. ಕೇಂದ್ರದಿಂದ ರಾಜ್ಯಕ್ಕೆ ದೊರೆಯುವ ನೆರವಿನ ಪ್ರಮಾಣದ ಆಧಾರದ ಮೇಲೆಯೇ ರೈತರಿಗೆ ನೀಡುವ ಪರಿಹಾರದ ಮೊತ್ತವೂ ನಿರ್ಧಾರವಾಗಲಿದೆ ಎಂಬ ನಿರೀಕ್ಷೆಯಲ್ಲಿ ರಾಜ್ಯದ ರೈತರಿದ್ದಾರೆ.

---

# ಖ್ಯಾತ ನಿರ್ದೇಶಕ ಸಿಂಗೀತಂ ಶ್ರೀನಿವಾಸರಾವ್ ನಿಧನ

**ಬೆಂಗಳೂರು,ಅ.4:** ದಕ್ಷಿಣ ಭಾರತ ಚಿತ್ರರಂಗದ ಪ್ರಖ್ಯಾತ ನಿರ್ದೇಶಕ, ನಿರ್ಮಾಪಕ ಸಿಂಗೀತಂ ಶ್ರೀನಿವಾಸರಾವ್ ನಿಧನರಾಗಿದ್ದಾರೆ. ಅವರಿಗೆ 94 ವರ್ಷ ವಯಸ್ಸಾಗಿತ್ತು. ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ಸಿಂಗೀತಂ ಶ್ರೀನಿವಾಸ್ ರಾವ್ ಅವರನ್ನು ಚೆನ್ನೈನ ಕಾವೇರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೇ ಅವರು ಕೊನೆಯುಸಿರೆಳೆದಿದ್ದಾರೆ.

1931ರ ಸೆಪ್ಟೆಂಬರ್ 21ರಂದು ಆಂಧ್ರಪ್ರದೇಶದ ಗೂಡುರಿನಲ್ಲಿ ಜನಿಸಿದ ಸಿಂಗೀತಂ ಶ್ರೀನಿವಾಸರಾವ್ ಅವರು ಸಹಾಯಕ ನಿರ್ದೇಶಕರಾಗಿ ವೃತ್ತಿಜೀವನ ಪ್ರವೇಶಿಸಿದರು.

ಕಳೆದ 6 ದಶಕಗಳಲ್ಲಿ 5 ಭಾಷೆಗಳಲ್ಲಿ ಅವರು ನೂರಾರು ಚಿತ್ರಗಳಿಗೆ ನಿರ್ದೇಶನ ಮಾಡಿದ್ದಾರೆ. ತೀರಾ ಇತ್ತೀಚೆಗೆ ತಮ್ಮ 94ನೇ ವಯಸ್ಸಿನಲ್ಲಿ ಸಿಂಗೀತಂ ಎಂಬ ಸಂಗೀತ ಆಧಾರಿತ ಚಿತ್ರವನ್ನು ಅವರು ನಿರ್ದೇಶಿಸಿದ್ದರು.

ವಿಶ್ವದ ಅತ್ಯಂತ ಹಿರಿಯ ನಿರ್ದೇಶಕರೆಂಬ ಖ್ಯಾತಿಗೂ ಸಹ ಅವರು ಪಾತ್ರರಾಗಿದ್ದರು. ಕನ್ನಡದಲ್ಲಿ ಹಾಲುಜೇನು, ಭಾಗ್ಯದ ಲಕ್ಷ್ಮಿ ಬಾರಮ್ಮ, ಶ್ರಾವಣಬಂತು, ಚಲಿಸುವ ಮೋಡಗಳು, ಎರಡು ನಕ್ಷತ್ರಗಳು, ಜ್ವಾಲಾಮುಖಿ, ದೇವತಾ ಮನುಷ್ಯ,



ಆನಂದ್, ಚಿರಂಜೀವಿ ಸುಧಾಕರ್, ಪುಷ್ಪಕವಿಮಾನ ಸೇರಿದಂತೆ ಹಲವು ಜನಪ್ರಿಯ ಚಿತ್ರಗಳಿಗೆ ನಿರ್ದೇಶನ ಮಾಡಿದ್ದರು.

ಸಿಂಗೀತಂ ಶ್ರೀನಿವಾಸರಾವ್ ನಿರ್ದೇಶಿಸಿದ್ದ ಹಲವು ಚಿತ್ರಗಳಿಗೆ ಕರ್ನಾಟಕ, ಆಂಧ್ರಪ್ರದೇಶ, ತಮಿಳುನಾಡು ರಾಜ್ಯ ಪ್ರಶಸ್ತಿಗಳು, ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಸೇರಿದಂತೆ ಹಲವು ಗೌರವಗಳಿಗೆ ಭಾಜನರಾಗಿದ್ದರು. ಸಿಂಗೀತಂ ಶ್ರೀನಿವಾಸರಾವ್ ಅವರ ನಿಧನಕ್ಕೆ ತೆಲುಗು, ತಮಿಳು, ಕನ್ನಡ, ಮಲಯಾಳಂ ಹಾಗೂ ಬಾಲಿವುಡ್‌ನ ಹಲವಾರು ಗಣ್ಯರು ಕಂಬನಿ ಮಿಡಿದಿದ್ದಾರೆ.

## ಸಿಂಗೀತಂ ಶ್ರೀನಿವಾಸ್ ಅಗಲಿಕೆಗೆ ಸಿಎಂ ಡಿ.ಕೆ.ಶಿವಕುಮಾರ್ ಸಂತಾಪ

ಬೆಂಗಳೂರು, ಅ.4: ಭಾರತೀಯ ಚಿತ್ರರಂಗದ ಮಾಣಿಕ್ಯ ಸಿಂಗೀತಂ ಶ್ರೀನಿವಾಸ್ ಅವರ ಅಗಲಿಕೆಯಿಂದ ದುಃಖಿತನಾಗಿದ್ದು, ಅವರ ನಿಧನದಿಂದ ಚಿತ್ರರಂಗಕ್ಕೆ ತುಂಬಲಾರದ ನಷ್ಟವಾಗಿದೆ' ಎಂದು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಸಂತಾಪ ವ್ಯಕ್ತಪಡಿಸಿದ್ದಾರೆ.

ಅತ್ಯುತ್ತಮ ಚಿತ್ರಗಳ ಮೂಲಕ ಕನ್ನಡ ಚಲನಚಿತ್ರರಂಗಕ್ಕೆ ಹೊಸ ಆಯಾಮ ನೀಡಿದ ಸಿಂಗೀತಂ ಶ್ರೀನಿವಾಸ್ ಅವರು, ಡಾ. ರಾಜಕುಮಾರ್ ಅಭಿನಯದ, 'ಹಾಲುಜೇನು', 'ಚಲಿಸುವ ಮೋಡಗಳು', 'ಶ್ರಾವಣ ಬಂತು' ಮುಂತಾದ ಸದಭಿರುಚಿಯ ಹಿಟ್ ಚಿತ್ರಗಳನ್ನು ನಿರ್ದೇಶಿಸಿದ್ದರು ಎಂದು ಸ್ಮರಿಸಿದ್ದಾರೆ.

'ಮೃತರ ಆತ್ಮಕ್ಕೆ ಚಿರಶಾಂತಿ ಸಿಗಲಿ. ಅವರ ಅಭಿಮಾನಿಗಳು ಹಾಗೂ ಕುಟುಂಬ ವರ್ಗಕ್ಕೆ ದುಃಖ ಭರಿಸುವ ಶಕ್ತಿಯನ್ನು ಭಗವಂತ ನೀಡಲಿ' ಎಂದು ಮುಖ್ಯಮಂತ್ರಿಗಳು ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

---




ಭಾನುವಾರ ಮಂಗಳೂರಿನ ಹೊರವಲಯದಲ್ಲಿರುವ ಸುರಗಿರಿ ದೇವಾಲಯದ ಆವರಣದಲ್ಲಿ, ಕೆಸರುಮಯ ಮೈದಾನವೊಂದರಲ್ಲಿ ನಡೆದ ಓಟದ ಸ್ಪರ್ಧೆಯಲ್ಲಿ ಸ್ಥಳೀಯರು ಭಾಗವಹಿಸಿದರು.

---

# ಸಿಇಸಿ ಜ್ಞಾನೇಶ್‌ಕುಮಾರ್ ರಾಜೀನಾಮೆಗೆ ಆಗ್ರಹ: ಪ್ರತಿಭಟನೆಗೆ ನಟ ಪ್ರಕಾಶ್‌ರಾಜ್ ಬೆಂಬಲ

**ಬೆಂಗಳೂರು,ಅ.4:** ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ನಡೆಯುತ್ತಿರುವ ಪ್ರತಿಭಟನೆಗಳಿಗೆ ನಟ ಪ್ರಕಾಶ್ ರಾಜ್ ಬೆಂಬಲ ವ್ಯಕ್ತಪಡಿಸಿದ್ದಾರೆ.



ಸಾಮಾಜಿಕ ಜಾಲತಾಣದಲ್ಲಿ ವಿಡಿಯೊ ಹಂಚಿಕೊಂಡಿರುವ ಅವರು, ಜ್ಞಾನೇಶ್ ಕುಮಾರ್ ವಿರುದ್ಧದ ಪ್ರತಿಭಟನೆಗಳಿಗೆ ಜನರು ಬೆಂಬಲ ನೀಡುವಂತೆ ಕರೆ ನೀಡಿದ್ದಾರೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್‌ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಹೋರಾಟಕ್ಕಿಳಿದಿರುವ ಕಾಕ್ರೋಚ್ ಜನತಾ ಪಾರ್ಟಿಗೆ (ಸಿಜೆಪಿ) ಬಹುಭಾಷಾ ನಟ ಪ್ರಕಾಶ್ ರಾಜ್ ಬೆಂಬಲ ವ್ಯಕ್ತಪಡಿಸಿದ್ದಾರೆ. ಹಕ್ಕುಗಳಿಗಾಗಿ ನಡೆಯುತ್ತಿರುವ ಈ ಶಾಂತಿಯುತ ಪ್ರತಿಭಟನೆಯಲ್ಲಿ ಸಾರ್ವಜನಿಕರು ಸಕ್ರಿಯವಾಗಿ ಭಾಗವಹಿಸಬೇಕು ಎಂದು ಕರೆ ನೀಡಿದ್ದಾರೆ. ಗಾಂಧಿ ಜಯಂತಿಯ ಶುಭಾಶಯಗಳು. ಇದು ನಮ್ಮ ಬಾಪು ಅವರ ದಿನ. ಆದರೆ ನಾವು ಈ ದಿನವನ್ನು ಆಚರಿಸುವಾಗ, ನಮ್ಮ ಮಹಾತ್ಮನನ್ನು ಕೊಂದ ನಾಥೂರಾಮ್ ಗೋಡ್ಸೆಯನ್ನು ಪೂಜಿಸುವ ಕೆಲವು ಗೂಂಡಾಗಳು ಇಲ್ಲಿದ್ದಾರೆ ಎಂಬುದನ್ನು ಮರೆಯಬಾರದು ಎಂದು ಹೇಳಿದ್ದಾರೆ.

ಈ ದಿನ ದೇಶಾದ್ಯಂತ ಶಾಂತಿಯುತ ಪ್ರತಿಭಟನೆಗಳು ನಡೆಯುತ್ತಿವೆ. ದೆಹಲಿಯಲ್ಲಿ ನೇಹಾ ಬೋರಾ ಇದರ ನೇತೃತ್ವ ವಹಿಸಿದ್ದರೆ, ಮುಂಬೈನಲ್ಲಿ ಕಾಕ್ರೋಚ್‌ಗಳು ಮತ್ತೆ ರಸ್ತೆಗೆ ಇಳಿದಿದ್ದಾರೆ. ವೀಡಿಯೊದ ಕೊನೆಯಲ್ಲಿ ಪ್ರಧಾನಿ ಮೋದಿ ಮತ್ತು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹೆಸರಿಸಿ ತಿರುಗೇಟು ನೀಡಿರುವ ಅವರು, ನನ್ನ ಸ್ನೇಹಿತರೇ, ಈ ದೇಶದಲ್ಲಿ ಗಣಪತಿ ವಿಸರ್ಜನೆ ಮುಗಿದಿದೆ. ಇನ್ನು ಜ್ಞಾನು ಅವರ (ಜ್ಞಾನೇಶ್ ಕುಮಾರ್) ವಿಸರ್ಜನೆ ಮಾತ್ರ ಬಾಕಿಇದೆ ಎಂದು ವ್ಯಂಗ್ಯವಾಡಿದ್ದಾರೆ.

---



ಮಂಗಳೂರಿನ ಕೂಳೂರು ಸೇತುವೆಯ ಕೆಳಗೆ ಭಾನುವಾರ ನಡೆದ ನೌಕಾಯಾನ ಅಭಿಯಾನದಲ್ಲಿ ನಾವಿಕರು ಪಾಲ್ಗೊಂಡರು.

---

# ಶಿವಮೊಗ್ಗ ಬೈಪಾಸ್ ಚತುಷ್ಪಥ ನಿರ್ಮಾಣಕ್ಕೆ466.74 ಕೋಟಿ ರೂ.: ಕೇಂದ್ರ ಸರ್ಕಾರದಿಂದ ಅನುದಾನ ಮಂಜೂರು

**ಶಿವಮೊಗ್ಗದ ಮೂಲ ಸೌಕರ್ಯ ಹಾಗೂ ಆರ್ಥಿಕ ಬೆಳವಣಿಗೆಗೆ ವೇಗ ನೀಡಲಿದೆ ನಾಲ್ಕು ಪಥದ ರಸ್ತೆ: ಕುಮಾರಸ್ವಾಮಿ**

**ಬೆಂಗಳೂರು,ಸೆ.4:** ಶಿವಮೊಗ್ಗ ನಗರ ಬೈಪಾಸ್ ಸೇರಿದಂತೆ 4.74 ಕಿಲೋ ಮೀಟರ್ ಉದ್ದದ ನಾಲ್ಕು ಪಥದ ರಸ್ತೆ ನಿರ್ಮಾಣಕ್ಕೆ ಕೇಂದ್ರ ಸರ್ಕಾರ 466. 74 ಕೋಟಿ ರೂ. ಅನುದಾನ ಮಂಜೂರು ಮಾಡಿದೆ. ರಾಷ್ಟ್ರೀಯ ಹೆದ್ದಾರಿ, ಸುಧಾರಣಾ ಕಾಮಗಾರಿಗಳ ಅಂಗವಾಗಿ ಈ ರಸ್ತೆ ನಿರ್ಮಾಣವನ್ನು ಕೈಗೆತ್ತಿಕೊಳ್ಳಲಾಗಿದೆ. ಇದಕ್ಕಾಗಿ ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್. ಡಿ. ಕುಮಾರಸ್ವಾಮಿ ಅವರು ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರಿಗೆ ಧನ್ಯವಾದ ಅರ್ಪಿಸಿದ್ದಾರೆ.



ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಸಚಿವ ಎಚ್. ಡಿ. ಕುಮಾರಸ್ವಾಮಿ, ಈ ಯೋಜನೆಯ ಜಾರಿಯಿಂದ ಸಂಚಾರ ದಟ್ಟಣೆ ಗಣನೀಯವಾಗಿ ಕಡಿಮೆ ಯಾಗುತ್ತದೆ. ಅಲ್ಲದೆ, ಸ್ಥಳೀಯ ಸಂಚಾರದ ವಾಹನಗಳನ್ನು ದೂರ ಪ್ರಯಾಣದ ವಾಹನಗಳಿಂದ ಪ್ರತ್ಯೇಕಿಸುತ್ತದೆ. ರಸ್ತೆ ಸುರಕ್ಷತೆಯು ಹೆಚ್ಚಾಗುತ್ತದೆ. ಜನರ ಸಂಚಾರ ಹಾಗೂ ಸರಕುಗಳ ತ್ವರಿತ ಸಾಗಣೆಗೂ ಅನುಕೂಲವಾಗುತ್ತದೆ. ಶಿವಮೊಗ್ಗ ಹಾಗೂ ಸುತ್ತಮುತ್ತಲ ಪ್ರದೇಶದ ಬೆಳವಣಿಗೆಗೆ ಈ ಯೋಜನೆ ಸಹಕಾರಿಯಾಗಿದೆ ಎಂದು ಹೇಳಿದ್ದಾರೆ.

---

# ಕರ್ನಾಟಕ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಶುಲ್ಕ ಶೇ.5ರಷ್ಟು ಏರಿಕೆ

**ಬೆಂಗಳೂರು,ಅ.4:** 2026-27ನೇ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರವು ಪರೀಕ್ಷಾ ಶುಲ್ಕವನ್ನು ಶೇ.5ರಷ್ಟು ಹೆಚ್ಚಿಸಿ ಆದೇಶ ಹೊರಡಿಸಿದೆ.

ಹೊಸದಾಗಿ ಪರೀಕ್ಷೆ ಬರೆಯುವವರು, ಖಾಸಗಿ ಹಾಗೂ ಪುನರಾವರ್ತಿತ ಅಭ್ಯರ್ಥಿಗಳ ನೋಂದಣಿ ಮತ್ತು ಪರೀಕ್ಷಾ ಶುಲ್ಕಗಳನ್ನು ಸಹ ಏರಿಕೆ ಮಾಡಲಾಗಿದೆ. ಪ್ರಥಮ ಬಾರಿಗೆ ಪರೀಕ್ಷೆ ಬರೆಯುವವರಿಗೆ ಪರೀಕ್ಷಾ ಶುಲ್ಕವನ್ನು ಶೇ.5ರಷ್ಟು ಹೆಚ್ಚಳ ಮಾಡಲಾಗಿದೆ. ಈ ಮೂಲಕ ಎಸ್ಸೆಸ್ಸೆಲ್ಸಿ ಪರೀಕ್ಷಾ ಶುಲ್ಕ 710 ರೂಪಾಯಿಗಳಿಂದ 746 ರೂಪಾಯಿಗೆ ಏರಿಕೆಯಾಗಿದೆ.

ಈಗಾಗಲೇ 10ನೇ ತರಗತಿ ಪರೀಕ್ಷೆ ಬರೆಯಲು ನೋಂದಣಿ ಮಾಡಿಕೊಂಡಿರುವ ಅಭ್ಯರ್ಥಿಗಳಿಗೂ ಹೆಚ್ಚುವರಿ ಶುಲ್ಕ ಪಾವತಿ ಮಾಡುವಂತೆ ಶಾಲಾ ಶಿಕ್ಷಣ ಮೌಲ್ಯಮಾಪನ ಮಂಡಳಿ ಆದೇಶದಲ್ಲಿ ತಿಳಿಸಿದೆ. ಹೀಗಾಗಿ ಈಗಾಗಲೇ ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆಯಲು ನೋಂದಾಯಿಸಿ ಕೊಂಡಿರುವ ವಿದ್ಯಾರ್ಥಿಗಳು 76 ಹೆಚ್ಚುವರಿ ಶುಲ್ಕ ಪಾವತಿಸಬೇಕಿದೆ.

ಇನ್ನು ಪುನರಾವರ್ತಿತವಾಗಿ ಪರೀಕ್ಷೆ ಬರೆಯುವ ಅಭ್ಯರ್ಥಿಗಳ ಶುಲ್ಕದಲ್ಲೂ ಏರಿಕೆಯಾಗಿದೆ. ಈ ಮೊದಲು ಒಂದು ವಿಷಯಕ್ಕೆ 448 ರೂಪಾಯಿ ಪಾವತಿಸಬೇಕಿತ್ತು. ಆದರೆ ಈ ಒಂದು ವಿಷಯಕ್ಕೆ 470 ರೂಪಾಯಿ ಪಾವತಿಸಬೇಕಿದೆ. ಇನ್ನು ಎರಡು ವಿಷಯಕ್ಕೆ 559 ರೂ.ನಿಂದ 587 ರೂಪಾಯಿಗೆ ಏರಿಕೆ ಮಾಡಲಾಗಿದೆ. ಅಷ್ಟೇ ಅಲ್ಲದೇ ಮೂರು ಅಥವಾ ಮೂರಕ್ಕಿಂತ ಹೆಚ್ಚಿನ ವಿಷಯಗಳಿಗೆ ಪರೀಕ್ಷೆ ಬರೆಯುವವರು 752 ರೂ. ಬದಲಿಗೆ 790 ರೂ ಪಾವತಿಸಬೇಕು.

ಇನ್ನು ಎಸ್ಸೆಸ್ಸೆಲ್ಸಿ ಪರೀಕ್ಷಾ ಶುಲ್ಕ ಮಾತ್ರವಲ್ಲದೇ ಎಸ್ಸೆಸ್ಸೆಲ್ಸಿ ನೋಂದಣಿ ಶುಲ್ಕವೂ ಇದೀಗ ಏರಿಕೆಯಾಗಿದೆ.

ಈ ಮೊದಲು ಹೊಸದಾಗಿ ನೋಂದಣಿಯಾಗುವ ಖಾಸಗಿ ಅಭ್ಯರ್ಥಿಗಳು ಎಸ್‌ಎಸ್‌ಎಲ್ಸಿ ನೋಂದಣಿ ಶುಲ್ಕ 248 ರುಪಾಯಿ ಪಾವತಿಸಬೇಕಿತ್ತು. ಈಗ 260 ರೂಪಾಯಿಗೆ ಏರಿಕೆಯಾಗಿದೆ.

ಅಂದರೆ ಖಾಸಗಿ ಅಭ್ಯರ್ಥಿಗಳು ನೋಂದಣಿ ಶುಲ್ಕವನ್ನೂ 12 ರೂಪಾಯಿ ಹೆಚ್ಚುವರಿಯಾಗಿ ವಿದ್ಯಾರ್ಥಿಗಳು ಪಾವತಿಸಬೇಕಿದೆ. ಇನ್ನು ಈಗಾಗಲೇ ಖಾಸಗಿ ಅಭ್ಯರ್ಥಿಯಾಗಿ ನೋಂದಣಿಯಾಗಿ ಪರೀಕ್ಷಾ ಶುಲ್ಕ ಪಾವತಿಸಿದ ಅಭ್ಯರ್ಥಿಗಳ ನೋಂದಣಿ ಶುಲ್ಕ 72 ರೂಪಾಯಿಗಳಿಂದ 76 ರೂಪಾಯಿಗೆ ಏರಿಕೆ ಮಾಡಲಾಗಿದೆ.

## ಪುನರಾವರ್ತಿತ ಅಭ್ಯರ್ಥಿಗಳಿಗೂ ಶುಲ್ಕ ಹೆಚ್ಚಳ

**ಪುನರಾವರ್ತಿತವಾಗಿ ಪರೀಕ್ಷೆ ಬರೆಯುವ ಅಭ್ಯರ್ಥಿಗಳ ಶುಲ್ಕದಲ್ಲೂ ಏರಿಕೆಯಾಗಿದೆ. ಈ ಮೊದಲು ಒಂದು ವಿಷಯಕ್ಕೆ 448 ರೂಪಾಯಿ ಪಾವತಿಸಬೇಕಿತ್ತು. ಆದರೆ ಈ ಒಂದು ವಿಷಯಕ್ಕೆ 470 ರೂಪಾಯಿ ಪಾವತಿಸಬೇಕಿದೆ. ಇನ್ನು ಎರಡು ವಿಷಯಕ್ಕೆ 559 ರೂ,ನಿಂದ 587 ರೂಪಾಯಿಗೆ ಏರಿಕೆ ಮಾಡಲಾಗಿದೆ. ಅಷ್ಟೇ ಅಲ್ಲದೇ ಮೂರು ಅಥವಾ ಮೂರಕ್ಕಿಂತ ಹೆಚ್ಚಿನ ವಿಷಯಗಳಿಗೆ ಪರೀಕ್ಷೆ ಬರೆಯುವವರು 752 ರೂ. ಬದಲಿಗೆ 790 ರೂ. ಪಾವತಿಸಬೇಕು.**

---

# ಎಸ್‌ಐಆರ್‌ನಲ್ಲಿ ಮತದಾರರ ಪಟ್ಟಿಯಿಂದ ಹೆಸರು ತೆಗೆದುಹಾಕಲು ಸಹಿ ಪಡೆದ ಬಿಜೆಪಿ ನಾಯಕರ ವಿರುದ್ಧ ಕಾರ್ಯಕರ್ತರ ಆಕ್ರೋಶ

**ಬೆಂಗಳೂರು,ಅ.4:** ಗಡಿ ಜಿಲ್ಲೆ ಬೆಳಗಾವಿಯಲ್ಲಿ ಮತದಾರರ ಪಟ್ಟಿಯಿಂದ ಹೆಸರುಗಳನ್ನು ತೆಗೆದುಹಾಕುವ (ಡಿಲೀಷನ್) ಪ್ರಕ್ರಿಯೆ ಈಗ ಬೃಹತ್ ರಾಜಕೀಯ ಹಾಗೂ ಕಾನೂನು ವಿವಾದಕ್ಕೆ ಕಾರಣವಾಗಿದೆ. ಮುಸ್ಲಿಂ ಸಮುದಾಯಕ್ಕೆ ಸೇರಿದ ಮತದಾರರ ಹೆಸರುಗಳನ್ನು ಡಿಲೀಟ್ ಮಾಡಲು ಸಲ್ಲಿಕೆಯಾಗಿರುವ ಅರ್ಜಿಗಳಿಗೆ ಸಂಬಂಧಿಸಿದಂತೆ ತಮ್ಮ ನಾಯಕರ ವಿರುದ್ಧವೇ ಬಿಜೆಪಿ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಎಸ್‌ಐಆರ್ ಸಂದರ್ಭದಲ್ಲಿ ಮುಸ್ಲಿ ಮತದಾರರ ಹೆಸರುಗಳನ್ನೇ ಡಿಲೀಟ್ ಮಾಡುವ ಹುನ್ನಾರವನ್ನು ಬಿಜೆಪಿ ನಡೆಸುತ್ತಲೇ ಬಂದಿದೆ. ಬೆಳಗಾವಿಯಲ್ಲಿ ಈ ಸಂಬಂಧ ತಮ್ಮ ವಿರುದ್ಧ ಎಫ್‌ಐಆರ್ ದಾಖಲಾಗುತ್ತಿದ್ದಂತೆ ಸ್ಥಳೀಯ ರಾಜಕೀಯ ವಲಯದಲ್ಲಿ ತೀವ್ರ ಸಂಚಲನ ಉಂಟಾಗಿದೆ. ಸತ್ಯವನ್ನು ಮರೆಮಾಚಿ ನಮ್ಮಿಂದ ಸಹಿ ಪಡೆಯಲಾಗಿದೆ ಎಂದು ಈಗ ಬಿಜೆಪಿ ಕಾರ್ಯಕರ್ತರೇ ಬಹಿರಂಗ ವಾಗಿ ಹೇಳಿಕೊಳ್ಳುತ್ತಿದ್ದಾರೆ.

ಸ್ಥಳೀಯ ನಾಯಕರು ಅರ್ಜಿಗಳ ನಿಜವಾದ ಉದ್ದೇಶವನ್ನು ನಮಗೆ ತಿಳಿಸಿಲ್ಲ. ಕೇವಲ ಪಕ್ಷದ ಸಂಘಟನಾತ್ಮಕ ಕೆಲಸ ಅಥವಾ ವಿಳಾಸ ಬದಲಾವಣೆ/ತಿದ್ದುಪಡಿ ಎಂಬ ನೆಪ ಹೇಳಿ ತಮ್ಮಿಂದ ಸಹಿ ಪಡೆದುಕೊಂಡಿದ್ದಾರೆ ಎಂದು ಬಿಜೆಪಿ ಕಾರ್ಯಕರ್ತರು ಆರೋಪಿಸುತ್ತಿದ್ದಾರೆ. ಮುಸ್ಲಿಂ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡಲು ಈ ಅರ್ಜಿಗಳನ್ನು ಬಳಸಲಾಗುತ್ತಿದೆ ಎಂಬ ಸುಳಿವು ತಮಗೆ ಇರಲಿಲ್ಲ. ಈಗ ಕಾನೂನು ಕ್ರಮ ಮತ್ತು ಎಫ್‌ಐಆರ್ ಭೀತಿ ಎದುರಾಗಿದ್ದು, ವಿನಾಕಾರಣ ನಾವು ಬಲಿಯಾಗುತ್ತಿದ್ದೇವೆ ಎಂಬ ಆತಂಕವನ್ನು ಕಾರ್ಯಕರ್ತರು ವ್ಯಕ್ತಪಡಿಸಿದ್ದಾರೆ. ಈ ಇಡೀ ಪ್ರಕರಣಕ್ಕೆ ಮತ್ತೊಂದು ಪ್ರಮುಖ ತಿರುವು ಸಿಕ್ಕಿರುವುದು ಭಾಷಿಕ ಮತ್ತು ಪ್ರಾದೇಶಿಕ ಹಿನ್ನೆಲೆಯಲ್ಲಿ. ಬೆಳಗಾವಿ ಮೂಲತಃ ಕನ್ನಡ ಮತ್ತು ಮರಾಠಿ ಭಾಷಿಕರ ಪ್ರಾಬಲ್ಯವಿರುವ ಗಡಿ ಪ್ರದೇಶ. ಆದರೆ, ಇಂತಹ ಡಿಲೀಷನ್ ಅರ್ಜಿಗಳನ್ನು ಸಲ್ಲಿಸಿರು ವವರ ಪೈಕಿ ಸ್ಥಳೀಯ ಕನ್ನಡಿಗರೂ ಅಲ್ಲದ, ಮರಾಠಿಗರೂ ಅಲ್ಲದ, ಹಿಂದಿ ಭಾಷಿಕ ಮೂಲದ ವ್ಯಕ್ತಿಗಳೂ ಸೇರಿದ್ದಾರೆ ಎಂಬ ಅಂಶ ಬೆಳಕಿಗೆ ಬಂದಿದೆ. ಸ್ಥಳೀಯ ರಾಜಕೀಯ ಹಾಗೂ ಜನಸಂಖ್ಯಾ ಸ್ವರೂಪದ ಅರಿವಿಲ್ಲದ ಹೊರಗಿನವರು ಅಥವಾ ಹಿಂದಿ ಭಾಷಿಕರು ಈ ಪ್ರಮಾಣದಲ್ಲಿ ಅರ್ಜಿ ಸಲ್ಲಿಸಿರುವುದು ಹಲವು ಅನುಮಾನಗಳಿಗೆ ದಾರಿ ಮಾಡಿಕೊಟ್ಟಿದೆ. ಯಾರದ್ದೋ ಪ್ರಚೋದನೆ ಅಥವಾ ರಾಜಕೀಯ ತಂತ್ರಗಾರಿಕೆಗೆ ಇವರನ್ನು ಬಳಸಿಕೊಳ್ಳಲಾ ಗಿದೆಯೇ ಎಂಬ ಪ್ರಶ್ನೆ ಎದ್ದಿದೆ. ಮತದಾರರ ಪಟ್ಟಿಯಿಂದ ಕಾನೂನುಬಾಹಿರವಾಗಿ ಹೆಸರುಗಳನ್ನು ತೆಗೆದುಹಾಕಲು ಯತ್ನಿಸಿದ ಆರೋಪದ ಮೇಲೆ ಎಫ್‌ಐಆರ್ ದಾಖಲಾಗಿರುವುದರಿಂದ, ಚುನಾವಣಾ ಆಯೋಗ ಹಾಗೂ ಪೋಲಿಸ್ ಇಲಾಖೆ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿವೆ.

ನಾಯಕರ ಮಾತು ನಂಬಿ ಸಹಿ ಹಾಕಿದ ಕೆಳಮಟ್ಟದ ಕಾರ್ಯಕರ್ತರು ಈಗ ನ್ಯಾಯಾಂಗ ಸಂಕಷ್ಟಕ್ಕೆ ಸಿಲುಕಿದ್ದು, ಜಿಲ್ಲಾ ಬಿಜೆಪಿ ಘಟಕದಲ್ಲಿ ಆಂತರಿಕ ಅಸಮಾಧಾನ ಮತ್ತು ಗೊಂದಲ ಮನೆಮಾಡಿದೆ.




ಭಾನುವಾರ ಭಾರತದಲ್ಲಿ ನಡೆದ ಲೆಟಾಪ್ ಬೈ ಟೂರ್ ಡಿ ಫ್ರಾನ್ಸ್‌ನ ಚೊಚ್ಚಲ ಆವೃತ್ತಿಯಲ್ಲಿ 1,500ಕ್ಕೂ ಹೆಚ್ಚು ಸೈಕ್ಲಿಸ್ಟ್‌ಗಳು ಮೈಸೂರಿನ ಬೀದಿಗಳಲ್ಲಿ ಸೈಕಲ್ ಸವಾರಿ ಮಾಡಿದರು. ದಸರಾ ಹಬ್ಬಕ್ಕೆ ಸಜ್ಜಾಗುತ್ತಿರುವ ಮೈಸೂರಿಗೆ, ಜಾಗತಿಕ ಮಟ್ಟದ ಈ ಸೈಕ್ಲಿಂಗ್ ಕಾರ್ಯಕ್ರಮವು ಅಂತರರಾಷ್ಟ್ರೀಯ ಸವಾರರು, ಸ್ಪರ್ಧಾತ್ಮಕ ಸೈಕ್ಲಿಸ್ಟ್‌ಗಳು ಹಾಗೂ ಕುಟುಂಬಗಳು ಮತ್ತು ಮಕ್ಕಳನ್ನು ಆಕರ್ಷಿಸಿತು.

### ಕೆಟ್ಟುನಿಂತ ಬಸ್ ಕಲ್ಯಾಣ ಕರ್ನಾಟಕ ಬಸ್

## ಪ್ರಯಾಣಿಕರಿಗೆ ಪರ್ಯಾಯ ವ್ಯವಸ್ಥೆ ನೀಡದ ಕೆಕೆಆರ್‌ಟಿಸಿಗೆ 33,700 ರೂ. ದಂಡ!

**ಕಲಬುರಗಿ, ಅ. 4:** ಸರ್ಕಾರಿ ಬಸ್ ಮಾರ್ಗಮಧ್ಯದಲ್ಲೇ ಕೆಟ್ಟುನಿಂತು ಪ್ರಯಾಣಿಕರಿಗೆ ತೊಂದರೆಯಾದಾಗ ಪರ್ಯಾಯ ಪ್ರಯಾಣ ವ್ಯವಸ್ಥೆ ಕಲ್ಪಿಸದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಭಾರೀ ದಂಡ ವಿಧಿಸಿದೆ.

ಪರೀಕ್ಷೆಗೆ ತೆರಳುತ್ತಿದ್ದ ವಿದ್ಯಾರ್ಥಿನಿಯೊಬ್ಬರಿಗೆ ಸಾರಿಗೆ ಸಂಸ್ಥೆಯ ನಿರ್ಲಕ್ಷ್ಯದಿಂದ ಉಂಟಾದ ಸೇವಾ ಕೊರತೆ ಹಾಗೂ ಮಾನಸಿಕ ವೇದನೆಗಾಗಿ ಒಟ್ಟು 33,700 ರೂ ಪರಿಹಾರ ಪಾವತಿಸುವಂತೆ ಗ್ರಾಹಕರ ಆಯೋಗವು ಕೆಕೆಆರ್‌ಟಿಸಿಗೆ ಮಹತ್ವದ ಆದೇಶ ನೀಡಿದೆ.

**ಏನಿದು ಪ್ರಕರಣ :** ಪ್ರಕರಣದ ಹಿನ್ನೆಲೆಯನ್ನು ಗಮನಿಸುವುದಾದರೆ, ಬೀದರ್ ಮೂಲದ ತೇಜಸ್ವಿನಿ ಬಸವರಾಜ ಎಂಬ ವಿದ್ಯಾರ್ಥಿನಿಯು 2025ರ ನವೆಂಬರ್ 16ರಂದು ಬೀದರ್‌ನಿಂದ ದಾವಣಗೆರೆಗೆ ತೆರಳಲು ಕೆಕೆಆರ್‌ಟಿಸಿಯ ಸ್ಲೀಪರ್ ಬಸ್‌ನಲ್ಲಿ ಆಸನ ಕಾಯ್ದಿರಿಸಿದ್ದರು. ನಿಗದಿತ ವೇಳಾಪಟ್ಟಿಯಂತೆ ಸಂಜೆ 6 ಗಂಟೆಗೆ ಬೀದರ್‌ನಿಂದ ಹೊರಟ ಈ ಬಸ್, ಮರುದಿನ ಬೆಳಿಗ್ಗೆ 6 ಗಂಟೆಗೆ ದಾವಣಗೆರೆ ತಲುಪಬೇಕಿತ್ತು. ಆದರೆ ಬಸ್ ಹೊರಟ ಕೆಲವೇ ಸಮಯದಲ್ಲಿ ಹುಮನಾಬಾದ್ ಬಳಿ ತಾಂತ್ರಿಕ ದೋಷದಿಂದ ಕೆಟ್ಟುನಿಂತಿತು. ಬಳಿಕ ಬಸ್ ಅನ್ನು ಕಲಬುರಗಿ ಡಿಪೋಗೆ ಕೊಂಡೊಯ್ದು ದುರಸ್ತಿ ಮಾಡಲು ಯತ್ನಿಸಲಾಯಿತಾದರೂ ಅದು ಸಾಧ್ಯವಾಗಲಿಲ್ಲ.

ಮರುದಿನ ಬೆಳಗ್ಗೆ ತಮಗೆ ಪ್ರಮುಖ ಪರೀಕ್ಷೆ ಇರುವುದಾಗಿ ತಿಳಿಸಿದ ವಿದ್ಯಾರ್ಥಿನಿ ತೇಜಸ್ವಿನಿ, ತಕ್ಷಣವೇ ಬೇರೆ ಪರ್ಯಾಯ ಬಸ್ ವ್ಯವಸ್ಥೆ ಮಾಡುವಂತೆ ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಮನವಿ ಮಾಡಿಕೊಂಡಿದ್ದರು. ಆದರೆ ಅಧಿಕಾರಿಗಳು ಯಾವುದೇ ಪರ್ಯಾಯ ವ್ಯವಸ್ಥೆ ಮಾಡದೆ ಬೇಜವಾಬ್ದಾರಿ ಪ್ರದರ್ಶಿಸಿದ್ದರು. ಪರೀಕ್ಷೆಗೆ ತಡವಾಗುವ ಭೀತಿಯಿಂದ ಅನಿವಾರ್ಯವಾಗಿ ತೇಜಸ್ವಿನಿ ಅವರು ಖಾಸಗಿ




ಕಾರನ್ನು 18,700 ರೂಪಾಯಿ ನೀಡಿ ಬಾಡಿಗೆಗೆ ಪಡೆದು ಕಲಬುರಗಿಯಿಂದ ದಾವಣಗೆರೆಗೆ ಪ್ರಯಾಣ ಬೆಳೆಸಬೇಕಾಯಿತು.

**ಕಟ್ಟುನಿಟ್ಟಿನ ಆದೇಶ ನೀಡಿದ ಗ್ರಾಹಕ ಆಯೋಗ:** ಸಾರಿಗೆ ಸಂಸ್ಥೆಯ ಈ ನಿರ್ಲಕ್ಷ್ಯದ ವಿರುದ್ಧ ನ್ಯಾಯ ಕೋರಿ ತೇಜಸ್ವಿನಿ ಅವರು ಕಲಬುರಗಿಯ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಬಾಗಿಲು ತಟ್ಟಿದ್ದರು. ತಮಗೆ ಕಾರಿಗಾಗಿ ತಗುಲಿದ ವೆಚ್ಚ, ಟಿಕೆಟ್ ಹಣ ಮರುಪಾವತಿ ಹಾಗೂ ಉಂಟಾದ ಮಾನಸಿಕ ಕಿರುಕುಳಕ್ಕೆ ಸೂಕ್ತ ಪರಿಹಾರ ಕೊಡುವಂತೆ ಮನವಿ ಮಾಡಿದ್ದರು.

ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷೆ ಮಾಲತಿ ಗುರಣ್ಣ ಹಾಗೂ ಸದಸ್ಯ ಎಂ. ಲೋಕೇಶ್ ಅವರನ್ನೊಳಗೊಂಡ ಪೀಠವು, ಸಾರಿಗೆ ಸಂಸ್ಥೆಯ ಸೇವಾ ಲೋಪವನ್ನು ಎತ್ತಿಹಿಡಿಯಿತು. ಕಾರಿಗಾಗಿ ತಗುಲಿದ 18,700 ರೂಪಾಯಿ ಮೊತ್ತವನ್ನು 2026ರ ಜನವರಿ 3ರಿಂದ ಅನ್ವಯವಾಗುವಂತೆ ಶೇಕಡಾ 6ರಷ್ಟು ಬಡ್ಡಿಯೊಂದಿಗೆ ಮರುಪಾವತಿಸಲು ಸೂಚಿಸಿದೆ. ಇದರೊಂದಿಗೆ ವಿದ್ಯಾರ್ಥಿನಿಗೆ ಉಂಟಾದ ಮಾನಸಿಕ ವೇದನೆಗೆ 10,000 ರೂಪಾಯಿ ಪರಿಹಾರ ಹಾಗೂ ಕಾನೂನು ಹೋರಾಟದ ವೆಚ್ಚವಾಗಿ 5,000 ರೂಪಾಯಿ ಸೇರಿ ಒಟ್ಟು 33,700 ರೂಪಾಯಿ ನೀಡುವಂತೆ ಕೆಕೆಆರ್‌ಟಿಸಿಗೆ ಕಟ್ಟುನಿಟ್ಟಿನ ಆದೇಶ ನೀಡಿದೆ.

### ಬೀದರ್ ಜಿಲ್ಲಾ ಕಾಂಗ್ರೆಸ್ ನಾಯಕರ ಒಗ್ಗಟ್ಟಿನ ಮಂತ್ರದ ಜಪ

## ಭಿನ್ನಾಭಿಪ್ರಯ ಬದಿಗಿರಿಸಿ ಪಕ್ಷದ ಸಂಘಟನೆಗೆ ಒತ್ತು ಕೊಡಿ: ಖಂಡ್ರೆ ಕರೆ

**ಬೀದರ್, ಅ. 4:** ನಗರದಲ್ಲಿ ನಡೆದ ಜಿಲ್ಲಾ ಕಾಂಗ್ರೆಸ್‌ನ ನೂತನ ಅಧ್ಯಕ್ಷ ಅಬ್ದುಲ್ ಮನ್ನಾನ್ ಸೇಠ್ ಅವರ ಅಧಿಕಾರ ಸ್ವೀಕಾರ ಸಮಾರಂಭದಲ್ಲಿ ಪಕ್ಷದ ನಾಯಕರು ಒಗ್ಗಟ್ಟಿನ ಮಂತ್ರ ಜಪಿಸಿ, ಮುಂಬರುವ ಎಲ್ಲಾ ಚುನಾವಣೆಗಳಲ್ಲಿ ಪಕ್ಷವನ್ನು ಗೆಲ್ಲಿಸಿಕೊಂಡು ಬರುವ ಸಂಕಲ್ಪ ಮಾಡಿದರು.



ಸಚಿವರು, ಶಾಸಕರು, ಸಂಸದರು ಹಾಗೂ ಮಾಜಿ ಸಚಿವರು ಮಾತನಾಡಿ ಎಲ್ಲಾ ರೀತಿಯ ಭಿನ್ನಾಭಿಪ್ರಾಯಗಳನ್ನು ಬದಿಗಿರಿಸಿ, ಅಭಿಪ್ರಾಯ ಭೇದ ಗೌರವಿಸಿ, ಪಕ್ಷ ಸಂಘಟನೆಗೆ ಒತ್ತು ಕೊಡುವ ಮಾತುಗಳನ್ನು ಆಡಿದರು. ಇದರಿಂದ ಪಕ್ಷದ ಕಾರ್ಯಕರ್ತರು ಕೇಕೆ, ಶಿಳ್ಳೆ ಹೊಡೆದು ಸಂಭ್ರಮಿಸಿ, ಸಮ್ಮತಿಯ ಮುದ್ರೆ ಒತ್ತಿದರು. ಈ ದೇಶ, ರಾಜ್ಯಕ್ಕೆ ಕಾಂಗ್ರೆಸ್ ಪಕ್ಷದ ಕೊಡುಗೆಗಳನ್ನು ಸ್ಮರಿಸಿ, ತಳಮಟ್ಟದಿಂದ ಪಕ್ಷ ಬಲಪಡಿಸುವ ಮಾತುಗಳನ್ನೂ ನಾಯಕರು ಆಡಿದರು.

ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮಾತನಾಡಿ,'ಕಾಂಗ್ರೆಸ್ ಪಕ್ಷ ರಾಜಕೀಯ ಪಕ್ಷವಲ್ಲ, ಇದೊಂದು ಆಂದೋಲನ. ದೇಶಕ್ಕೆ ಸ್ವಾತಂತ್ರ್ಯ ಕೊಡಿಸಿ, 77 ವರ್ಷಗಳಲ್ಲಿ ಸಾಮಾಜಿಕ, ಶೈಕ್ಷಣಿಕ, ಔದ್ಯೋಗಿಕ ಕ್ಷೇತ್ರದಲ್ಲಿ ದೊಡ್ಡ ಸಾಧನೆ ಮಾಡಿದೆ. ಸಂವಿಧಾನ, ಪ್ರಜಾಪ್ರಭುತ್ವ ಉಳಿಸುವ ಕೆಲಸ ಮಾಡಿದೆ. ಆದರೆ, ಬಿಜೆಪಿ ಪ್ರಜಾ ಪ್ರಭುತ್ವದ ಕಗ್ಗೊಲೆ ಮಾಡುತ್ತಿದೆ' ಎಂದು ಆರೋಪಿಸಿದರು.

'ಬೀದರ್ ಜಿಲ್ಲೆ ಕಾಂಗ್ರೆಸ್‌ನ ಭದ್ರಕೋಟೆ. ಅತಿ ಆತ್ಮವಿಶ್ವಾಸದಿಂದ ಹಿಂದಿನ ವಿಧಾನಸಭಾ ಚುನಾವಣೆಯಲ್ಲಿ ಅಲ್ಪ ಮತಗಳ ಅಂತರದಿಂದ ಕೆಲವು ಕ್ಷೇತ್ರಗಳಲ್ಲಿ ನಮ್ಮ ಅಭ್ಯರ್ಥಿಗಳು ಸೋತಿದ್ದಾರೆ. ಮುಂಬರುವ ಎಲ್ಲಾ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಪಕ್ಷದ ಅಭ್ಯರ್ಥಿಗಳು ಗೆಲ್ಲಬೇಕು. ಹೊಸ ಅಧ್ಯಕ್ಷರು ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಹೋಗಬೇಕು. ಅಗತ್ಯ ಸಹಕಾರ ನೀಡಲಾಗುವುದು' ಎಂದರು.

ಮಾಜಿ ಸಚಿವ ರಾಜಶೇಖರ ಪಾಟೀಲ ಮಾತನಾಡಿ,'ನಾವೆಲ್ಲ ಒಗ್ಗಟ್ಟಿನಿಂದ ಕೆಲಸ ಮಾಡಿದ್ದರಿಂದಲೇ ಬೀದರ್ ಲೋಕಸಭಾ ಚುನಾವಣೆಯಲ್ಲಿ ಗೆದ್ದಿದ್ದೇವೆ. ಅದೇ ಒಗ್ಗಟ್ಟು ಮುಂದೆಯೂ ತೋರಿಸಬೇಕು. ನಮ್ಮ ನಮ್ಮಲ್ಲಿ ಶಕ್ತಿ ಪ್ರದರ್ಶಿಸಿದರೆ ಉಪಯೋಗವಿಲ್ಲ. ಬಿಜೆಪಿಗೆ ನಮ್ಮ ಶಕ್ತಿ ತೋರಿಸಬೇಕಿದೆ' ಎಂದು ಹೇಳಿದರು. ಸಂಸದ ಸಾಗರ್ ಖಂಡ್ರೆ ಮಾತನಾಡಿದರು.

**ನಾನು ಕಾಂಗ್ರೆಸ್ ಗುಂಪಿನವನು:** ಯಾವ ಪಕ್ಷ ಆಂತರಿಕ ಪ್ರಜಾಪ್ರಭುತ್ವದಲ್ಲಿ ನಂಬಿಕೆ ಹೊಂದಿರುತ್ತದೆಯೋ ಅಲ್ಲಿ ಭಿನ್ನಾಭಿಪ್ರಾಯ ಸಹಜ. ಆದರೆ, ಎಲ್ಲರನ್ನೂ ಜತೆಗೆ ಕರೆದೊಯ್ದು ಪಕ್ಷ ಸಂಘಟಿಸುವೆ. ನಾನು ಯಾವುದೇ ಗುಂಪಿಗೆ ಸೇರಿದವನಲ್ಲ. ನಾನು ಕಾಂಗ್ರೆಸ್ ಗುಂಪಿನವನು. ಅದಕ್ಕಾಗಿಯೇ ಕೆಲಸ ಮಾಡುವೆ. ಮುಂಬರುವ ಪಂಚಾಯಿತಿ ಚುನಾವಣೆಯಲ್ಲಿ ಪಕ್ಷದ ಗೆಲುವಿಗೆ ಶ್ರಮಿಸುವೆ' ಎಂದು ಜಿಲ್ಲಾ ಕಾಂಗ್ರೆಸ್‌ನ ನೂತನ ಅಧ್ಯಕ್ಷ ಅಬ್ದುಲ್ ಮನ್ನಾನ್ ಸೇಠ್ ಹೇಳಿದರು.

**ಕಾಂಗ್ರೆಸ್ಸಿಗರು ಎಚ್ಚರದಿಂದಿರಿ:** ಭಾಲ್ಕಿ ಸೇರಿದಂತೆ ರಾಜ್ಯದ ಎಲ್ಲೆಡೆ ಬಿಜೆಪಿ ಮತ ಕಳ್ಳತನ ಮಾಡುತ್ತಿದೆ. ಭಾಲ್ಕಿ ಕ್ಷೇತ್ರವೊಂದರಲ್ಲೇ ಬಿಜೆಪಿಯವರು ಕನಿಷ್ಠ 3ರಿಂದ 4 ಸಾವಿರ ಜೀವಂತ ಮತದಾರರ ಹೆಸರು ಅಳಿಸಿ ಹಾಕಲು ಪ್ರಯತ್ನಿಸಿದ್ದಾರೆ. ಕಾಂಗ್ರೆಸ್ ಕಾರ್ಯಕರ್ತರು ಬಹಳ ಎಚ್ಚರದಿಂದ ಇರಬೇಕು ಎಂದು ಸಂಸದ ಸಾಗರ್ ಖಂಡ್ರೆ ಸಲಹೆ ಮಾಡಿದರು.

ರಾಜಕೀಯ ಪಕ್ಷಗಳನ್ನು ಒಡೆದು ಸಂಸದರನ್ನು ಬಿಜೆಪಿ ಖರೀದಿಸುತ್ತಿದೆ. ಬಿಜೆಪಿಗೆ ಲೋಕಸಭೆಯಲ್ಲಿ 2/3ರಷ್ಟು ಬಹುಮತ ಬೇಕಾಗಿದೆ. ಆದ ಕಾರಣ ಎಲ್ಲಾ ಪಕ್ಷದ ಸಂಸದರನ್ನು ಖರೀದಿಸಲು ಪ್ರಯತ್ನಿಸುತ್ತಿದೆ. ಬಹುಮತ ಸಿಕ್ಕರೆ ಬಿಜೆಪಿ ಸಂವಿಧಾನ ಬದಲಿಸುತ್ತದೆ. ಕಾಂಗ್ರೆಸ್ ಪಕ್ಷ ಇದರ ವಿರುದ್ಧ ನಿರಂತರ ಹೋರಾಟ ನಡೆಸಲಿದೆ ಎಂದು ತಿಳಿಸಿದರು.

**ಸುಳ್ಳು ಅರ್ಜಿ ಕೊಟ್ಟವರ ವಿರುದ್ಧ ಕೇಸ್:** 'ಬಿಜೆಪಿ, ಮತ ಕಳ್ಳತನದ ಮೂಲಕ ಅರ್ಹ ಮತದಾರರ ಹೆಸರುಗಳನ್ನು ಅಳಿಸಿ, ಪ್ರಜಾಪ್ರಭುತ್ವದ ಕಗ್ಗೊಲೆ ಮಾಡುತ್ತಿದೆ. ಹೇಗಾದರೂ ಮಾಡಿ ಅಧಿಕಾರಕ್ಕೆ ಬರಲು ಬಿಜೆಪಿ ಹವಣಿಸುತ್ತಿದೆ. ಭಾಲ್ಕಿಯಲ್ಲಿ 3 ಸಾವಿರಕ್ಕೂ ಹೆಚ್ಚು ಮತದಾರರ ಹೆಸರು ತೆಗೆದು ಹಾಕಲು ಹುನ್ನಾರ ನಡೆಸಿತು. ಆದರೆ, ನಾವು ಅದನ್ನು ತಡೆದಿದ್ದೇವೆ. ಸುಳ್ಳು ಅರ್ಜಿಗಳನ್ನು ಕೊಟ್ಟವರ ವಿರುದ್ಧ ಕ್ರಿಮಿನಲ್ ಪ್ರಕರಣ ಹೂಡಲಾಗುವುದು ಎಂದು ಸಚಿವ ಈಶ್ವರ ಖಂಡ್ರೆ ತಿಳಿಸಿದರು.

## ರಂಗಭೂಮಿ ಮುಂದಿನ ತಲೆಮಾರಿಗೂ ತಲುಪಲಿ: ಎಸ್.ಎಂ. ಜನವಾಡಕರ್



**ಬೀದರ್, ಅ. 4:** ಹಿರಿಯ ರಂಗ ಕರ್ಮಿಗಳ ಅನುಭವ ಮತ್ತು ಸೃಜನಶೀಲ ಚಿಂತನೆಗಳು ಹೊಸ ತಲೆಮಾರಿನ ಕಲಾವಿದರಿಗೆ ದಾರಿದೀಪವಾಗಬೇಕು. ಅದೇ ರೀತಿ ಮುಂದಿನ ತಲೆಮರಿಗೂ ನೈಜಕಲೆ ತಲುಪುವಂತಾಗಬೇಕು ಎಂದು ಹಿರಿಯ ಸಾಹಿತಿ ಎಸ್.ಎಂ. ಜನವಾಡಕರ್ ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕಲಬುರಗಿ ರಂಗಾಯಣದ ಸಹಯೋಗದಲ್ಲಿ ನಗರದ ಜಿಲ್ಲಾ ರಂಗಮಂದಿರದಲ್ಲಿ ಏರ್ಪಡಿಸಿದ್ದ ಹಿರಿಯ ರಂಗ ಕರ್ಮಿಗಳ ಅನುಭವ ಹಾಗೂ ರಂಗಯಾನ ಕುರಿತ ಸಂವಾದದ 'ರಂಗದಂಗಳ' ಮಾತುಕತೆ ಕಾರ್ಯಕ್ರಮವನ್ನು ನಗಾರಿ ಬಾರಿಸಿ ಉದ್ಘಾಟಿಸಿ ಮಾತನಾಡಿದರು.

ರಂಗಭೂಮಿ ಕ್ಷೇತ್ರದ ಸಾಧಕರ ಅನುಭವಗಳನ್ನು ದಾಖಲಿಸುವುದು ಹಾಗೂ ಯುವ ರಂಗಕರ್ಮಿಗಳಿಗೆ ಅವುಗಳನ್ನು ಪರಿಚಯಿಸುವುದು ಇಂತಹ ಕಾರ್ಯಕ್ರಮಗಳ ಮುಖ್ಯ ಉದ್ದೇಶವಾಗಿದೆ ಎಂದರು.

ಹಿರಿಯ ರಂಗಕರ್ಮಿ ಮಹೇಶ್ ವಿ. ಪಾಟೀಲ, ಕಲಬುರಗಿ ರಂಗಾಯಣದ ನಿರ್ದೇಶಕಿ ಡಾ.ಸುಜಾತಾ ಜಂಗಮಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು.

ಹಿರಿಯ ರಂಗಕರ್ಮಿ ಸಂಗ್ರಾಮ ಇಂಗಳೆ, ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ, ಹಿರಿಯ ಜಾನಪದ ಕಲಾವಿದ ಶಂಭುಲಿಂಗ ವಾಲ್ದೊಡ್ಡಿ, ಮುಖ್ಯ ಅತಿಥಿಗಳಾಗಿ ರಂಗಾಯಣದ ಆಡಳಿತಾಧಿಕಾರಿ ಸಿದ್ರಾಮ ಸಿಂಧೆ, ಮಾತನಾಡಿದರು ಸೇರಿದಂತೆ ಇತರರು ವೇದಿಕೆಯಲ್ಲಿದ್ದರು.

### ಪಾಕಿ ಭಯೋತ್ಪಾದಕರೊಂದಿಗೆ ನಂಟು!

## ಅಕ್ರಮ ಶಸ್ತ್ರಾಸ್ತ್ರ ಜಾಲ–ಭಾಲ್ಕಿ ಯುವಕನ ಬಂಧಿಸಿದ ಎನ್‌ಐಎ

**ಬೀದರ್, ಅ. 4:** ಪಾಕಿಸ್ತಾನ ಮೂಲದ ನಿಷೇಧಿತ ಭಯೋತ್ಪಾದಕ ಸಂಘಟನೆಗಳ ನಾಯಕರು ಹಾಗೂ ಅಕ್ರಮ ಶಸ್ತ್ರಾಸ್ತ್ರ ಸರಬರಾಜು ಜಾಲದೊಂದಿಗೆ ನಂಟು ಹೊಂದಿರುವ ಆರೋಪದ ಮೇಲೆ ಜಿಲ್ಲೆಯ ಭಾಲ್ಕಿ ತಾಲೂಕಿನ ಯೇಣಕೂರ ಗ್ರಾಮದ ನಿವಾಸಿ ವಿಶಾಲ್ ಕುಮಾರ್ ಮೇತ್ರೆ (24) ಎಂಬಾತನನ್ನು ಬೀದರ್ ಪೊಲೀಸರು ಹಾಗೂ ರಾಷ್ಟ್ರೀಯ ತನಿಖಾ ಸಂಸ್ಥೆ ಕಾರ್ಯಾಚರಣೆ ನಡೆಸಿ ಬಂಧಿಸಿದ್ದಾರೆ.




**ಬಂಧನ ಮತ್ತು ಕಾಯ್ದೆಗಳು:** ಖಟಕ್‌ಚಿಂಚೋಳಿ ಪೊಲೀಸ್ ಠಾಣೆಯಲ್ಲಿ ಅಕ್ಟೋಬರ್ ಪ್ರಕರಣ ದಾಖಲಾಗಿದ್ದು, ಆರೋಪಿಯ ವಿರುದ್ಧ ಕಾನೂನುಬಾಹಿರ ಚಟುವಟಿಕೆಗಳ (ತಡೆ) ಕಾಯ್ದೆ ಸೆಕ್ಷನ್ 18, 20, 39 ಹಾಗೂ ಭಾರತೀಯ ನ್ಯಾಯ ಸಂಹಿತೆಯ ವಿವಿಧ ಕಠಿಣ ಸೆಕ್ಷನ್‌ಗಳ ಅಡಿಯಲ್ಲಿ ಮೊಕದ್ದಮೆ ಹೂಡಲಾಗಿದೆ.

**ರಹಸ್ಯ ಕಾರ್ಯಾಚರಣೆ:** ಪೊಲೀಸರು ಡಿಸೆಂಬರ್ 2025 ರಿಂದಲೇ ಈತನ ಚಟುವಟಿಕೆಗಳ ಮೇಲೆ ಕಣ್ಣಿಟ್ಟು ರಹಸ್ಯ ಕಾರ್ಯಾಚರಣೆ ನಡೆಸುತ್ತಿದ್ದರು. ಅಕ್ಟೋಬರ್ 2 ರಂದು ಮುಂಜಾನೆ 3:30 ರ ಸುಮಾರಿಗೆ ಆತನನ್ನು ವಶಕ್ಕೆ ಪಡೆಯಲಾಯಿತು.

**ಪಾಕಿಸ್ತಾನಿ ಸಂಪರ್ಕಗಳು:** ವಿಶಾಲ್‌ನ ಮೊಬೈಲ್ ಪರೀಕ್ಷಿಸಿದಾಗ, ಪಾಕಿಸ್ತಾನ ಮೂಲದ ನಿಯೋಜಿತ ಉಗ್ರ ಶಹಜಾದ್ ಭಟ್ಟಿ, ರಾನಾ ಹುಸೇನ್ ಮತ್ತು ನೋಮಿ ಖಾನ್ ಎಂಬುವವರೊಂದಿಗೆ ವಾಟ್ಸಾಪ್ ಹಾಗೂ ಇನ್‌ಸ್ಟಾಗ್ರಾಮ್ ಮೂಲಕ ಸಂಭಾಷಣೆ ನಡೆಸಿರುವುದು ಬೆಳಕಿಗೆ ಬಂದಿದೆ.

**ಅಕ್ರಮ ಶಸ್ತ್ರಾಸ್ತ್ರ ಮತ್ತು ದೇಶ ವಿರೋಧಿ ಪ್ರಚಾರ:** 'ರಹೇ ಹಕ್' ಮತ್ತು 'ರಾನಾ ಭಾಯಿ 333' ಎಂಬ ವಾಟ್ಸಾಪ್ ಚಾನೆಲ್‌ಗಳ ಮೂಲಕ ಭಾರತ ವಿರೋಧಿ ಪ್ರಚೋದನಕಾರಿ ವೀಡಿಯೊಗಳು, ಖಾಲಿಸ್ತಾನ್ ಬೆಂಬಲಿತ ಹಾಗೂ ಗ್ಯಾಂಗ್‌ಸ್ಟರ್ ಸಂಬಂಧಿತ ವಿಷಯಗಳನ್ನು ವೀಕ್ಷಿಸಿ, ಅಕ್ರಮ ಪಿಸ್ತೂಲ್ ಮತ್ತು ಶಸ್ತ್ರಾಸ್ತ್ರ ಖರೀದಿಯ ಬಗ್ಗೆ ಚರ್ಚಿಸಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಕುಟುಂಬದ ಆಸ್ತಿ ವಿವಾದ: ವಿಶಾಲ್ ತಂದೆಯ ವಿರುದ್ಧದ ಆಸ್ತಿ ಮತ್ತು ಕುಟುಂಬದ ವಿವಾದದಿಂದಾಗಿ ಪಿಸ್ತೂಲ್ ಪಡೆದು ತಂದೆಯ ಮೇಲೆಯೇ ದಾಳಿ ನಡೆಸಲು ಸಂಚು ರೂಪಿಸಿದ್ದ ಎಂಬ ಆಯಾಮದಲ್ಲೂ ತನಿಖೆ ನಡೆಯುತ್ತಿದೆ.

**ಕುಟುಂಬಸ್ಥರ ಸ್ಪಷ್ಟನೆ:** ವಿಶಾಲ್ ಕುಟುಂಬದವರು ಈ ಎಲ್ಲಾ ಆರೋಪಗಳನ್ನು ತಳ್ಳಿಹಾಕಿದ್ದು, ಇದು ಕುಟುಂಬದ ಆಸ್ತಿ ವ್ಯಾಜ್ಯಕ್ಕೆ ಸಂಬಂಧಿಸಿದ ಸುಳ್ಳು ದೂರು ಎಂದು ವಾದಿಸಿದ್ದಾರೆ.ಪ್ರಸ್ತುತ ಆರೋಪಿಯನ್ನು ಹೆಚ್ಚಿನ ವಿಚಾರಣೆಗಾಗಿ ಎನ್‌ಐಎ ಗೆ ವಶಕ್ಕೆ ಒಪ್ಪಿಸಲಾಗಿದೆ ಎಂದು ತಿಳಿಸಿದರು.

## ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆ, ಬಂಧನಕ್ಕೆ ಆಗ್ರಹಿಸಿ ಕಾಂಗ್ರೆಸ್ ಧರಣಿ

**ರಾಯಚೂರು, ಅ. 4:** ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ಅವರ ರಾಜೀನಾಮೆ ಹಾಗೂ ಅವರ ಬಂಧನಕ್ಕೆ ಆಗ್ರಹಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಬೃಹತ್ ಪ್ರತಿಭಟನಾ ಧರಣಿ ನಡೆಸಿ, ಸಿಇಸಿ ಅವರ ಪ್ರತಿಕೃತಿಯನ್ನು ದಹನ ಮಾಡಿದರು.



ನೂತನ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ.ಶಾಂತಪ್ಪ ಅಧ್ಯಕ್ಷತೆಯಲ್ಲಿ ನಡೆದ ಧರಣಿಯಲ್ಲಿ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಕೇಂದ್ರ ಸರಕಾರ, ಬಿಜೆಪಿ ಮತ್ತು ಚುನಾವಣಾ ಆಯೋಗದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯ ಬಳಿಕ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಜ್ಞಾನೇಶ್ ಕುಮಾರ್ ಅವರ ಪ್ರತಿಕೃತಿಗಳನ್ನು ದಹಿಸಿದರು.

ಎಸ್‌ಐಆರ್ (ವಿಶೇಷ ತೀವ್ರ ಪರಿಷ್ಕರಣೆ) ಪ್ರಕ್ರಿಯೆಯ ಹೆಸರಿನಲ್ಲಿ ಅರ್ಹ ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದು ಹಾಕಲಾಗುತ್ತಿದೆ ಎಂಬ ಆರೋಪವನ್ನು ಕಾಂಗ್ರೆಸ್ ಮುಖಂಡರು ಮಾಡಿದರು. ಚುನಾವಣಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಬೇಕು, ಮತದಾರರ ಹಕ್ಕುಗಳನ್ನು ರಕ್ಷಿಸಬೇಕು ಹಾಗೂ ಎಸ್‌ಐಆರ್ ಕುರಿತು ಸಮಗ್ರ ಪರಿಶೀಲನೆ ನಡೆಸಬೇಕು ಎಂದು ಆಗ್ರಹಿಸಿದರು.

ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಮಾತನಾಡಿ, ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಜನರಲ್ಲಿ ಮೂಡಿರುವ ಅನುಮಾನಗಳಿಗೆ ಚುನಾವಣಾ ಆಯೋಗ ಸ್ಪಷ್ಟನೆ ನೀಡಬೇಕು. ಎಸ್‌ಐಆರ್ ಪ್ರಕ್ರಿಯೆಯ ಕುರಿತು ಸಮಗ್ರ ಪರಿಶೀಲನೆ ನಡೆಸಿ, ಮತದಾರರ ಹಕ್ಕುಗಳಿಗೆ ಧಕ್ಕೆ ಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕೆಪಿಸಿಸಿ ಕಾರ್ಯಾಧ್ಯಕ್ಷ ಎ. ವಸಂತಕುಮಾರ್ ಮಾತನಾಡಿ, ಎಸ್‌ಐಆರ್ ಪ್ರಕ್ರಿಯೆ ಪ್ರಾಮಾಣಿಕವಾಗಿ ನಡೆಯುತ್ತಿಲ್ಲ ಎಂದು ಆರೋಪಿಸಿದರು. ಅರ್ಹ ಮತದಾರರು, ದಲಿತರು ಹಾಗೂ ಅಲ್ಪಸಂಖ್ಯಾತ ಸಮುದಾಯಗಳ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲಾಗುತ್ತಿದೆ ಎಂಬ ಆರೋಪಿಸಿದರು. ಪ್ರಧಾನಿ ನರೇಂದ್ರ ಮೋದಿ ಹಾಗೂ ಆರೆಸ್ಸೆಸ್ ಚುನಾವಣಾ ಆಯೋಗವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದು ಆರೋಪಿಸಿದ ಅವರು, ವಿರೋಧ ಪಕ್ಷಗಳನ್ನು ವ್ಯವಸ್ಥಿತವಾಗಿ ಕಟ್ಟಿ ಹಾಕುವ ಪ್ರಯತ್ನ ನಡೆಯುತ್ತಿದೆ ಎಂದು ದೂರಿದರು.

### ವಿನೂತನ ಪ್ರತಿಭಟನೆ

**ಪ್ರತಿಭಟನೆಯ ವೇಳೆ ಕಾಂಗ್ರೆಸ್ ಕಾರ್ಯಕರ್ತರೊಬ್ಬರು ಜ್ಞಾನೇಶ್ ಕುಮಾರ್ ಅವರ ಮುಖವಾಡ ಧರಿಸಿ, ಕೈಗೆ ಕೋಳ ಹಾಕಿಕೊಂಡು ಆಕ್ರೋಶ ವ್ಯಕ್ತಪಡಿಸಿದರು. ನಂತರ ಮೋದಿ, ಅಮಿತ್ ಶಾ ಹಾಗೂ ಜ್ಞಾನೇಶ್ ಕುಮಾರ್ ಅವರ ಪ್ರತಿಕೃತಿಗಳನ್ನು ನಿರ್ಮಿಸಿ ಸಾರ್ವಜನಿಕವಾಗಿ ದಹಿಸಲಾಯಿತು. ಈ ವೇಳೆ ಕಾರ್ಯಕರ್ತರು ಘೋಷಣೆ ಕೂಗಿ ಪ್ರತಿಭಟನೆ ತೀವ್ರಗೊಳಿಸಿದರು.**

## ಚಿಂತಾಮಣಿಯಲ್ಲಿ ದಾರುಣ ಘಟನೆ: ಕೃಷಿಹೊಂಡಕ್ಕೆ ಬಿದ್ದು ತಾತ, ಇಬ್ಬರು ಮೊಮ್ಮಕ್ಕಳ ದುರ್ಮರಣ

**ಚಿಂತಾಮಣಿ, ಅ.4:** ಜಮೀನಿನಲ್ಲಿರುವ ಆಂಜನೇಯಸ್ವಾಮಿ ದೇವಸ್ಥಾನಕ್ಕೆ ಶನಿವಾರ ಪೂಜೆ ಸಲ್ಲಿಸಲು ತೆರಳಿದ್ದ ತಾತ ಹಾಗೂ ಇಬ್ಬರು ಮೊಮ್ಮಕ್ಕಳು ಕೃಷಿ ಹೊಂಡದಲ್ಲಿ ಮುಳುಗಿ ಮೃತಪಟ್ಟಿರುವ ಹೃದಯ ವಿದ್ರಾವಕ ಘಟನೆ ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ತಾಲೂಕಿನ ಹುಸೇನಪುರ ಗ್ರಾಮದಲ್ಲಿ ನಡೆದಿದೆ. ಮೃತರನ್ನು ಹುಸೇನಪುರ ಗ್ರಾಮದ ಮುನಿನಾರಾಯಣಪ್ಪ (60) ಹಾಗೂ ಅವರ ಮೊಮ್ಮಕ್ಕಳಾದ ಯಶ್ವಿನ್ ಮತ್ತು ಪ್ರಜ್ವಲ್ ಎಂದು ಗುರುತಿಸಲಾಗಿದೆ. ಒಂದೇ ಕುಟುಂಬಕ್ಕೆ ಸೇರಿದ ಮೂವರು ಒಂದೇ ವೇಳೆ ದುರಂತ ಸಾವಿಗೀಡಾಗಿ ರುವುದು ಗ್ರಾಮಸ್ಥರನ್ನು ಬೆಚ್ಚಿಬೀಳಿಸಿದ್ದು, ಕುಟುಂಬದಲ್ಲಿ ಶೋಕದ ವಾತಾವರಣ ನಿರ್ಮಾಣವಾಗಿದೆ.

**ಪ್ರತಿ ಶನಿವಾರ ದೇವರ ಪೂಜೆ:** ಮುನಿನಾರಾಯಣಪ್ಪ ಅವರು ತಮ್ಮ ಜಮೀನಿನಲ್ಲಿರುವ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಪ್ರತಿ ಶನಿವಾರ ಪೂಜೆ ಸಲ್ಲಿಸುವುದನ್ನು ರೂಢಿಸಿಕೊಂಡಿದ್ದರು.

ಎಂದಿನಂತೆ ಶನಿವಾರ ಬೆಳಗ್ಗೆ ಪೂಜೆ ಸಲ್ಲಿಸಲು ಜಮೀನಿಗೆ ತೆರಳಲು ಸಿದ್ಧರಾದಾಗ, ಮೊಮ್ಮಕ್ಕಳಾದ ಯಶ್ವಿನ್ ಮತ್ತು ಪ್ರಜ್ವಲ್ ಕೂಡ ತಾತನೊಂದಿಗೆ ಬರುವುದಾಗಿ ಹಠ ಹಿಡಿದಿದ್ದಾರೆ. ಮೊಮ್ಮಕ್ಕಳನ್ನು ಜೊತೆಯಲ್ಲಿ ಕರೆದುಕೊಂಡು ಮುನಿನಾರಾಯಣಪ್ಪ ಅವರು ಜಮೀನಿನತ್ತ ತೆರಳಿದ್ದರು. ಬೆಳಗ್ಗೆ 9ರಿಂದ 10 ಗಂಟೆಯ ವೇಳೆಗೆ ಮೂವರು ಮನೆಯಿಂದ ಹೊರಟಿದ್ದರು ಎನ್ನಲಾಗಿದೆ. ಆದರೆ, ಪೂಜೆ ಮುಗಿಸಿ ಸಾಮಾನ್ಯವಾಗಿ ಮರಳಬೇಕಿದ್ದ ಮೂವರು ಸಂಜೆಯಾದರೂ ಮನೆಗೆ ವಾಪಸ್ ಬರಲಿಲ್ಲ. ಇದರಿಂದ ಕುಟುಂಬಸ್ಥರಿಗೆ ಆತಂಕ ಶುರುವಾಗಿದೆ. ಮೊಬೈಲ್ ಮೂಲಕ ಸಂಪರ್ಕಿಸಲು ಪ್ರಯತ್ನಿಸಿದರೂ ಮಾಹಿತಿ ಸಿಗದ ಹಿನ್ನೆಲೆಯಲ್ಲಿ ಕುಟುಂಬಸ್ಥರು ಹಾಗೂ ಸಂಬಂಧಿಕರು ಜಮೀನಿನತ್ತ ತೆರಳಿ ಹುಡುಕಾಟ ಆರಂಭಿಸಿದ್ದಾರೆ.

**ಕೃಷಿಹೊಂಡದಲ್ಲಿ ತೇಲುತ್ತಿದ್ದ ಶವಗಳು:** ಜಮೀನಿನ ಸುತ್ತಮುತ್ತ ಹುಡುಕಾಟ ನಡೆಸುತ್ತಿದ್ದ ವೇಳೆ, ಆಂಜನೇಯಸ್ವಾಮಿ ದೇವಸ್ಥಾನದ ಸಮೀಪದಲ್ಲಿರುವ ಅಶ್ವತ್ಥಪ್ಪ ಎಂಬುವರ ಜಮೀನಿನ ಕೃಷಿಹೊಂಡದಲ್ಲಿ ಮೂವರ ಮೃತದೇಹಗಳು ತೇಲುತ್ತಿರುವುದು ಕುಟುಂಬಸ್ಥರ ಗಮನಕ್ಕೆ ಬಂದಿದೆ. ಬೆಚ್ಚಿಬೀಳಿಸಿದೆ.

### ಕಲಬುರಗಿಯಲ್ಲಿ ಹಿಂದೂ ಮಹಾ ಗಣಪತಿ ಸಮ್ಮುಖದಲ್ಲಿ ಸಂಭ್ರಮ

## ಮಹಾರಾಜ್ಞೀ ಸಂಸ್ಕೃತಿ ಕೇಂದ್ರದಿಂದ ಲಲಿತಾ ಸಹಸ್ರನಾಮ, ಲಕ್ಷದೀಪೋತ್ಸವ

**ಕಲಬುರಗಿ, ಅ.4:** ನಗರದ ಕೋಟೆ ಮುಂಭಾಗ ಸಂಜೆ ಭಕ್ತಿಭಾವದ ವಾತಾವರಣಕ್ಕೆ ಸಾಕ್ಷಿಯಾಯಿತು. ಹಿಂದೂ ಮಹಾಗಣಪತಿ ಸಮಿತಿ ಸ್ಥಾಪಿಸಿದ್ದ ಗಣಪತಿ ಉತ್ಸವ ಸಮಿತಿ ಆಯೋಜಿಸಿದ್ದ ಲಕ್ಷದೀಪೋತ್ಸವ, ಅದಕ್ಕೂ ಮುನ್ನ ಶ್ರೀ ಮಹಾರಾಜ್ಞೀ ಸಂಸ್ಕೃತಿ ಕೇಂದ್ರದ ವತಿಯಿಂದ ಲಲಿತಾ ಸಹಸ್ರನಾಮ ಪಾರಾಯಣ ಹಾಗೂ ಭಜನಾ ಕಾರ್ಯಕ್ರಮ ಜರುಗಿತು. ಸಾವಿರಾರು ಮಹಿಳೆಯರು ಭಕ್ತಿಭಾವದಿಂದ ಪಾಲ್ಗೊಂಡಿದ್ದರು.



ಗಣಪತಿ ನಾಮಸ್ಮರಣೆ ಮತ್ತು ಗುರುವಿನ ಶ್ಲೋಕ ಪಠಣದೊಂದಿಗೆ ಆರಂಭವಾದ ಕಾರ್ಯಕ್ರಮ ದಲ್ಲಿ ಭಕ್ತಿಗೀತೆ, ಭಜನೆ ಹಾಗೂ ಲಲಿತಾ ಸಹಸ್ರನಾಮ ಪಾರಾಯಣ ನಡೆಯಿತು. ಚಂಪಾರಾಣಿ ಕಲ್ಯಾಣರಾವ ಕುಂಬಾರ ಅವರ ನೇತೃತ್ವದಲ್ಲಿ ನಡೆದ ಪಾರಾಯಣದಲ್ಲಿ ಈಶ್ವರಗುಡಿ ಗಂಜ ಕಾಲೋನಿ ಲಲಿತಾ ಸಹಸ್ರನಾಮ ಗ್ರೂಪ್‌ನ ಸದಸ್ಯರು ಸೇರಿದಂತೆ ನೂರಾರು ಮಹಿಳೆಯರು ಪಾಲ್ಗೊಂಡರು.ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿದ್ದ ಕಾಲಭೈರವ ಹಾಗೂ ಶ್ರೀ ಮಹಾರಾಜ್ಞೀ (ಶಿವಶಕ್ತಿ) ರೂಪದ ಅಲಂಕಾರ ಭಕ್ತರ ಗಮನ ಸೆಳೆಯಿತು. ಪಾರಾಯಣ ಪೂರ್ಣಗೊಂಡ ಬಳಿಕ ಕೋಟೆಯ ಮುಂಭಾಗದಲ್ಲಿ ದೀಪಗಳನ್ನು ಬೆಳಗಿಸುವ ಮೂಲಕ ಲಕ್ಷ ದೀಪೋತ್ಸವಕ್ಕೆ ಚಾಲನೆ ನೀಡಲಾಯಿತು. ನೂರಾರು ಭಕ್ತರು ದೀಪ ಬೆಳಗಿಸಿ ಧಾರ್ಮಿಕ ಸಂಭ್ರಮದಲ್ಲಿ ಪಾಲ್ಗೊಂಡರು. ರಾಚಯ್ಯಸ್ವಾಮಿ ಮಠಪತಿ, ಗೌರಿಶಂಕರಸ್ವಾಮಿ ರಟಕಲ್, ಈರಯ್ಯ ಸ್ವಾಮಿ ನಾಗೂರು, ಬಸಯ್ಯ ಸ್ವಾಮಿ ಶರಣನಗುಡಿ, ಶಂಕರ ಸ್ವಾಮಿ ಸೇರಿದಂತೆ ಧಾರ್ಮಿಕ ಮುಖಂಡರು ಉಪಸ್ಥಿತರಿದ್ದರು. ಸಿದ್ದಮ್ಮ ಪಾಟೀಲ್, ಶರಣಮ್ಮ ಅರಳಿ, ರಾಜೇಶ್ವರಿ, ಶಿಲ್ಪಾ, ಕವಿತಾ ಸ್ವಾಮಿ, ರೇಖಾ ಬೊಮ್ಮನಳ್ಳಿ, ಮೈನಾವತಿ ರೆಡ್ಡಿ, ಅನಸೂಯಾ ಹಾರೂಣೆ, ಈಶ್ವರಿ ಪಾಟೀಲ್ ಸೇರಿದಂತೆ ಲಲಿತಾ ಸಹಸ್ರನಾಮ ಗ್ರೂಪ್‌ನ ಸದಸ್ಯರು ಭಾಗವಹಿಸಿದ್ದರು.

ಹಿಂದೂ ಮಹಾಗಣಪತಿ ಸಮಿತಿಯ ಗೌರವಾಧ್ಯಕ್ಷ ಸಂಜೀವ್ ಗುಪ್ತಾ, ಅಧ್ಯಕ್ಷ ಶ್ರೀಮಂತ ರಾಜು ನವಲದಿ, ಕಾರ್ಯದರ್ಶಿ ಅಶ್ವಿನ್ ಕುಮಾರ್, ಸಹ ಕೋಶಾಧ್ಯಕ್ಷ ಶ್ರೀಶೈಲ ಮೂಲಗೆ, ಮಲ್ಲಿಕಾರ್ಜುನ ಗಂಗಾ, ಅನಿಲಕುಮಾರ ಸಿನ್ನೂರಕರ್, ಪ್ರಶಾಂತ ಗುಡ್ಡಾ, ಶಿವರಾಜ ಸಂಗೋಳಗಿ, ಸತೀಶ್ ಮಾವೂರ್, ಸಂಜಯ್ ರೇವಣಕರ್, ಸಿದ್ದು ಸಾಕರೆ ಸೇರಿದಂತೆ ಸಮಿತಿ ಪದಾಧಿಕಾರಿಗಳು ಹಾಗೂ ಸದಸ್ಯರು ಇದ್ದರು.

**ಸೈನಿಕರು, ರೈತರಿಗೆ ಗೌರವ :** ದೇಶದ ಗಡಿ ಕಾಯುವ ಸೈನಿಕರು ಹಾಗೂ ದೇಶದ ಜನತೆಗೆ ಅನ್ನ ನೀಡುವ ರೈತರ ಸೇವೆಯನ್ನು ಸ್ಮರಿಸಿ ಹಿಂದೂ ಮಹಾಗಣಪತಿ ಸಮಿತಿಯಿಂದ ಗೌರವ ಸಲ್ಲಿಸಲಾಯಿತು.

ಸೈನಿಕರು ಮತ್ತು ರೈತರು ದೀರ್ಘಕಾಲ ನೆಮ್ಮದಿಯಿಂದ ಬದುಕಲಿ ಎಂಬ ಸಂಕಲ್ಪದೊಂದಿಗೆ ಇಬ್ಬರ ಪ್ರತಿನಿಧಿ ಗಳನ್ನು ವೇದಿಕೆಯಲ್ಲಿ ಸನ್ಮಾನಿಸಲಾಯಿತು.

# ಅರ್ಜಿ ಹಿಂಪಡೆಯುವವರೆಗೆ ಆಂಧ್ರ, ತೆಲಂಗಾಣಕ್ಕೆ ನೀರು ಹರಿಸಬೇಡಿ: ಪಂಚಪ್ಪ ಕಲಬುರ್ಗಿ

**ವಿಜಯಪುರ, ಅ. 4:** ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳು ಕರ್ನಾಟಕದ ನೀರಾವರಿ ಯೋಜನೆಗಳಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್‌ನಲ್ಲಿ ಸಲ್ಲಿಸಿರುವ ಅರ್ಜಿಗಳನ್ನು ಹಿಂಪಡೆಯುವವರೆಗೆ ಆ ರಾಜ್ಯಗಳಿಗೆ ಯಾವುದೇ ಕಾರಣಕ್ಕೂ ನೀರು ಹರಿಸಬಾರದು. ರಾಜ್ಯ ಸರ್ಕಾರ ಈ ವಿಚಾರದಲ್ಲಿ ಜನರ ಕಣ್ಣಿಗೆ ಮಣ್ಣೆರೆಚುವ ಕೆಲಸ ಮಾಡಿದರೆ, ಅದು ಕರ್ನಾಟಕದ ಜನತೆಗೆ ಮಾಡುವ ದೊಡ್ಡ ದ್ರೋಹವಾಗಲಿದೆ ಎಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಹಾಗೂ ನೀರಾವರಿ ಹೋರಾಟಗಾರ ಪಂಚಪ್ಪ ಕಲಬುರ್ಗಿ ಆಗ್ರಹಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ರೈತರ ಹೊಲಗಳಿಗೆ ನೀರು ಹರಿಸುವ ವಿಚಾರದಲ್ಲಿ ಸರ್ಕಾರ ಹಲವು ಕಾರಣಗಳನ್ನು ಮುಂದಿಟ್ಟುಕೊಂಡು ಹಿಂದೇಟು ಹಾಕುತ್ತಿದೆ. ಆದರೆ ಇದೇ ಸಂದರ್ಭದಲ್ಲಿ ಆಂಧ್ರಪ್ರದೇಶ ಮತ್ತು ತೆಲಂಗಾಣಕ್ಕೆ ನೀರು ಹರಿಸುವ ಚಿಂತನೆ ನಡೆಸುತ್ತಿರುವುದು ಸರಿಯಲ್ಲ ಎಂದು ಆಕ್ಷೇಪಿಸಿದರು.

ಮೊದಲು ನಮ್ಮ ನೀರಾವರಿ ಯೋಜನೆಗಳಿಗೆ ಅವರು ಸಲ್ಲಿಸಿರುವ ಅರ್ಜಿಗಳನ್ನು ಹಿಂಪಡೆಯಲಿ. ಬಳಿಕ ನೀರು ಕೊಡುವ ಬಗ್ಗೆ ಮಾತನಾಡಲಿ. ರಾಜ್ಯ ಸರ್ಕಾರಕ್ಕೆ ನಿಜವಾಗಿಯೂ ತಾಕತ್ತು ಇದ್ದರೆ ಈ ನಿಟ್ಟಿನಲ್ಲಿ ಮೊದಲು ಕ್ರಮ ಕೈಗೊಳ್ಳಬೇಕು" ಎಂದು ಪಂಚಪ್ಪ ಕಲಬುರ್ಗಿ ಒತ್ತಾಯಿಸಿದರು.

ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳು ಕರ್ನಾಟಕದ ನೀರಾವರಿ ಯೋಜನೆಗಳಿಗೆ ಪದೇಪದೇ ತಕರಾರು ಉಂಟುಮಾಡುತ್ತಿವೆ. ನಮ್ಮ ನೀರಾವರಿ ಯೋಜನೆಗಳಿಗೆ ಕಾನೂನು ಹೋರಾಟದ ಮೂಲಕ ಅಡ್ಡಿಪಡಿಸುವ ಪ್ರಯತ್ನಗಳು ನಡೆಯುತ್ತಿದ್ದರೂ ರಾಜ್ಯ ಸರ್ಕಾರಗಳು ಈ ವಿಚಾರದಲ್ಲಿ ನಿರೀಕ್ಷಿತ ಮಟ್ಟದಲ್ಲಿ ಧ್ವನಿ ಎತ್ತುತ್ತಿಲ್ಲ ಎಂದು ಅವರು ಆರೋಪಿಸಿದರು.

ತಮಿಳುನಾಡು ಮತ್ತು ಆಂಧ್ರಪ್ರದೇಶ ರಾಜ್ಯಗಳು ಅಲ್ಪ ಪ್ರಮಾಣದ ನೀರಿನ ಬಳಕೆಯ ವಿಚಾರದಲ್ಲಿಯೂ ಕಾನೂನು ಹೋರಾಟ ನಡೆಸುತ್ತವೆ. ಆದರೆ ಕರ್ನಾಟಕದ ಭೀಮಾನದಿಯ 50 ಟಿಎಂಸಿ ನೀರನ್ನು ಬಳಸಿಕೊಂಡರೂ ರಾಜ್ಯ ಸರ್ಕಾರಗಳು ಈ ಬಗ್ಗೆ ಮೌನ ವಹಿಸುತ್ತಿರುವುದು ಏಕೆ ಎಂದು ಪ್ರಶ್ನಿಸಿದರು.

ಇದು ಉತ್ತರ ಕರ್ನಾಟಕದ ನೀರಿನ ಹಕ್ಕುಗಳ ವಿಚಾರದಲ್ಲಿ ನಡೆಯುತ್ತಿರುವ ನಿರ್ಲಕ್ಷ್ಯದ ಪ್ರತೀಕವಾಗಿದೆ. ಉತ್ತರ ಕರ್ನಾಟಕದ ನೀರಿನ ಹಕ್ಕು, ನೀರಾವರಿ ಯೋಜನೆಗಳ ಅನುಷ್ಠಾನ ಹಾಗೂ ರೈತರ ಹಿತಾಸಕ್ತಿಯ ವಿಚಾರದಲ್ಲಿ ಸರ್ಕಾರ ಸ್ಪಷ್ಟ ನಿಲುವು ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.



ವಿಜಯಪುರದಲ್ಲಿ ನೀರಾವರಿ ಹೋರಾಟಗಾರ ಹಗೂ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಪಂಚಪ್ಪ ಕಲಬುರಗಿ ಮಧ್ಯಮಗೋಷ್ಠಿಯಲ್ಲಿ ಮಾತನಾಡಿದರು.

**ಕೋಯ್ನಾ ನೀರಿನ ಪಾಲು :** ಕೊಯ್ನಾ ಜಲಾಶಯದಿಂದ ಕರ್ನಾಟಕಕ್ಕೆ ಬರಬೇಕಾಗಿದ್ದ ನೀರಿನ ಪಾಲಿನ ವಿಚಾರ ದಲ್ಲಿಯೂ ರಾಜ್ಯ ಸರ್ಕಾರ ಗಂಭೀರವಾಗಿ ಪ್ರಯತ್ನಿಸದ ಪರಿಣಾಮ ರಾಜ್ಯಕ್ಕೆ ನಷ್ಟವಾಗಿದೆ ಎಂದು ಪಂಚಪ್ಪ ಕಲಬುರ್ಗಿ ಹೇಳಿದರು.

ಈಗ ಭೀಮಾನದಿಯಿಂದ ಕರ್ನಾಟಕಕ್ಕೆ ದೊರೆಯಬೇಕಾದ ನೀರಿನ ಪಾಲಿನ ಮೇಲೂ ಇದೇ ರೀತಿಯ ನಿರ್ಲಕ್ಷ್ಯ ಮುಂದುವರಿದರೆ ಭವಿಷ್ಯದಲ್ಲಿ ಮತ್ತಷ್ಟು ಸಮಸ್ಯೆ ಎದುರಾಗುವ ಸಾಧ್ಯತೆ ಇದೆ. ಆದ್ದರಿಂದ ಸರ್ಕಾರ ಕೂಡಲೇ ಎಚ್ಚೆತ್ತುಕೊಂಡು ರಾಜ್ಯದ ನೀರಿನ ಹಕ್ಕುಗಳನ್ನು ರಕ್ಷಿಸಬೇಕು. ಮಹಾರಾಷ್ಟ್ರದ ನೀರಿನ ಬಳಕೆಗೆ ಕಣ್ಗಾವಲು ಅಗತ್ಯ : ಮಹಾರಾಷ್ಟ್ರ ಸರ್ಕಾರ ಕರ್ನಾಟಕಕ್ಕೆ ಸಂಬಂಧಿಸಿದ ನೀರಿನ ವಿಚಾರದಲ್ಲಿ ಅಕ್ರಮವಾಗಿ ನೀರು ಬಳಕೆ ಮಾಡುತ್ತಿದೆ ಎಂಬ ಆರೋಪಗಳಿದ್ದು, ಜಲಾಶಯಗಳಲ್ಲಿ ನೀರು ಸಂಗ್ರಹಿಸುವ ಕ್ರಮಗಳ ಮೇಲೂ ರಾಜ್ಯ ಸರ್ಕಾರ ಸೂಕ್ತ ಕಣ್ಗಾವಲು ಇರಿಸಬೇಕು ಎಂದು ಅವರು ಆಗ್ರಹಿಸಿದರು.

ಈ ಕುರಿತು ವಾಸ್ತವಾಂಶಗಳನ್ನು ಪರಿಶೀಲಿಸಲು ಹಾಗೂ ನೀರಿನ ಬಳಕೆ ಮತ್ತು ಸಂಗ್ರಹಣೆಯ ಬಗ್ಗೆ ತನಿಖೆ ನಡೆಸಲು ಉನ್ನತಮಟ್ಟದ ತನಿಖಾ ತಂಡವನ್ನು ರಚಿಸಬೇಕು. ಗಡಿ ರಾಜ್ಯಗಳ ನೀರಿನ ಬಳಕೆಯ ಮೇಲೆ ನಿರಂತರ ನಿಗಾ ವಹಿಸುವ ವ್ಯವಸ್ಥೆಯನ್ನು ಸರ್ಕಾರ ರೂಪಿಸಬೇಕು ಎಂದು ಪಂಚಪ್ಪ ಕಲಬುರ್ಗಿ ಒತ್ತಾಯಿಸಿದರು.

**ಹೊಲಗಾಲುವೆಗಳಿಗೆ ನೀರು:**

ಕಲಬುರಗಿ, ವಿಜಯಪುರ, ಕೊಪ್ಪಳ, ರಾಯಚೂರು ಸೇರಿದಂತೆ ಉತ್ತರ ಕರ್ನಾಟಕದ ಹಲವು ಜಿಲ್ಲೆಗಳು ಬರಗಾಲದ ಸಮಸ್ಯೆಯನ್ನು ಎದುರಿಸುತ್ತಿವೆ. ಈ ಭಾಗದ ಮುಂಗಾರು ಹಾಗೂ ಹಿಂಗಾರು ಬೆಳೆಗಳನ್ನು ರಕ್ಷಿಸುವ ಉದ್ದೇಶದಿಂದಲೇ ಆಲಮಟ್ಟಿ ಹಾಗೂ ನಾರಾಯಣಪುರ ಜಲಾಶಯಗಳ ನಿರ್ಮಾಣದ ಉದ್ದೇಶವನ್ನು ನ್ಯಾಯಮೂರ್ತಿ ಬಚಾವತ್ ಆಯೋಗದ ಮುಂದೆ ಮನವರಿಕೆ ಮಾಡಿಕೊಡಲಾಗಿತ್ತು. ಆದರೆ ಆ ಉದ್ದೇಶ ಎಷ್ಟರಮಟ್ಟಿಗೆ ಈಡೇರಿದೆ ಎಂಬುದರ ಬಗ್ಗೆ ಸರ್ಕಾರ ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಹೇಳಿದರು.

ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳಲ್ಲಿ ಲಭ್ಯವಿರುವ ನೀರಿನ ಪ್ರಮಾಣವನ್ನು ವೈಜ್ಞಾನಿಕವಾಗಿ ಪರಿಶೀಲಿಸಿ, ರೈತರ ಬೆಳೆ ರಕ್ಷಣೆಗೆ ಅಗತ್ಯವಿರುವಷ್ಟು ನೀರನ್ನು ಹೊಲಗಾಲುವೆಗಳಿಗೆ ಹರಿಸಬೇಕು. ನೀರಿನ ಲಭ್ಯತೆ ಇದ್ದಾಗಲೂ ರೈತರ ಜಮೀನುಗಳಿಗೆ ನೀರು ತಲುಪದಿದ್ದರೆ ಜಲಾಶಯಗಳ ನಿರ್ಮಾಣದ ಮೂಲ ಉದ್ದೇಶವೇ ವಿಫಲವಾಗುತ್ತದೆ ಎಂದು ಅವರು ಹೇಳಿದರು.

ರೈತರು ಬೆಳೆಗಳನ್ನು ಉಳಿಸಿಕೊಳ್ಳುವುದರ ಜೊತೆಗೆ ಜಾನುವಾರುಗಳಿಗೆ ಮೇವು ಹಾಗೂ ಕುಟುಂಬದ ಜೀವನ ನಿರ್ವಹಣೆಗೆ ಅಗತ್ಯವಿರುವ ಬೆಳೆಗಳನ್ನು ಬೆಳೆಯಲು ನೀರಿನ ಅವಶ್ಯಕತೆಯಿದೆ. ಆದ್ದರಿಂದ ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳ ಆಧಾರಿತ ಎಲ್ಲ ನೀರಾವರಿ ಯೋಜನೆಗಳಿಗೂ ಸಮರ್ಪಕವಾಗಿ ನೀರು ಹರಿಸುವ ಕ್ರಮ ಕೈಗೊಳ್ಳಬೇಕು ಎಂದು ಪಂಚಪ್ಪ ಕಲಬುರ್ಗಿ ಆಗ್ರಹಿಸಿದರು.

ಆಂಧ್ರಪ್ರದೇಶ, ತೆಲಂಗಾಣದ ನೀರಾವರಿ ಸಂಬಂಧಿತ ಅರ್ಜಿಗಳ ವಿಚಾರ, ಕರ್ನಾಟಕದ ನೀರಿನ ಹಕ್ಕು ಹಾಗೂ ಉತ್ತರ ಕರ್ನಾಟಕದ ರೈತರ ಬೆಳೆ ರಕ್ಷಣೆಯ ವಿಷಯದಲ್ಲಿ ಸರ್ಕಾರ ಸ್ಪಷ್ಟ ಮತ್ತು ಕಠಿಣ ನಿಲುವು ಪ್ರಕಟಿಸಬೇಕು. ರೈತರ ಹಿತಾಸಕ್ತಿಯನ್ನು ಮೊದಲ ಆದ್ಯತೆಯಾಗಿ ಪರಿಗಣಿಸಿ ಜಲಾಶಯಗಳ ನೀರನ್ನು ಸಮರ್ಪಕವಾಗಿ ಬಳಕೆ ಮಾಡಬೇಕು ಎಂದು ಅವರು ಒತ್ತಾಯಿಸಿದರು.

# ಸ್ವಯಂಪ್ರೇರಿತ ರಕ್ತದಾನ ಮಾಡಬೇಕು: ನ್ಯಾ. ಶ್ರೀನಿವಾಸ ನವಲೆ

**ಕಲಬುರಗಿ, ಅ. 4:** 'ರಕ್ತದಾನ ಮಹಾದಾನ ಎಂಬ ಸಂದೇಶದೊಂದಿಗೆ ಸ್ವಯಂ ಪ್ರೇರಿತ ರಕ್ತದಾನ ಮಾಡುವುದರಿಂದ ಹಲವು ಆಪತ್ತಿನಲ್ಲಿರುವ ರೋಗಿಗಳ ಜೀವಗಳನ್ನು ಉಳಿಸುವಲ್ಲಿ ದಾನಿಗಳು ಪಾತ್ರರಾಗಬಹುದು. ಅಲ್ಲದೆ, ನಿಯಮಿತ ರಕ್ತದಾನದಿಂದ ದಾನಿಗಳ ದೇಹದ ಆರೋಗ್ಯವೂ ವೃದ್ಧಿಸಿ, ಹೊಸ ರಕ್ತ ಬರುತ್ತದೆ. ಚಿಂತೆ ರಹಿತವಾಗಿ ಬದುಕಲು ನೆರವಾಗುತ್ತದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಅವರು ಹೇಳಿದರು.



ಕಲಬುರಗಿ ನಗರದ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ನಗರದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿ, ಕರ್ನಾಟಕ ರಾಜ್ಯ ರಕ್ತ ಚಾಲನಾ ಪರಿಷತ್ ಹಾಗೂ ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಜಿಲ್ಲಾ ಸಾರ್ವಜನಿಕ ಆಸ್ಪತ್ರೆ, ಜಿಲ್ಲೆ ರಕ್ತ ನಿಧಿ ಕೇಂದ್ರಗಳು, ರೆಡ್ ರಿಬ್ಬನ ಕ್ಲಬ್‌ಗಳು, ಸ್ವಯಂ ಸೇವಾ ಸಂಸ್ಥೆಗಳು,ಎನ್.ಎಸ್.ಎಸ್. ಘಟಕ ಇವರುಗಳ ಸಂಯುಕ್ತಾಶ್ರಯದಲ್ಲಿ 'ಮಾನವೀಯತೆ ಒಂದು ಹನಿ ರಕ್ತ ನೀಡಿ, ಜೀವ ಉಳಿಸಿ' ಎಂಬ ಘೋಷವಾಕ್ಯದೊಂದಿಗೆ ರಾಷ್ಟ್ರೀಯ ಸ್ವಯಂಪ್ರೇರಿತ ರಕ್ತದಾನ ಜಾಗೃತಿ ಜಾಥಾಕ್ಕೆ ಹಿರಿಯ ಸಿವಿಲ್ ನ್ಯಾಯಾಧೀಶರೂ ಆದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಅವರು ಚಾಲನೆ ನೀಡಿ ಮಾತನಾಡಿದರು.

ನಗರದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿ, ಕರ್ನಾಟಕ ರಾಜ್ಯ ರಕ್ತ ಚಾಲನಾ ಪರಿಷತ್ ಹಾಗೂ ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಜಿಲ್ಲಾ ಸಾರ್ವಜನಿಕ ಆಸ್ಪತ್ರೆ, ಜಿಲ್ಲೆ ರಕ್ತ ನಿಧಿ ಕೇಂದ್ರಗಳು, ರೆಡ್ ರಿಬ್ಬನ ಕ್ಲಬ್‌ಗಳು, ಸ್ವಯಂ ಸೇವಾ ಸಂಸ್ಥೆಗಳು,ಎನ್.ಎಸ್.ಎಸ್. ಘಟಕ ಇವರುಗಳ ಸಂಯುಕ್ತಾಶ್ರಯದಲ್ಲಿ 'ಮಾನವೀಯತೆ ಒಂದು ಹನಿ ರಕ್ತ ನೀಡಿ, ಜೀವ ಉಳಿಸಿ' ಎಂಬ ಘೋಷವಾಕ್ಯದೊಂದಿಗೆ ಜಿಲ್ಲಾ ಆಸ್ಪತ್ರೆಯಲ್ಲಿ ರಾಷ್ಟ್ರೀಯ ಸ್ವಯಂಪ್ರೇರಿತ ರಕ್ತದಾನ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದರು.

ರಕ್ತದಾನದ ಬಗ್ಗೆ ಸಾರ್ವಜನಿಕರಲ್ಲಿ ಇರುವ ಅನಗತ್ಯ ಭಯ ಹಾಗೂ ತಪ್ಪು ಕಲ್ಪನೆಗಳನ್ನು ತೊಡೆದು ಹಾಕುವುದು ಅತ್ಯಗತ್ಯ. ರಕ್ತ ನೀಡಲು ಅರ್ಹರಿರುವ ಪ್ರತಿಯೊಬ್ಬರೂ ಈ ಮಹತ್ಕಾರ್ಯದಲ್ಲಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಶರಣಬಸಪ್ಪ ಕ್ಯಾತ್ನಾಳ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ಜಿಲ್ಲಾ ಆಸ್ಪತ್ರೆಯಲ್ಲಿ ಗರ್ಭಿಣಿಯರಿಗೆ, ಅಪಘಾತ ಆದವರಿಗೆ ಹಾಗೂ ಡಯಾಲಿಸಿಸ್ ರೋಗಿಗಳಿಗೆ ರಕ್ತದ ಅವಶ್ಯಕತೆ ತುಂಬಾ ಇದೆ ಎಂದರು. ವಿಭಾಗೀಯ ಜಂಟಿ ನಿರ್ದೇಶಕರ ಕಾರ್ಯಾಲಯದ ಉಪ ನಿರ್ದೇಶಕ ರಾದ ಡಾ.ಎ.ಎಸ್. ರುದ್ರವಾಡಿ, ಒಟ್ಟು ಜನಸಂಖ್ಯೆಯಲ್ಲಿ ಕನಿಷ್ಠ ಶೇಕಡಾ 1% ರಷ್ಟು ರಕ್ತ ಸಂಗ್ರಹ ವಾಗುವುದು ಅತ್ಯಗತ್ಯವಾಗಿದೆ. ಆರೋಗ್ಯವಂತ ಯುವಜನತೆ ಸ್ವಯಂ ಪ್ರೇರಿತರಾಗಿ ಮುಂದೆ ಬಂದು, ನಿಯಮಿತವಾಗಿ ರಕ್ತದಾನ ಮಾಡುವ ಮೂಲಕ ರಕ್ತದ ಕೊರತೆಯನ್ನು ನೀಗಿಸಲು ಸಹಕರಿಸಬೇಕು ಎಂದರು. ನಂತರ ಸರ್ಕಾರಿ ಪದವಿ ಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ಸ್ವಯಂಪ್ರೇರಿತ ರಕ್ತದಾನ ದಿನಾಚರಣೆಯ ಅಂಗವಾಗಿ ಸುಮಾರು 35ಕ್ಕೂ ಹೆಚ್ಚಿನ ಜನರು ರಕ್ತದಾನ ಮಾಡಿದರು.

# ಸುದರ್ಶನ ಸಾವಿಗೆ ನ್ಯಾಯ ಸಿಗಬೇಕು ಮಾಜಿ ಸಚಿವ ಭಗವಂತ ಖೂಬಾ

**ಬೀದರ್, ಅ.04–**ಭಾಲ್ಕಿ ಪಟ್ಟಣದ ನಿವಾಸಿಯಾದ ಕು. ಸುದರ್ಶನ ರಟ್ಕಲೆ ಅವರ ಮನೆಗೆ ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಭೇಟಿ ನೀಡಿ, ಅವರ ತಂದೆ ತಾಯಿಗೆ ಮತ್ತು ಪರಿವಾರದವರಿಗೆ ಭೇಟಿಯಾಗಿ ಸಾಂತ್ವಾನ ಹೇಳಿ, ಸುದರ್ಶನ ಸಾವಿಗೆ ನ್ಯಾಯ ಕೊಡಿಸುವುದಾಗಿ ತಿಳಿಸಿ, ಕೊಲೆಗೈದ ಪಾಪಿಗಳಿಗೆ ಶಿಕ್ಷೆ ಕೊಡಿಸುವವರೆಗೂ ಸುಮ್ನೆ ಇರೊದಿಲ್ಲಾ ಎಂದು ನೊಂದ ಕುಟುಂಬಕ್ಕೆ ಭರವಸೆಯನ್ನು ನೀಡಿದರು ಮತ್ತು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಭಾಲ್ಕಿಗೆ ಬಂದು ಈ ಪರಿವಾರಕ್ಕೆ ನ್ಯಾಯ ಕೊಡಿಸಬೇಕೆಂದು ಒತ್ತಾಯಿಸಿದರು.



ಈದೆ ಸಂದರ್ಭದಲ್ಲಿ ಖೂಬಾ ಅವರಿಗೆ ಭೇಟಿಯಾದ ಕು.ಸುದರ್ಶನ ಸ್ನೇಹಿತರು ಮತ್ತು ಸ್ಥಳಿಯ ನಿವಾಸಿಗಳು, ನಾವು ಪಂಚನಾಮೆ ಹೊಗಬಾರದು, ಈ ಪ್ರಕರಣದಲ್ಲಿ ನಾವು ಬಂದರೆ ನಮ್ಮನ್ನು ಸಹ ಸುಮ್ನೆ ಬಿಡೊದಿಲ್ಲಾ ಎಂದೆಲ್ಲಾ ದೂರವಾಣಿ ಕರೆ ಮೂಲಕ ನಮಗೆ ಹೆದರಿಸುತ್ತಿದ್ದಾರೆ, ನಾವು ಭಯದಲ್ಲಿ ಬದುಕುತ್ತಿದ್ದೇವೆ, ನಮಗೆ ಸಾಕ್ಷಿ ಹೇಳಲು ಸಹ ಇಲ್ಲಿಯ ಜನರು ಬಿಡುವುದಿಲ್ಲಾ, ಇವತ್ತು ಟೆಕ್ನಾಲೋಜಿ ಬೆಳೆದಿದೆ, ಕೊಲೆಯಾದ ಸ್ಥಳದಲ್ಲಿ ಟವರ್ ಲೋಕೆಷನ್ ಇದೆ, ಹಲ್ಲೆ ವಿಡಿಯೊ ಪೋಲಿಸರ್ ಬಳಿ ಇವೆ, ಇನ್ನು ಹೆಚ್ಚಿನ ತನಿಖೆ ಮಾಡಿ ಕೊಲೆ ಮಾಡಿದವರಿಗೆ ಕಠಿಣ ಶಿಕ್ಷೆ ಕೊಡಿಸಬೇಕೆಂದು ಒತ್ತಾಯಿಸಿದರು.

ಈ ಸಂಧರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಸ್ಥಳಿಯ ಶಾಸಕ ಈಶ್ವರ ಖಂಡ್ರೆ ಅವರು ಈ ಕೊಲೆ ಪ್ರಕರಣವನ್ನು ಮುಚ್ಚಿ ಹಾಕಲು ಪ್ರಯತ್ನಿಸುತ್ತಿದ್ದು, ಈಗಾಗಲೆ ಒಂದು ಬಾರಿ ಇದನ್ನು ಆತ್ಮಹತ್ಯೆ ಎಂದು ಹೇಳಿಕೆ ನೀಡಿದ್ದರು, ಅವರ ಮಗ ಸಂಸದ ಇದೊಂದು ಅಕಾಲಿಕ ನಿಧನ ಎಂದು ಅವರ ಫೇಸಬುಕ್‌ನಲ್ಲಿ ಬರೆದಕೊಂಡಿದ್ದಾರೆ, ಒಟ್ಟಿನಲ್ಲಿ ತಂದೆ ಮಗ ಈ ಪ್ರಕರಣ ಮುಚ್ಚಿ ಹಾಕಿ ಕೊಲೆಗೈದಿರುವವರನ್ನು ಈ ಪ್ರಕರಣದಿಂದ ಬಚಾವ್ ಮಾಡಲು ಪ್ರಯತ್ನಿಸುತ್ತಿದ್ದಾರೆ, ಆದರೆ ನಮ್ಮ ಪಕ್ಷ ಹಾಗು ನಾನು ಈ ಅನ್ಯಾಯವನ್ನು ಸಹಿಸುವುದಿಲ್ಲಾ, ಸುದರ್ಶನ ಕುಟುಂಬಕ್ಕೆ ನ್ಯಾಯ ಕೊಡಿಸುತ್ತೇವೆ ಎಂದು ಕಾರ್ಯಕರ್ತರಿಗೆ ಅವರ ಸ್ನೇಹಿತರಿಗೆ ಭರವಸೆ ನೀಡಿದರು.

ಮಾಧ್ಯಮದವರೊಂದಿಗೆ ಮಾತನಾಡಿ, ಈಶ್ವರ ಖಂಡ್ರೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾಗಿ ಅವರ ನಗರದಲ್ಲೆ ಲಿಂಗಾಯತ ಯುವಕನ ಕೊಲೆಯಾಗಿದೆ, ಇಲ್ಲಿಯವರೆಗೆ ಈ ನೊಂದ ಕುಟುಂಬಕ್ಕೆ ಸಾಂತ್ವಾನ ಹೇಳಲು ಬಂದಿಲ್ಲಾ, ಇವರೆಂಥ ಲಿಂಗಾಯತ ನಾಯಕ ಎಂದು ಪ್ರಶ್ನಿಸಿದರು, ಜೊತೆಗೆ ಪೋಲೀಸ್ ಇಲಾಖೆಯೂ ಈ ಪ್ರಕರಣದಲ್ಲಿ ಸಚಿವರ ಒತ್ತಡಕ್ಕೆ ಒಳಗಾಗಿ ತಪ್ಪು ಮಾಡಿದರೆ ಬೀದಿಗಿಳಿದು ಹೊರಾಟ ಮಾಡಲಾಗುವುದು ಎಂದು ಎಚ್ಚರಿಸಿದರು. ಭಾಲ್ಕಿಯಲ್ಲಿ ಅವರ ಮನೆ ಸುತ್ತ ಮುತ್ತ ಇಸ್ಪಿಟ್, ಮಟಕಾ ಧಂಧೆ ಜೋರು ನಡಿತಿದೆ ಆದರೆ ಅವುಗಳ ವಿರುದ್ಧ ಕ್ರಮವಿಲ್ಲಾ ಎಂದು ಆಕ್ರೋಷ ಹೊರಹಾಕಿದರು.

ನಂತರ ಮುಖಂಡರು ಹಾಗು ಕಾರ್ಯಕರ್ತರೊಂದಿಗೆ ನಗರ ಸರ್ಕಲ್ ಇನ್ಸಪೇಕ್ಟರ್ ಕಚೇರಿಗೆ ತೆರಳಿ, ಸಿ.ಪಿ.ಐ ಅವರಿಗೆ ಭೇಟಿಯಾಗಿ, ತಾವು ಈ ನೊಂದ ಕುಟುಂಬಕ್ಕೆ ನ್ಯಾಯ ಸಿಗುವ ನಿಟ್ಟಿನಲ್ಲಿ ಪ್ರಾಮಾಣಿಕತೆಯಿಂದ ಕೆಲಸ ಮಾಡಬೇಕು, ಕೊಲೆಗಾರರ ಪರವಾದ ಜನರು ಧಮಕಿ ಕರೆಗಳು ಮಾಡುತ್ತಿದ್ದಾರೆ ಅವರ ಮೇಲೂ ಪ್ರಕರಣಗಳು ದಾಖಲಿಸಿ ಕ್ರಮ ಕೈಗೊಳ್ಳಬೇಕು ಮತ್ತು ಸುದರ್ಶನ ಪರಿವಾರಕ್ಕೆ ಮತ್ತು ಸಾಕ್ಷಿದಾರರ ಪರಿವಾರಕ್ಕೆ ಭದ್ರತೆ ನೀಡಲು ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಶ್ರೀ ಪ್ರಕಾಶ್ ಖಂಡ್ರೆ, ಮುಖಂಡರಾದ ಗೋವಿಂದರಾವ ಬಿರಾದಾರ್, ಕೆ.ಡಿ.ಗಣೇಶ್, ಸೂರಜ್ ಮಜಗೆ, ಜೈರಾಜ್ ಕೋಳ್ಕಾ, ಪಾಂಡುರಂಗ ಕನ್ಸೆ, ಸಂಜೀವ್ ಶಿಂಧೆ, ದೀಪಕ್ ಶಿಂಧೆ, ಸಂತೋಷ್ ಹಲಸಿ, ಅಮರ್ ಜೋಳದಾಪಕ, ಸಂಗಮೇಶ ಭಾತಂಬ್ರಾ ಸೇರಿದಂತೆ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

# ಅರ್ಹರು ಸರ್ಕಾರಿ ಸೌಲಭ್ಯ ಬಳಸಿಕೊಳ್ಳಿ ಸಿದ್ದರಾಮಪ್ಪ ಕಲ್ಯಾಣರಾವ್ ಕರೆ



ರಾಯಚೂರು ಜಿಲ್ಲೆಯ ಮಟಮಾರಿ ಗ್ರಾಮದಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ರಾಜ್ಯ ಕಾನೂನು ಸೇವೆಗಳ ಪ್ರಾಧಿಕರದ ಸಹಯೋಗದಲ್ಲಿ ಆಯೋಜಿಸಿದ್ದ ಮೇಗಾ ಡ್ರೈವ್ ಕಾರ್ಯಕ್ರಮಕ್ಕೆ ಹಿರಿಯ ದಿವಾಣಿ ನ್ಯಾಯಾಲಯದ ನ್ಯಾಯಾಧೀಶರೂ ಆದ ಕಾನೂನು ಸೇವೆಗಳ ಪ್ರಾಧಿಕರದ ಸದಸ್ಯ ಕಾರ್ಯದರ್ಶಿ ಸಿದ್ದರಾಮಪ್ಪ ಕಲ್ಯಾಣರಾವ್ ಅವರು ಚಾಲನೆ ನೀಡಿದರು.

**ರಾಯಚೂರು, ಅ. 4:** ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಮಹಿಳೆಯರು, ವಿದ್ಯಾರ್ಥಿಗಳು ಹಾಗೂ ವೃದ್ಧರಿಗಾಗಿ ಹಲವು ಕಲ್ಯಾಣ ಯೋಜನೆಗಳನ್ನು ಜಾರಿಗೊಳಿಸಿವೆ.

ಅರ್ಹ ಫಲಾನುಭವಿಗಳು ಸರ್ಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯೂ ಆದ ಸಿದ್ದರಾಮಪ್ಪ ಕಲ್ಯಾಣರಾವ್ ಹೇಳಿದರು.

ಜಿಲ್ಲೆಯ ಮಟಮಾರಿ ಗ್ರಾಮದಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸಹಯೋಗದಲ್ಲಿ ಆಯೋಜಿಸಿದ್ದ ಮೆಗಾ ಡ್ರೈವ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರತಿಯೊಬ್ಬರೂ ಕಾನೂನುಗಳ ಬಗ್ಗೆ ಅರಿವು ಹೊಂದಬೇಕು. ವಿಶೇಷವಾಗಿ ಮಹಿಳೆಯರ ರಕ್ಷಣೆ ಹಾಗೂ ಹಕ್ಕುಗಳಿಗೆ ಸಂಬಂಧಿಸಿದ ಹಲವು ಕಾನೂನುಗಳಿದ್ದು, ಅವುಗಳ ಬಗ್ಗೆ ತಿಳಿದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಎನ್‌ಎಎಲ್‌ಎಸ್‌ಎ ಯೋಜನೆಯಡಿ ಮಟಮಾರಿ ಗ್ರಾಮವನ್ನು ಆಯ್ಕೆ ಮಾಡಲಾಗಿದೆ. ಈಗಾಗಲೇ ವಿವಿಧ ಇಲಾಖೆಗಳ ಮೂಲಕ ನಡೆಸಿದ ಸಮೀಕ್ಷೆಯಲ್ಲಿ ಗುರುತಿಸಲಾದ ಫಲಾನುಭವಿಗಳಿಗೆ ಹಲವು ಸೌಲಭ್ಯಗಳನ್ನು ವಿತರಿಸಲಾಗಿದೆ. 171 ಆಯುಷ್ಮಾನ್ ಭಾರತ್ ಕಾರ್ಡ್, 36 ವೃದ್ಧಾಪ್ಯ ವೇತನ, 4 ಆಧಾರ್ ಕಾರ್ಡ್, 21 ವಿಧವಾ ವೇತನ, 61 ಕಾರ್ಮಿಕ ಕಾರ್ಡ್ ಹಾಗೂ 38 ವಾಹನ ಚಾಲನಾ ಕಲಿಕಾ ಪರವಾನಗಿಗಳನ್ನು ವಿತರಿಸಲಾಗಿದೆ ಎಂದು ತಿಳಿಸಿದರು.

ರಾಯಚೂರು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ತಹಶೀಲ್ದಾರ್ ಕಚೇರಿ ಶಿರಸ್ತೆದಾರರು, ಮಟಮಾರಿ ಗ್ರಾಮ ಪಂಚಾಯಿತಿ ಅಧಿಕಾರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

## ಎಸ್‌ಐಆರ್ ವಿವಾದ, 198 ಮತದಾರರ ಹೆಸರು ಅಳಿಸಲು ಯತ್ನಿಸಿದ ಆರೋಪ

## ಬೆಳಗಾವಿ ಬಿಜೆಪಿ ಮುಖಂಡ ಡಾ. ರವಿ ಪಾಟೀಲ್‌ಗೆ ಷರತ್ತುಬದ್ಧ ಜಾಮೀನು ಮಂಜೂರು

**ಬೆಳಗಾವಿ, ಅ.03–** ಎಸ್‌ಐಆರ್ ವಿವಾದಕ್ಕೆ ಸಂಬಂಧಿಸಿದಂತೆ ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರದ ಬಿಜೆಪಿ ಮುಖಂಡ ಡಾ. ರವಿ ಪಾಟೀಲ್ ಅವರಿಗೆ ಕೋರ್ಟ್ ಷರತ್ತುಬದ್ಧ ಮಧ್ಯಂತರ ಜಾಮೀನು ಮಂಜೂರು ಮಾಡಿದೆ.ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯ ವೇಳೆ, ಬೆಳಗಾವಿ ವೀರಭದ್ರ ನಗರದ ಸುಮಾರು 198 ಮುಸ್ಲಿಂ ಮತದಾರರ ಹೆಸರುಗಳನ್ನು ಅಕ್ರಮವಾಗಿ ಅಳಿಸಲು ಯತ್ನಿಸಿದ ಆರೋಪದ ಮೇಲೆ ಬೆಳಗಾವಿಯ ಮಾರ್ಕೆಟ್ ಪೊಲೀಸ್ ಠಾಣೆಯಲ್ಲಿ ಇವರ ವಿರುದ್ಧ ಎಫ್‌ಐಆರ್ ದಾಖಲಾಗಿತ್ತು.

ವಾರ್ಡ್ ನಂಬರ್ 12ರ ಬೂತ್ ಮಟ್ಟದ ಅಧಿಕಾರಿಯೊಬ್ಬರು ನೀಡಿದ ದೂರಿನ ಮೇರೆಗೆ ಭಾರತೀಯ ನ್ಯಾಯ ಸಂಹಿತೆಯ ವಿವಿಧ ಸೆಕ್ಷನ್‌ಗಳಡಿ ಪ್ರಕರಣ ದಾಖಲಿಸಲಾಗಿತ್ತು.

ನಕಲಿ ದಾಖಲೆ ಮತ್ತು ತಪ್ಪು ಮಾಹಿತಿ ಆಧರಿಸಿ ಫಾರ್ಮ್ ನಂ. 7ರ ಮೂಲಕ ಮತದಾರರ ಹೆಸರುಗಳನ್ನು ಕೈಬಿಡಲು ಯತ್ನಿಸಲಾಗಿದೆ ಎಂಬ ಆರೋಪ ರವಿ ಪಾಟೀಲ್ ಮೇಲಿತ್ತು. ಈ ಹಿನ್ನೆಲೆಯಲ್ಲಿ ಪ್ರಕರಣ ದಾಖಲಾಗಿತ್ತು.

ಬಂಧನ ಭೀತಿಯಲ್ಲಿದ್ದ ರವಿ ಪಾಟೀಲ್, ಜಾಮೀನಿಗಾಗಿ ಕೋರ್ಟ್ ಮೊರೆ ಹೋಗಿದ್ದರು. ಅರ್ಜಿ ವಿಚಾರಣೆ ನಡೆಸಿದ ಬೆಳಗಾವಿಯ 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶ ಗಂಗಾಧರ್ ಕೆ.ಎನ್. ಡಾ. ರವಿ ಪಾಟೀಲ್ ಅವರಿಗೆ ಷರತ್ತುಬದ್ಧ ಜಾಮೀನು ಮಂಜುರು ಮಾಡಿದ್ದಾರೆ.50 ಸಾವಿರ ರೂಪಾಯಿ ಬಾಂಡ್ ಹಾಗೂ ಅಷ್ಟೇ ಮೊತ್ತದ ಒಬ್ಬರ ಜಾಮೀನುದಾರರೊಂದಿಗೆ ಜಾಮೀನು ಮಂಜೂರು ಮಾಡಲಾಗಿದೆ.



ಅಲ್ಲದೇ ಸಾಕ್ಷ್ಯಗಳಿಗೆ ಬೆದರಿಕೆ ಹಾಕಬಾರದು, ತನಿಖಾಧಿಕಾರಿಗಳು ಕರೆದಾಗ ಹಾಜರಾಗಬೇಕು, ಅಪರಾಧ ಕೃತ್ಯಗಳಲ್ಲಿ ಭಾಗಿಯಾಗಬಾರದು ಎಂದು ನ್ಯಾಯಾಲಯ ಷರತ್ತು ವಿಧಿಸಿದೆ.

ಜಾಮೀನು ಸಿಕ್ಕ ಬೆನ್ನಲ್ಲೇ ಬೆಳಗಾವಿ ಮಾರ್ಕೆಟ್ ಠಾಣೆ ಪೊಲೀಸರು ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಿದ್ದು, ಡಾ. ರವಿ ಪಾಟೀಲ್ ಅವರು ಪೊಲೀಸ್ ವಿಚಾರಣೆಗೆ ಹಾಜರಾಗಿ ತಮ್ಮ ಹೇಳಿಕೆ ನೀಡಿದ್ದಾರೆ.

# ಕೊಪ್ಪದಲ್ಲಿ 243 ಮತದಾರರ ಹೆಸರು ತೆಗೆದುಹಾಕುವಂತೆ ಮನವಿ ಮಾಡಿದ್ದ ಅರ್ಜಿ ಹಿಂಪಡೆದ ಬಿಜೆಪಿ ಮುಖಂಡ ದಿನೇಶ್

**ಕೊಪ್ಪ ,ಅ.4:** ರಾಜ್ಯಾದ್ಯಂತ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಮತ್ತು 'ಫಾರಂ–7' ದುರ್ಬಳಕೆ ಕುರಿತು ದೊಡ್ಡ ಮಟ್ಟದ ರಾಜಕೀಯ ಆರೋಪ–ಪ್ರತ್ಯಾರೋಪಗಳು ನಡೆಯುತ್ತಿರುವ ಬೆನ್ನಲ್ಲೇ, ಚಿಕ್ಕಮಗಳೂರು ಜಿಲ್ಲೆಯ ಕೊಪ್ಪದಲ್ಲಿ ಮತದಾರರ ಹೆಸರು ಡಿಲೀಟ್ ಸಲ್ಲಿಸಿದ ಅರ್ಜಿಯನ್ನು ಬಿಜೆಪಿ ಮುಖಂಡರೊಬ್ಬರು ಹಿಂಪಡೆದಿರುವ ಘಟನೆ ವರದಿಯಾಗಿದೆ.

ಕೊಪ್ಪ ತಾಲೂಕಿನಲ್ಲಿ ಒಟ್ಟು 243 ಅರ್ಹ ಮತದಾರರ ಹೆಸರು ಗಳನ್ನು ಮತದಾರರ ಪಟ್ಟಿಯಿಂದ ಡಿಲೀಟ್ (ತೆಗೆದುಹಾಕುವಂತೆ) ಮಾಡುವಂತೆ ಕೋರಿ ಬಿಜೆಪಿ ಮುಖಂಡ ದಿನೇಶ್ ಎಂಬುವವರು ಚುನಾವಣಾ ಆಯೋಗಕ್ಕೆ ಫಾರಂ–7 ಮೂಲಕ ಅರ್ಜಿ ಸಲ್ಲಿಸಿದ್ದರು. ಆದರೆ, ಪ್ರಸ್ತುತ ರಾಜ್ಯಾದ್ಯಂತ ಫಾರಂ–7 ದುರ್ಬಳಕೆ ಮಾಡಿಕೊಂಡು ಅರ್ಹ ಮತದಾರರ ಹೆಸರುಗಳನ್ನು ಕೈಬಿಡಲಾಗುತ್ತಿದೆ ಎಂದು ಆಡಳಿತಾರೂಢ ಕಾಂಗ್ರೆಸ್ ತೀವ್ರ ಪ್ರತಿಭಟನೆ ನಡೆಸುತ್ತಿದ್ದು, ಪೊಲೀಸರು ಪ್ರಕರಣಗಳನ್ನು ದಾಖಲಿಸಲು ಆರಂಭಿಸಿದ್ದಾರೆ.

ಈ ಬೆಳವಣಿಗೆಗಳ ಬೆನ್ನಲ್ಲೇ, ಬಿಜೆಪಿ ಮುಖಂಡ ದಿನೇಶ್ ಅವರು ತಾವು 243 ಮತದಾರರ ಹೆಸರು ಡಿಲೀಟ್ಗೆ ಸಲ್ಲಿಸಿದ್ದ ಫಾರಂ–7 ಅರ್ಜಿಯನ್ನು ಅಧಿಕೃತವಾಗಿ ಹಿಂಪಡೆದಿದ್ದಾರೆ.

ರಾಜ್ಯದಲ್ಲಿ ಎಸ್.ಐ.ಆರ್ ಪ್ರಕ್ರಿಯೆಯಡಿ ಸಾಮೂಹಿಕವಾಗಿ ಫಾರಂ–7 ಬಳಸಿ ಮತದಾರರ ಹೆಸರುಗಳನ್ನು ತೆಗೆದುಹಾಕಲು ಯತ್ನಿಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ನಾಯಕತ್ವದಲ್ಲಿ ಚುನಾವಣಾ ಆಯೋಗದ ಮುಂದೆ ಧರಣಿ ನಡೆಸಿತ್ತು. ಇದಲ್ಲದೆ, ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಹಲವು ಬಿಜೆಪಿ ನಾಯಕರ ವಿರುದ್ಧ ಎಫ್‌ಐಆರ್ ಕೂಡ ದಾಖಲಾಗಿದೆ. ಈ ಕಾನೂನು ಕ್ರಮಗಳು ಹಾಗೂ ತೀವ್ರ ರಾಜಕೀಯ ಒತ್ತಡದ ಪರಿಣಾಮವಾಗಿ ಈ ಅರ್ಜಿ ಹಿಂಪಡೆಯಲಾಗಿದೆ ಎನ್ನಲಾಗಿದೆ.

ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಫಾರ್ಮ್–7 ದುರ್ಬಳಕೆ ಮಾಡಿಕೊಂಡು ಅರ್ಹ ಮತದಾರರ ಹೆಸರುಗಳನ್ನು ಡಿಲೀಟ್ ಮಾಡಿಸುವ ಹುನ್ನಾರ ರಾಜ್ಯಾದ್ಯಂತ ನಡೆಯುತ್ತಿದೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಇಂತಹದ್ದೇ ಷಡ್ಯಂತ್ರ ಬೆಂಗಳೂರಿನ ಮಲ್ಲೇಶ್ವರಂ ಕ್ಷೇತ್ರದಲ್ಲೂ ನಡೆದಿದೆ ಎಂದು ಕಾಂಗ್ರೆಸ್ ಮುಖಂಡ ಅನೂಪ್ ಅಯ್ಯಂಗಾರ್ ದೂರು ನೀಡಿದ್ದಾರೆ. ಅವರ ದೂರಿನ ಆಧಾರದ ಮೇಲೆ ಬೆಂಗಳೂರಿನ ವೈಯಾಲಿಕಾವಲ್ ಪೊಲೀಸ್ ಠಾಣೆಯಲ್ಲಿ ಇಬ್ಬರ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಈ ಮಧ್ಯೆ ಮಲ್ಲೇಶ್ವರಂ ವಿಧಾನಸಭಾ ಕ್ಷೇತ್ರದ ವಾರ್ಡ್ ಸಂಖ್ಯೆ 64ರಲ್ಲಿ ಬಿಜೆಪಿಯ ಬಿಎಲ್‌ಎ ಜಿ.ಎಸ್. ವಸಂತಲಕ್ಷ್ಮೀ ಮತ್ತು ಇನ್ನೊಬ್ಬ ವ್ಯಕ್ತಿ ಫಾರ್ಮ್–7ಅನ್ನು ದುರ್ಬಳಕೆ ಮಾಡಿದ್ದಾರೆ. ಹಲವು ವರ್ಷಗಳಿಂದ ಕ್ಷೇತ್ರದಲ್ಲಿ ವಾಸವಿರುವ ಮತ್ತು ಮತ ಚಲಾಯಿಸುತ್ತಿರುವ ಕಾನೂನು ಬದ್ಧ ಮತದಾರರನ್ನು ಗೈರುಹಾಜರಿ ದ್ದಾರೆ ಅಥವಾ ಶಾಶ್ವತವಾಗಿ ಬೇರೆಡೆಗೆ ಸ್ಥಳಾಂತರಗೊಂಡಿದ್ದಾರೆ ಎಂದು ಸುಳ್ಳು ಮಾಹಿತಿ ನೀಡಿ, ಒಟ್ಟು 778 ಮತದಾರರ ಹೆಸರುಗಳನ್ನು ಅಳಿಸಲು ಫಾರ್ಮ್–7 ಅರ್ಜಿಗಳನ್ನು ಸಲ್ಲಿಸಿದ್ದಾರೆ ಎಂದು ಅನೂಪ್ ಅಯ್ಯರ್ ಆರೋಪಿಸಿದ್ದಾರೆ.

ಅವರು ದೂರಿನಲ್ಲಿ ವಿವರಿಸಿರುವಂತೆ, ವಾರ್ಡ್ ನಂ.64ರಲ್ಲಿರುವ ಮತಗಟ್ಟೆ ಸಂಖ್ಯೆ 157ರಲ್ಲಿ 122, ಮತಗಟ್ಟೆ 155ರಲ್ಲಿ 233, ಮತಗಟ್ಟೆ 156ರಲ್ಲಿ 28, ಮತಗಟ್ಟೆ 158ರಲ್ಲಿ 5, ಮತಗಟ್ಟೆ 154ರಲ್ಲಿ 47, ಮತಗಟ್ಟೆ 205ರಲ್ಲಿ 171, ಮತಗಟ್ಟೆ 203ರಲ್ಲಿ 88 ಹಾಗೂ ಮತಗಟ್ಟೆ 153ರಲ್ಲಿ 14 ಎಲ್ಲ ಸೇರಿ ಒಟ್ಟು 778 ಮತದಾರರ ವಿರುದ್ಧ ಫಾರ್ಮ್–7 ಅರ್ಜಿಗಳನ್ನು ಆರೋಪಿಗಳು ಸಲ್ಲಿಸಿದ್ದಾರೆ.

# ವಿಜಯಪುರ ಎಸ್‌ಐಆರ್ ವಿವಾದ: ವಿಜಯಪುರದಲ್ಲಿ ಬದುಕಿರುವವರನ್ನೇ 'ಮೃತ' ಎಂದ ಯತ್ನಾಳ್; ಶಾಸಕ ಯತ್ನಾಳ್ ವಿರುದ್ಧ ಕ್ರಮಕ್ಕೆ ಬದುಕಿರುವ ಮತದಾರರ ಆಗ್ರಹ

ವಿಜಯಪುರ, ಅ.3– ರಾಜ್ಯದಲ್ಲಿ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಗೊಂದಲಗಳು ಉದ್ಭವಿಸಿದ್ದು, ಎಸ್‌ಐರ್ ವೇಳೆ ಚುನಾವಣಾ ಆಯೋಗದ ಫಾರ್ಮ್–7 ದುರ್ಬಳಕೆ ಆರೋಪ ಕೇಳಿಬಂದಿದೆ.

ಇದೇ ವಿಚಾರ ಬಿಜೆಪಿ ಹಾಗೂ ಕಾಂಗ್ರೆಸ್ ನಾಯಕರ ನಡುವೆ ಆರೋಪ ಪ್ರತ್ಯಾರೋಪಗಳಿಗೆ ಕಾರಣವಾಗಿದೆ. ಇದರ ಮಧ್ಯೆ ವಿಜಯಪುರಲ್ಲಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ಬದುಕಿರುವ ವ್ಯಕ್ತಿಗಳ ಮರಣ ಪತ್ರ ಪ್ರದರ್ಶಿಸಿ ಪೇಚಿಗೆ ಸಿಲುಕಿದ್ದಾರೆ. ಹೌದು ವಿಜಯಪುರದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ವಿವಾದ ತಾರಕ್ಕೇರಿದೆ. ಮೃತಪಟ್ಟವರ ಹೆಸರು ಮತದಾರರ ಪಟ್ಟಿಯಲ್ಲಿದೆ ಎಂದು ಯತ್ನಾಳ್ ಆರೋಪಿಸಿದ್ದರು. ಸೆ.30ರಂದು 8 ಮತದಾರರ ಮರಣ ಪ್ರಮಾಣ ಪತ್ರ ಪ್ರದರ್ಶಿಸಿ ಶಾಸಕರು ಆರೋಪ ಮಾಡಿದ್ದರು.

ಆದರೆ, ಇದೀಗ ಆ ಎಂಟು ಮತದಾರರು ಪ್ರತ್ಯಕ್ಷರಾಗಿದ್ದು, ನಾವು ಮೃತಪಟ್ಟಿಲ್ಲ, ಜೀವಂತವಾಗಿದ್ದೇವೆ ಎಂದು ಜಿಲ್ಲಾಧಿಕಾರಿ ಮುಂದೆ ಹಾಜರಾಗಿದ್ದಾರೆ. ನಮ್ಮ ಡೆತ್ ಸರ್ಟಿಫಿಕೇಟ್ ಶಾಸಕ ಯತ್ನಾಳ್‌ಗೆ ಹೇಗೆ ಸಿಕ್ಕಿತು? ಮತದಾರರ ಪಟ್ಟಿಯಿಂದ ಹೆಸರು ತೆಗೆಸಲು ಹುನ್ನಾರ ನಡೆದಿದೆ. ಜೀವಂತ ವ್ಯಕ್ತಿಗಳ ಮರಣ ಪತ್ರ ನೀಡಿದವರ ವಿರುದ್ಧ ಕ್ರಮಕ್ಕೆ ಆಗ್ರಹಿಸಿದರು.

ಪಾಲಿಕೆಯಿಂದ ನೀಡಿದ ಮರಣ ಪ್ರಮಾಣ ಪತ್ರ ನಕಲಿಯೋ? ಅಸಲಿಯೋ? ಪಾಲಿಕೆ ಸಿಬ್ಬಂದಿಯಿಂದಲೇ ಗೋಲ್ಮಾಲ್ ನಡೆದಿದೆಯೇ ಎಂಬ ಅನುಮಾನ ವ್ಯಕ್ತವಾಗಿದೆ. ಜೀವಂತ ವ್ಯಕ್ತಿಗಳ ಡೆತ್ ಸರ್ಟಿಫಿಕೇಟ್ ನೀಡಿದವರ ಪತ್ತೆಗೆ ಜಿಲ್ಲಾಧಿಕಾರಿಗಳು ಆಗ್ರಹಿಸಿದ್ದಾರೆ.

# D.S.V. Foundation And
# PITHAMAHA PRAKASHANA
# BANGALORE




WRITER, ORGANISER, JOURNALIST

## Shri. D.S. Veeraiah's
## Two Books Lanching of

**Nation's Healer**
(English) &
**ರಾಷ್ಟ್ರ ಚಿಕಿತ್ಸಕ ಅಂಬೇಡ್ಕರ್**
(ಕನ್ನಡ)



## Dignitaries & Guests



**Shri. Thaawarchand Gehelot**
Hon'ble Governor of Karnataka



**Shri. Vishwanath Rajendra Arlekar**
Hon'ble Governor TamilNadu & Keralam



**Shri. B.S.Yediyurappa**
Former Chief Minister of Karnataka



**Shri. H.D. Kumaraswamy**
Union Minister Coal, Heavy Industries & Former Chief Minister of Karnataka



**Dr. G. Parameshwar**
Deputy Chief Minister of Karnataka



**Shri Vishweshwara Bhat**
Editor Vishwavani



**Shri. D.S. Veeraiah**
Writer

(Introductory Speech)



**Shri. Mallepuram G. Venkatesh**
Former V.C. Sanskrit University

**Date: On Monday 5-10-2026 : Time: 4.00 P.M.**
**Venue: Ravindra Kala kshethra Bangalore**
**Warm Welcome**